ಸಂಪುಟ: 14 Volume | ಸಂಚಿಕೆ: 40 Issue | ಪುಟಗಳು 08 Pages | ಶುಕ್ರವಾರ 15 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ನಿಮ್ಮಷ್ಟಕ್ಕೆ ನೀವೇ ಬೆಳೆಯಬೇಕು.ಅದಕ್ಕಾಗಿ ಬೇರೊಬ್ಬ ಶಿಕ್ಷಕನಿರುವುದಿಲ್ಲ.
–ಸ್ವಾಮಿ ವಿವೇಕಾನಂದ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮೈಸೂರಿನ ನಗರ ಪ್ರದಕ್ಷಿಣೆ ನಡೆಸಿ ನಾನಾ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಗತಿಯಲ್ಲಿರುವ ಅಭಿವೃದ್ಧಿ ಕಾರ್ಯಗಳ ಪರಿವೀಕ್ಷಣೆ ನಡೆಸಿದರು. ಇದರ ಭಾಗವಾಗಿ ಮಾನಂದವಾಡಿ ರಸ್ತೆಯ ಎನ್.ಐ ಕಾಲೇಜಿನ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿ ವೀಕ್ಷಿಸಿದರು.

## ಭವಿಷ್ಯದೊಂದಿಗೆ ಆಟವಾಡುತ್ತಿರುವ ಕೇಂದ್ರ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷೆ ರದ್ದತಿಯ ಘಟನೆ ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ವಿಶ್ವಾಸವನ್ನೇ ಕುಸಿತಗೊಳಿಸಿದ್ದು, ಇದು ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ನೀಡಿರುವ ದೊಡ್ಡ ದ್ರೋಹವಾಗಿದೆ ಎಂದು ಬೀದರ ಲೋಕಸಭಾ ಸದಸ್ಯರಾದ ಸಾಗರ ಖಂಡ್ರೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ದೇಶದಾದ್ಯಂತ ಸುಮಾರು 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣ ಪಡೆಯುವ ಕನಸಿನೊಂದಿಗೆ ನೀಟ್ ಪರೀಕ್ಷೆಗೆ ತಯಾರಿ ನಡೆಸಿದ್ದರು. ಕರ್ನಾಟಕದಲ್ಲಿಯೇ ಸುಮಾರು 1 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಹಗಲು–ರಾತ್ರಿ ಶ್ರಮಪಟ್ಟು ಪರೀಕ್ಷೆಗೆ ಸಿದ್ಧರಾಗಿದ್ದರು. ವಿದ್ಯಾರ್ಥಿಗಳ ಜೊತೆಗೆ ಪೋಷಕರು ಕೂಡ ತಮ್ಮ ಮಕ್ಕಳ ಭವಿಷ್ಯಕ್ಕಾಗಿ ಅನೇಕ ತ್ಯಾಗಗಳನ್ನು ಮಾಡಿದ್ದಾರೆ. ಆದರೆ, ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ಸುರಕ್ಷಿತವಾಗಿ ನಡೆಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಟೀಕಿಸಿದರು.

ಪ್ರತಿ ವರ್ಷವೂ ನೀಟ್ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮಗಳು ಹಾಗೂ ಅವ್ಯವಸ್ಥೆಗಳು ನಡೆಯುತ್ತಿದ್ದು, ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ವಿದ್ಯಾರ್ಥಿಗಳ ಪರಿಶ್ರಮ, ಪೋಷಕರ ಕನಸುಗಳು ಮತ್ತು ದೇಶದ ಶಿಕ್ಷಣ ವ್ಯವಸ್ಥೆಯ ಗೌರವವನ್ನು ರಕ್ಷಿಸುವಲ್ಲಿ ಕೇಂದ್ರ ಸರ್ಕಾರ ನಿರಂತರವಾಗಿ ವಿಫಲವಾಗುತ್ತಿದೆ ಎಂದು ಹೇಳಿದರು. ಒಂದು ಕಡೆ ವಿದ್ಯಾರ್ಥಿಗಳು ವರ್ಷಪೂರ್ತಿ ಶ್ರಮಪಟ್ಟು ಪರೀಕ್ಷೆಗೆ ಸಿದ್ಧರಾಗುತ್ತಿದ್ದರೆ, ಮತ್ತೊಂದು ಕಡೆ ಸರ್ಕಾರದ ನಿರ್ಲಕ್ಷ್ಯ ಮತ್ತು ಅವ್ಯವಸ್ಥೆಯಿಂದ ಅವರ ಕನಸುಗಳು ಭಗ್ನಗೊಳ್ಳುತ್ತಿವೆ ಎಂದು ಸಾಗರ್ ಖಂಡ್ರೆ ಆರೋಪಿಸಿದರು.

## ಒಕ್ಕಲಿಗರ ಸಂಘದ ವಾಣಿಜ್ಯ ಸಂಕಿರಣಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಜಿಲ್ಲೆಯ ಒಕ್ಕಲಿಗರ ಸಂಘದ ನೂತನ ವಾಣಿಜ್ಯ ಕಟ್ಟಡ ಉದ್ಘಾಟನಾ ಸಮಾರಂಭವು ರಾಜಕೀಯ ವೈಮನಸ್ಯಕ್ಕೆ ತೆರೆ ಎಳೆದ ಅಪರೂಪದ ಕ್ಷಣಕ್ಕೆ ಸಾಕ್ಷಿಯಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಹಾಗೂ ಸಂಸದ ಡಾ. ಕೆ. ಸುಧಾಕರ್ ಇಬ್ಬರೂ ಒಂದೇ ವೇದಿಕೆಯಲ್ಲಿ ಶಾಂತಿ ಮತ್ತು ಸಹಕಾರದ ಸಂದೇಶ ಸಾರಿದರು.

ನಗರದ ಬಿಬಿ ರಸ್ತೆಯಲ್ಲಿರುವ ಒಕ್ಕಲಿಗರ ಕಲ್ಯಾಣ ಮಂಟಪದ ಪಕ್ಕ ನಿರ್ಮಿತವಾದ ಸುಮಾರು ₹7.5 ಕೋಟಿ ವೆಚ್ಚದ ಬೃಹತ್ ವಾಣಿಜ್ಯ ಕಟ್ಟಡವನ್ನು ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮಿಜಿ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಸಚಿವ ಎಂ.ಸಿ. ಸುಧಾಕರ್ ಮಾತನಾಡಿ, "ರಾಜ್ಯದಲ್ಲೇ ಅತ್ಯುತ್ತಮ ಸಂಘವೆಂಬ ಖ್ಯಾತಿಗೆ ಪಾತ್ರವಾಗಿರುವ



ಚಿಕ್ಕಬಳ್ಳಾಪುರ ಒಕ್ಕಲಿಗರ ಸಂಘದ ಅಭಿವೃದ್ಧಿಯಲ್ಲಿ ಅಧ್ಯಕ್ಷ ಕೇಶವರೆಡ್ಡಿಯವರ ಪಾತ್ರ ಮಹತ್ವದ್ದಾಗಿದೆ. ಅವರು ಪಕ್ಷಾತೀತವಾಗಿ ಎಲ್ಲರನ್ನು ಒಗ್ಗೂಡಿಸಿ ಸಂಘದ ಆಸ್ತಿಪಾಸ್ತಿಯನ್ನು ಉಳಿಸಿ ಬೆಳೆಸಿದ್ದಾರೆ ಎಂದರು. ಸಂಸದ ಡಾ. ಕೆ. ಸುಧಾಕರ್ ಮಾತನಾಡಿ, ಒಕ್ಕಲಿಗರ ಸಮುದಾಯ ನಾಯಕತ್ವಗುಣ ಹೊಂದಿದ ಸಮುದಾಯ. 7.5 ಕೋಟಿ ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಮಾಡಿದ್ದರೂ ಒಂದು ರೂಪಾಯಿ ಸಾಲ ಪಡೆಯದೆ ಈ ಕಾರ್ಯ ಪೂರ್ಣಗೊಳಿಸಿರುವುದು ಸಂಘದ ಪದಾಧಿಕಾರಿಗಳ ಬದ್ಧತೆಯ ಸಂಕೇತ" ಎಂದು ಪ್ರಶಂಸಿಸಿದರು.

## ತೊಗರಿ ಖರೀದಿ ಕೇಂದ್ರ ಜೂನ್ 10ರವರೆಗೆ ಮುಂದುವರೆಸಲು ಆಗ್ರಹ



**ವಿಜಯಪುರ:** ಹಲವಾರು ಗೊಂದಲದಿಂದ, ಚೀಲ ಸಿಗದೇ, ಸೈಟ್ ಸಮಸ್ಯೆ, ಸರ್ವರ ಸಮಸ್ಯೆ ಎಂದು ನೆಪ ಹೇಳುತ್ತಾ ಜಿಲ್ಲೆಯಲ್ಲಿ ಹಲವಾರು ರೈತರು ತೊಗರಿ ಮಾರಾಟ ಮಾಡದೇ ಇಟ್ಟು–ಕೊಂಡಿದ್ದಾರೆ, ಈಗ ಅವಧಿ ಮುಗಿಯಿತು ಎಂದು ಹೇಳುತ್ತಾ ಇದ್ದಾರೆ, ಕೂಡಲೇ ಜಿಲ್ಲಾಧಿಕಾರಿಗಳು ಜೂನ 10 ರವೆಗೆ ತೊಗರಿ ಖರೀಧಿ ಕೇಂದ್ರವನ್ನು ಯಾವುದೇ ಸಮಸ್ಯೆ ಇಲ್ಲದ ಹಾಗೆ ಖರೀಧಿ ಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅವರು ಪತ್ರಿಕೆ ಮೂಲಕ ಆಗ್ರಹ ಮಾಡಿದರು.



**ಬೀದರ್: ಬೀದರ ಜಿಲ್ಲೆಯ ಹುಮನಾಬಾದ್ ಪಟ್ಟಣದ ಮಾಣಿಕ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿ ಅಕ್ಷಿತಾ ಗುಂಡಪ್ಪ ಮಲ್ಕಪುರ ಅವರು ರಾಜ್ಯ ಮಟ್ಟದ ಈಜು ಸ್ಪರ್ಧೆಯಲ್ಲಿ ತೃತೀಯ ಬಹುಮಾನ ಪಡೆದಿದ್ದಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಸೇರಿದಂತೆ ಇತರರು ಉಪಸ್ಥಿತರಿದ್ದರು.**

## ಸರ್ಕಾರಕ್ಕೆ ದಿಢೀರ್ ಜ್ಞಾನೋದಯ, ಟೀಕೆ



**ಬೆಂಗಳೂರು:** ದಾವಣಗೆರೆ ಉಪ ಚುನಾವಣೆಯ ಫಲಿತಾಂಶ ಹೊರಬಂದ ನಂತರ ಕಾಂಗ್ರೆಸ್ ಪಕ್ಷಕ್ಕೆ ದಿಢೀರ್ ನಾನು ಜ್ಞಾನೋದಯವಾಗಿ ವಿವಾದಿತ ಹಿಜಾಬ್ ವಿಷಯವನ್ನು ಮತ್ತೆ ಮುನ್ನೆಲೆಗೆ ತಂದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.

ಜೆಡಿಎಸ್ ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು; ಹಿಜಾಬ್ ಬಗ್ಗೆ ನಾನು ಅಸೆಂಬ್ಲಿಯಲ್ಲಿ ಹಿಂದೆಯೇ ಚರ್ಚೆ ಮಾಡಿದ್ದೇನೆ. ವಿಸ್ತೃತವಾಗಿ ಮಾತನಾಡಿದ್ದೇನೆ. ನಾನು ಏನು ಹೇಳಿದ್ದೇನೆ ಎಂಬುದು ಎಲ್ಲರಿಗೂ ತಿಳಿದಿದೆ. ಹೊಸದಾಗಿ ಹೇಳುವುದು ಏನು ಇಲ್ಲ ಎಂದರು.

# ಹಿಜಾಬ್ ಜಾರಿ, ಕೇಸರಿ ಕಿಡಿ

## 2022ರಲ್ಲಿ ಬಿಜೆಪಿ ಸರ್ಕಾರ ಹೊರಡಿಸಿದ್ದ ಆದೇಶವನ್ನ ಅಧಿಕೃತವಾಗಿ ಹಿಂಪಡೆದ ಸರ್ಕಾರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಎರಡು ವರ್ಷಗಳ ಹಿಂದೆ ಇಡೀ ದೇಶದ ಗಮನ ಸೆಳೆದಿದ್ದ ಹಿಜಾಬ್ ವಿವಾದ ಮತ್ತೆ ಚರ್ಚೆಗೆ ಗ್ರಾಸವಾಗಿದೆ. ಹಿಜಾಬ್ ಧರಿಸಲು ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ಕೊಟ್ಟಿದೆ. ಇದು ಕೇಸರಿಪಡೆಯನ್ನು ಕೆರಳಿಸಿದೆ. ರಾಜ್ಯದ ಎಲ್ಲಾ ಸರ್ಕಾರಿ ಶಾಲೆ ಮತ್ತು ಪಿಯು ಕಾಲೇಜುಗಳಲ್ಲಿ ಹಿಜಾಬ್ ಧರಿಸುವುದನ್ನ ನಿಷೇಧಿಸಿ 2022ರಲ್ಲಿ ಬಿಜೆಪಿ ಸರ್ಕಾರ ಹೊರಡಿಸಿದ್ದ ಆ ಆದೇಶವನ್ನ ಈಗ ಸಿದ್ದರಾಮಯ್ಯ ಸರ್ಕಾರ ಅಧಿಕೃತವಾಗಿ ಹಿಂಪಡೆದಿದೆ. ಇದು ರಾಜ್ಯದಲ್ಲಿ ಮತ್ತೊಂದು ಸುತ್ತಿನ ಧರ್ಮ ದಂಗಲ್‌ಗೆ ಕಾರಣವಾಗಲಿದೆ ಎಂಬ ಆತಂಕ ಶುರುವಾಗಿದೆ

**ಸಿಎಂ ದ್ವಿಮುಖ ನೀತಿ:** ಸಿದ್ದರಾಮಯ್ಯ ಮುಸ್ಲಿಮರಿಗೆ ಭರಪೂರ ಅವಕಾಶ ನೀಡುತ್ತಾರೆ, ಹಿಂದೂಗಳನ್ನು ಕಡೆಗಣಿಸ್ತಾರೆ, ಸಿಎಂಗೆ ಜನಿವಾರ ಕಂಡ್ರೆ ಆಗಲ್ಲ ಎಂದು ಪ್ರತಿಪಕ್ಷ ನಾಯಕ ಅಶೋಕ್ ಟೀಕಿಸಿದ್ದಾರೆ. ಶಾಲೆಗಳಲ್ಲಿ ಹಿಜಾಬ್ ಧರಿಸಲು ಅವಕಾಶ ನೀಡಿದ ಸರ್ಕಾರದ ಆದೇಶವನ್ನು ಖಂಡಿಸಿದ್ದಾರೆ.

**ಹಿಂದೂಗಳ ಕಡೆಗಣನೆ:** ಸಿದ್ದರಾಮಯ್ಯನವರು ಹಿಂದೂಗಳನ್ನ ಕಡೆಗಣಿಸ್ತಾರೆ, ಹಿಂದೂಗಳಿಗೆ ಅವಮಾನ ಮಾಡ್ತಾರೆ. ಜನಿವಾರ ಕಂಡ್ರೆ ಆಗಲ್ಲ, ಬೊಟ್ಟು ಇಟ್ಟುಕೊಂಡರೆ ಆಗಲ್ಲ, ದೇವಸ್ಥಾನಕ್ಕೆ ಹೋದರೆ ಆಗಲ್ಲ. ಆದರೆ ಮುಲ್ಲಾಗಳ ಮೇಲೆ ಬಹಳ ಪ್ರೀತಿ ಎಂದು ಆಕ್ರೋಶ ಹೊರಹಾಕಿದ್ದಾರೆ.









### ರಾಷ್ಟ್ರ ಮಟ್ಟದ ನ್ಯೂಸ್

ಬಿಜೆಪಿ ಸರ್ಕಾರದ ಅವಧಿಯಲ್ಲಿ, ಉಡುಪಿಯ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಹಿಜಾಬ್ ವಿವಾದ ಭುಗಿಲೆದ್ದಿತ್ತು. ಇದು ರಾಷ್ಟ್ರವ್ಯಾಪಿ ಸುದ್ದಿಯಾಗಿತ್ತು. ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಆದೇಶವೊಂದನ್ನು ಹೊರಡಿಸಿತ್ತು. ಅದರ ಭಾಗವಾಗಿ ಸಮವಸ್ತ್ರವನ್ನೇ ಕಡ್ಡಾಯವಾಗಿ ಧರಿಸಬೇಕು ಎಂದು ಆದೇಶದಲ್ಲಿ ಸೂಚಿಸಿತ್ತು.

### ಕೇಸರಿ ಶಾಲಿನ ಲೈಸೆನ್ಸ್

ಬಿಜೆಪಿ ಕಚೇರಿಯಲ್ಲಿ ವಿತರಿಸುವ ಕೇಸರಿ ಶಾಲು ಎಲ್ಲಾ ಅತ್ಯಾಚಾರ, ಅನಾಚಾರಗಳಿಗೂ ಲೈಸೆನ್ಸ್ ಇದ್ದಹಾಗೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಬಿಜೆಪಿಯ ಕೊಡುಗೆ ಇಲ್ಲದೆ ದೇಶದಲ್ಲಿ ಯಾವ ಹಗರಣಗಳೂ ಪೂರ್ಣಗೊಳ್ಳುವುದಿಲ್ಲಎಂದು ತಿರುಗೇಟು ನೀಡಿದ್ದಾರೆ.

### 2028ರಲ್ಲಿ ತಕ್ಕ ಪಾಠ

ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಎಲ್ಲಾ ಶಾಸಕರಿಗೆ ಹಿಂದೂಗಳು ತಕ್ಕ ಪಾಠ ಕಲಿಸ್ತಾರೆ. ಇದು ಹಿಂದೂ ವಿರೋಧಿ ಸರ್ಕಾರ, ಹಿಂದೂಗಳಿಗೆ ದ್ರೋಹ, ವಂಚನೆ ಮಾಡ್ತಾ ಇದ್ದಾರೆ. 800–900 ಕೋಟಿ ಅನುದಾನವನ್ನು ಮುಸ್ಲಿಮರಿಗೆ ಕೊಟ್ಟರು. ಈ ರೀತಿ ತಾರತಮ್ಯ ಮಾಡುತ್ತಿರುವ ಸಿಎಂ ಓಟಿಗೋಸ್ಕರ ಏನೂ ಬೇಕಾದರೂ ಮಾಡಲು ಸಿದ್ಧ ಅನ್ನೋದನ್ನ ತೋರಿಸ್ತಾ ಇದ್ದಾರೆ ಎಂದಿದೆ ಬಿಜೆಪಿ.

### ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದು..?

ಪ್ರಾಥಮಿಕ ತರಗತಿಯಿಂದ 12ನೇ ತರಗತಿಯವರೆಗೆ ಜನಿವಾರ, ಹಿಜಾಬ್, ಉಡುದಾರ, ರುದ್ರಾಕ್ಷಿ ಮುಂತಾದ ಸಾಂಪ್ರದಾಯಿಕವಾಗಿ ಅನುಸರಿಸುವ ಧಾರ್ಮಿಕ ಸಂಕೇತಗಳನ್ನು ಧರಿಸಬಹುದು. ಹೊಸದಾಗಿ ಏನನ್ನೂ ಮಾಡುವಂತಿಲ್ಲ. ಶಿಕ್ಷಣ ವ್ಯವಸ್ಥೆಯಲ್ಲಿ ಸರ್ವ ಧರ್ಮಕ್ಕೂ ಸಮಾನ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆ, ಅಧಿಕಾರಿಗಳು ಜಾಗೃತರಾಗಿ ಕಾರ್ಯನಿರ್ವಹಿಸಿ: ಸಚಿವ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯ 38 ಗ್ರಾಮ ಪಂಚಾಯತಿಯ 68 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು 19 ಕಡೆಗಳಲ್ಲಿ ಟ್ಯಾಂಕರನಿಂದ ಹಾಗೂ 59 ಕಡೆಗಳಲ್ಲಿ ಬಾಡಿಗೆ ಬೋರವೆಲ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಇಂದಿಲ್ಲಿ ತಿಳಿಸಿದರು.



ಅವರು ಗುರುವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕುಡಿಯುವ ನೀರಿನ ಪರಿಶೀಲನಾ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮುಂಗಾರು ಹಂಗಾಮು ಆರಂಭಗೊಳ್ಳುವ ತನಕ ಜೂನ್.15 ರವರೆಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಜಿಲ್ಲೆಗೆ 4 ಕೋಟಿ ರು ಬಿಡುಗಡೆಯಾಗಿದೆ. ಔರಾದ್ ತಾಲೂಕಿನ 22 ಗ್ರಾಮಗಳಲ್ಲಿ ಹಾಗೂ ಭಾಲ್ಕಿ ತಾಲೂಕಿನ 18 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದೆ ಎಂದು ತಿಳಿದು ಬಂದಿದೆ. ಜಿಲ್ಲೆಯ ಯಾವುದೇ ನಗರ ಪ್ರದೇಶದಲ್ಲಿ ನೀರಿನ ಸಮಸ್ಯೆ ಇಲ್ಲ ಎಂದರು.

ಕಾರಂಜಾ ಜಲಾಶಯದಲ್ಲಿ ಸಧ್ಯ 5 ಟಿಎಂಸಿ ನೀರು ಸಂಗ್ರಹ ಇದೆ ಹೀಗಾಗಿ ನಗರ ಪ್ರದೇಶದಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಬರದಂತೆ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ. ಮುಂದಿನ 20 ದಿನಗಳಲ್ಲಿ ಅಥವಾ ಜೂನ 7ರ ವರೆಗೆ ಮುಂಗಾರು ಮಳೆ ಬರುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹೀಗಾಗಿ ಅಧಿಕಾರಿಗಳು ಜೂನ್ 15ರ ವರೆಗೆ ಕುಡಿಯುವ ನೀರಿನ ಕುರಿತು ಯಾವುದೇ ಸಮಸ್ಯೆ ಆಗದಂತೆ ಎಲ್ಲರು ಜಾಗೃತರಾಗಿರಬೇಕು ಎಂದರು.

# ನಿರ್ಣಾ ಗ್ರಾಪಂ ಕಣಾ, ಸೌಲಭ್ಯಗಳಿಲ್ಲದೆ ಜನ ಹೈರಾಣ..!

• ರಾಜ್‌ಕುಮಾರ್ ಹಡಪದ, ಚಿಟಗುಪ್ಪ

ತಾಲೂಕಿನ ನಿರ್ಣಾ ಗ್ರಾಮಪಂಚಾಯಿತಿಯಲ್ಲಿ ಮೂಲಭೂತ ಸೌಲಭ್ಯಗಳೇ ಕಣ್ಮರೆಯಾಗಿವೆ. ನಿರ್ಣಾವಾಡಿ ಗ್ರಾ.ಪಂ.ವ್ಯಾಪ್ತಿಯಲ್ಲಿ 700 ಓಟರ್‌ಗಳಿದ್ದು, 750 ಜನ ಸಂಖ್ಯೆ ಇದೆ. ನಿರ್ಣಾ ಗ್ರಾ.ಪಂ.ವ್ಯಾಪ್ತಿಯಲ್ಲಿ 11 ಸಾವಿರ ಮತದಾರರಿದ್ದಾರೆ. 12 ಸಾವಿರ ಜನಸಂಖ್ಯೆ ಇದೆ. ಆದರೆ ಸರ್ಕಾರಿ ಸೌಲಭ್ಯಗಳಿಲ್ಲದೆ, ಸೊಳ್ಳೆ, ಕಾಲರಾ, ಟೈಫಾಯಿಡ್ ಜ್ವರ ಜೊತೆಗೆ ಶುಚಿತ್ವದ ನೀರಿನ ಸಮಸ್ಯೆಗಳಿಂದಾಗಿ ಜನತೆ ಹೈರಾಣಾಗಿದ್ದಾರೆ. ಬೆಂಗಳೂರಿನಿಂದ ಬೀದರ್ ಜಿಲ್ಲೆಯವರೆಗೆ ಸರ್ಕಾರಿ ಸೌಲಭ್ಯಗಳು ತಲುಪುವುದರೊಳಗೆ ಎಲ್ಲಾ ಮಂಗಮಾಯವಾಗಿವೆ. ಸ್ವಚ್ಚತೆಯೇ ಮರೀಚಿಕೆ ಆಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

**ಗ್ರಾಮಸ್ಥರ ಅಸಮಾಧಾನ:** ಗ್ರಾಮದ ಪ್ರತಿಯೊಂದು ಓಣಿಯಲ್ಲೂ ಸ್ವಚ್ಚತೆ ಇಲ್ಲದೆ ಗಬ್ಬು ನಾರುತ್ತಿದೆ. ಹಲವಾರು ಬಾರಿ ಗ್ರಾ.ಪಂ.ಗೆ ಹೋಗಿ ಅಧಿಕಾರಿಗಳಿಗೆ ದೂರು ನೀಡಿದರೂ ಪ್ರಯೋಜನೆ ಆಗುತ್ತಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸುತ್ತಾರೆ.

**ಎಲ್ಲೆಲ್ಲೂ ಸಾಂಕ್ರಾಮಿಕ ರೋಗ ಭೀತಿ..!**



**ಪಂಚಾಯಿತಿ ಫಜೀತಿ**

ನಮ್ಮ ಮನೆಯಲ್ಲಿ ವೃದ್ಧರು, ಸಣ್ಣ ಸಣ್ಣ ಮಕ್ಕಳಿದ್ದಾರೆ. ಗೊಬ್ಬು ನಾರುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳು ಹರಡುತ್ತಿವೆ. ನಾವುಗಳು ಜೀವದ ಭಯದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಜನತೆ ಪತ್ರಿಕೆಗೆ ತಿಳಿಸಿದ್ದಾರೆ.

### ಮುಖ್ಯಮಂತ್ರಿಗಳೇ, ಕರೆಗೂ ಓಗೊಡದ ಎಂಎಲ್ಲೆ

ಚುನಾವಣೆ ಬಂದರೆ ಸಾಕು, ಪ್ರತಿಯೊಂದು ಹಾದಿ ಬೀದಿಗೂ ಕೈ ಮುಗಿದು, ಹಿರಿಯ ಕಾಲಿಗೆ ಬೀಳುತ್ತಾ ಓಲಾಡುವ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರು ಕ್ಷೇತ್ರದ ಬಗ್ಗೆ ಸಮೀಕ್ಷೆ ನಡೆಸಿ ಪ್ರತಿಕ್ರಿಯೆ ಕೇಳಲು ಕರೆ ಮಾಡಿದರೂ ಕ್ಯಾರೆ ಅನ್ನಲಿಲ್ಲ. ಪತ್ರಕರ್ತರ ಕರೆಯನ್ನೇ ಸ್ವೀಕರಿಸದ ಶಾಸಕರು, ಕ್ಷೇತ್ರ ಜನರ ಸಮಸ್ಯೆಗಳನ್ನು ಹೇಗೆ ಪರಿಹರಿಸುತ್ತಾರೆ ಮುಖ್ಯಮಂತ್ರಿಗಳೇ.. ನೀವೇ ಉತ್ತರಿಸಿ..!

**ಈ ಗ್ರಾಪಂ ವ್ಯಾಪ್ತಿಯಲ್ಲಿ ಸರ್ಕಾರಿ ಸೌಲಭ್ಯಗಳೇ ಕಣ್ಮರೆ**

### 10 ಲಕ್ಷ 70ಸಾವಿರ ರೂ.ತೆರಿಗೆ ಸಂಗ್ರಹ ಆದರೆ..!

2025–26ನೇ ಸಾಲಿನಲ್ಲಿ ಒಟ್ಟು 10 ಲಕ್ಷ 70ಸಾವಿರ ರೂ.ತೆರಿಗೆ ಸಂಗ್ರಹವಾಗಿದೆ ಎನ್ನುತ್ತಾರೆ ಗ್ರಾ.ಪಂ. ಅಧಿಕಾರಿ. ಆದರೆ ಮೂಲಭೂತ ಸೌಕರ್ಯಗಳು ಮಾತ್ರ ಇಲ್ಲ..! ಸಾರ್ವಜನಿಕ ಶೌಚಾಲಯಗಳಿವೆ. ಇಲ್ಲಿ ನೀರಿನ ವ್ಯವಸ್ಥೆ ಇಲ್ಲದೆ ಗಬ್ಬುನಾರುತ್ತಿದ್ದು, ಜನತೆ ಬಯಲಲ್ಲೇ ಶೌಚಕ್ಕೆ ಹೋಗುತ್ತಾರೆ. ಗ್ರಾಮದಲಿ ಒಟ್ಟು 450 ನೀರಿನ ನಳ ಇದೆ. ಕೇವಲ 100 ನಳಗಳು ಮಾತ್ರ ಚಾಲಿತದಲ್ಲಿವೆ. ರಸ್ತೆ, ಬೀದಿಗಳಲಿ ಸಿಸಿ ರಸ್ತೆ ಇಲ್ಲದೆ ಓಡಾಡುವುದಕ್ಕೇ ಹರಸಾಸಹ ಪಡಬೇಕಿದೆ.





2025–26ನೇ ಸಾಲಿನಿಂದ 15ನೇ ಹಣಕಾಸಿನ ಅನುದಾನ ಬಂದಿಲ್ಲ. ಅಭಿವೃದ್ಧಿಗೆ ಮಾಡಲು ಕಷ್ಟಯಾಗುತ್ತಿದೆ. ತೆರಿಗೆ ಹಣದಲ್ಲಿ ನೀರಿನ ವ್ಯವಸ್ಥೆ, ವಿದ್ಯುತ್, ಸಿಬ್ಬಂದಿಗಳ ವೇತನ ನೀಡಲಾಗುತ್ತಿದೆ.ಸಾಧ್ಯವಾದಷ್ಟು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.
–ಬಸವರಾಜ ಗುಗ್ಗರಿ, ಅಭಿವೃದ್ಧಿ ಅಧಿಕಾರಿ, ನಿರ್ಣಾ.

ಹಲವಾರು ಬಾರಿ ಅಧಿಕಾರಿಗಳಿಗೆ ತಿಳಿಸಿದರು ಸಹ ನಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ನಮ್ಮ ಮನೆಯ ಪಕ್ಕದಲ್ಲಿ ಚರಂಡಿ ತುಂಬಿ ಸಂಪೂರ್ಣ ಗಬ್ಬು ನಾರುತ್ತಿದೆ. ಇಲ್ಲಿಯವರೆಗೆ ಒಬ್ಬ ಅಧಿಕಾರಿ ಭೇಟಿ ನೀಡಿ ಸಮಸ್ಯೆ ಬಗೆಹರಿಸಿಲ್ಲ. ಸಾವಿರಾರು ರೂ.ಹಣ ತೆರಿಗೆ ಕಟ್ಟೇವಿ.ಆದರೂ ಮೂಲಭೂತ ಸೌಕರ್ಯ ಸಿಕ್ಕಿಲ್ಲ.
–ಮಹಮ್ಮದ್ ರೂಫ್, ಸ್ಥಳೀಯ ನಿವಾಸಿ

## ಕಾಂಗ್ರೆಸ್ ಸರ್ಕಾರ ಹಿಜಾಬ್ ವಿಷಯ ಮುನ್ನೆಲೆಗೆ ತಂದು ಮಕ್ಕಳಲ್ಲಿ ಮತೀಯ ವಿಷ ಬೀಜ ಬಿತ್ತುತ್ತಿದೆ: ಶಾಸಕ ಮಹೇಶ್ ಟೆಂಗಿನಕಾಯಿ

## ರೈತರ ಜೊತೆ ಹುಮನಾಬಾದ್ ವಿದ್ಯುತ್ ಇಲಾಖೆ ಸಹಕರಿಸಲಿ

ದೇಶದ ಆರ್ಥಿಕ ವ್ಯವಸ್ಥೆಯ ಬೆನ್ನೆಲುಬಾಗಿರುವ ರೈತರು ಇಂದು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಹವಾಮಾನ ವೈಪರೀತ್ಯ, ಬೆಳೆ ನಷ್ಟ, ಮಾರುಕಟ್ಟೆ ಸಮಸ್ಯೆಗಳ ನಡುವೆ ವಿದ್ಯುತ್ ಸಮಸ್ಯೆಯೂ ರೈತರ ಬದುಕಿಗೆ ದೊಡ್ಡ ಹೊರೆ ಆಗಿದೆ. ವಿಶೇಷವಾಗಿ ಹುಮನಾಬಾದ್ ಭಾಗದಲ್ಲಿ ರೈತರು ಕೃಷಿ ಚಟುವಟಿಕೆಗಳಿಗೆ ಸಮರ್ಪಕ ವಿದ್ಯುತ್ ಸಿಗದೇ ಸಂಕಷ್ಟ ಅನುಭವಿಸುತ್ತಿರುವುದು ವಿಷಾದನೀಯ.

### ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349



ಕೃಷಿ ಪಂಪ್‌ಸೆಟ್‌ಗಳಿಗೆ ಸಮಯಕ್ಕೆ ಸರಿಯಾಗಿ ವಿದ್ಯುತ್ ಪೂರೈಕೆ ಆಗದಿರುವುದು, ಪದೇ ಪದೇ ಟ್ರಾನ್ಸ್‌ಫಾರ್ಮರ್‌ಗಳು ಸುಡುವುದು, ದುರಸ್ತಿ ಕಾರ್ಯಗಳಲ್ಲಿ ವಿಳಂಬವಾಗುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ. ರಾತ್ರಿ ವೇಳೆ ಮಾತ್ರ ವಿದ್ಯುತ್ ನೀಡುವ ಪರಿಸ್ಥಿತಿಯಿಂದ ರೈತರು ನಿದ್ರೆ ಬಿಟ್ಟು ಹೊಲಗಳಲ್ಲಿ ಕಾಲ ಕಳೆಯಬೇಕಾಗಿದೆ. ಇದರಿಂದ ಆರೋಗ್ಯದ ಮೇಲೂ ದುಷ್ಪರಿಣಾಮ ಉಂಟಾಗುತ್ತಿದೆ.

ವಿದ್ಯುತ್ ಇಲಾಖೆ ರೈತರನ್ನು ಗ್ರಾಹಕರಂತೆ ಮಾತ್ರ ನೋಡದೆ, ಅನ್ನದಾತರಂತೆ ಗೌರವದಿಂದ ಕಾಣಬೇಕು. ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ ಅಗತ್ಯವಾಗಿದೆ. ಟ್ರಾನ್ಸ್‌ಫಾರ್ಮರ್ ದುರಸ್ತಿ, ಹೊಸ ಸಂಪರ್ಕ, ಬಿಲ್ ಸಮಸ್ಯೆ ಸೇರಿದಂತೆ ಪ್ರತಿಯೊಂದು ವಿಚಾರದಲ್ಲೂ ಅಧಿಕಾರಿಗಳು ಮಾನವೀಯತೆ ತೋರಬೇಕು.

ಸರ್ಕಾರವೂ ಕೃಷಿ ವಿದ್ಯುತ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಹಳೆಯ ವಿದ್ಯುತ್ ಲೈನ್‌ಗಳನ್ನು ಬದಲಾಯಿಸುವುದು, ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದು ಹಾಗೂ ನಿರಂತರ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡುವತ್ತ ಗಮನ ಹರಿಸಬೇಕು.

ರೈತರು ಉಳಿದರೆ ದೇಶ ಉಳಿಯುತ್ತದೆ ಎನ್ನುವುದು ಸತ್ಯ. ಆದ್ದರಿಂದ ಹುಮನಾಬಾದ್ ವಿದ್ಯುತ್ ಇಲಾಖೆ ರೈತರೊಂದಿಗೆ ಸಹಕಾರದ ಮನೋಭಾವದಿಂದ ನಡೆದುಕೊಂಡು ಅವರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಬೇಕು. ರೈತರ ಕಣ್ಣೀರಿನ ಮೇಲೆ ಯಾವುದೇ ವ್ಯವಸ್ಥೆ ಬೆಳೆಯಲು ಸಾಧ್ಯವಿಲ್ಲ ಎಂಬುದನ್ನು ಅಧಿಕಾರಿಗಳು ಅರಿತುಕೊಳ್ಳಬೇಕು.




ಮುಂಬೈನಲ್ಲಿರುವ ರಾಷ್ಟ್ರೀಯ ಷೇರು ವಿನಿಮಯ ಕೇಂದ್ರದಲ್ಲಿ ಗುರುವಾರ ನಡೆದ ಬಾಗ್ಮನೆ ಕೇಂದ್ರ ಕಚೇರಿಯ ಬೆಲ್ ರಿಂಗಿಂಗ್ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು. ಬಾಗ್ಮನೆ ಸಂಸ್ಥೆಗೆ ಶುಭ ಕೋರಿದರು.

## ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದ ಡಿಪ್ಲೋಮಾ ಕೋರ್ಸಿಗೆ ಅರ್ಜಿಗಳ ಆಹ್ವಾನ

**ಕಲಬುರಗಿ:** 2026–27ನೇ ಸಾಲಿನ ಶೈಕ್ಷಣಿಕ ಅವಧಿಗೆ ಮೂರು ವರ್ಷದ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ.) ಕೋರ್ಸ್ ಕಲಿಕೆಗಾಗಿ ಈ ಕೆಳಕಂಡ ಸಂಸ್ಥೆಗಳಲ್ಲಿ 39 ಜನ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ರಂತೆ ಶಿಷ್ಯವೇತನ ನೀಡಲಾಗುತ್ತದೆ. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುತ್ತದೆ.

**ಡಿಪ್ಲೋಮಾ ಕೋರ್ಸಿಗಾಗಿ ಲಭ್ಯವಿರುವ ಸಂಸ್ಥೆಗಳ ವಿವರ ಇಂತಿದೆ:** ಗದಗ–ಬೆಟಗೇರಿ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ–22 ಅಭ್ಯರ್ಥಿಗಳು, ತಮಿಳುನಾಡಿನ ಸೇಲಂದಲ್ಲಿನ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ–12 ಅಭ್ಯರ್ಥಿಗಳು, ಆಂಧ್ರಪ್ರದೇಶ ನೆಲ್ಲೂರು ಜಿಲ್ಲೆಯ ವೆಂಕಟಗಿರಿಯ ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ–03 ಅಭ್ಯರ್ಥಿಗಳು ಹಾಗೂ ಕೇರಳ ಕಣ್ಣೂರಿನ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ–02 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ. ಈ ಮೇಲ್ಕಂಡ ಸಂಸ್ಥೆಗಳಲ್ಲಿ ಒಟ್ಟು 39 ಅಭ್ಯರ್ಥಿಗಳನ್ನು ತರಬೇತಿ ನೀಡಲಾಗುತ್ತದೆ.

ನಿಗದಿತ ಅರ್ಜಿ ನಮೂನೆಯನ್ನು https://khtigadag.ac.in/AdmissionForm.pdf ಆನ್‌ಲೈನ್ ಲಿಂಕ್ ಮೂಲಕ ಡೌನ್‌ಲೊಡ್ ಮಾಡಿಕೊಂಡು ಭರ್ತಿ ಮಾಡಿ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ–582102" ವಿಳಾಸಕ್ಕೆ 2026ರ ಮೇ 30 ರೊಳಗಾಗಿ ಸಲ್ಲಿಸಬೇಕು. ಆಸಕ್ತಿಯುಳ್ಳ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ದೂರವಾಣಿ ಸಂಖ್ಯೆ–08372–259664, ಮೊಬೈಲ್ ಸಂಖ್ಯೆ: 9916143619 ಅಥವಾ ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು, ಕಚೇರಿ ದೂರವಾಣಿ ಸಂಖ್ಯೆ 08472–278629ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ನೀಟ್–ಯುಜಿ ಪರೀಕ್ಷೆಯ ಅಕ್ರಮಗಳ ಕುರಿತು ತೀವ್ರ ಆತಂಕ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ನೀಟ್–ಯುಜಿ 2026 ಪರೀಕ್ಷೆಯ ಗೌಪ್ಯತೆ ಮತ್ತು ವಿಶ್ವಾಸಾರ್ಹತೆ ಕುರಿತು ಉದ್ಭವಿಸಿರುವ ಗಂಭೀರ ಪ್ರಶ್ನೆಗಳು, ಆರೋಪಿತ ಅಕ್ರಮಗಳು ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಬಗ್ಗೆ ತೀವ್ರ ಆತಂಕ ವ್ಯಕ್ತಪಡಿಸಿದೆ.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಹಾಗೂ ತನಿಖಾ ಸಂಸ್ಥೆಗಳಿಂದ ಹೊರಬರುತ್ತಿರುವ ಮಾಹಿತಿಗಳು ದೇಶದ ಲಕ್ಷಾಂತರ ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆ ಕುರಿತು ಆತಂಕ ಮತ್ತು ಅನಿಶ್ಚಿತತೆಯನ್ನು ಉಂಟುಮಾಡಿವೆ.

ಪ್ರವೇಶ ಪರೀಕ್ಷೆಗಳ ವಿಶ್ವಾಸಾರ್ಹತೆಯೊಂದಿಗೆ ಯಾವುದೇ ರೀತಿಯ ತಾಳ್ಮೆ ಅಥವಾ ರಾಜಿ ಸಂಪೂರ್ಣ ಅಸ್ವೀಕಾರಾರ್ಹವಾಗಿದೆ. ಪರೀಕ್ಷೆಗೆ ಮುನ್ನ ಪ್ರಶ್ನೆಪತ್ರಿಕೆ ಅಥವಾ ಅದರ ಯಾವುದೇ ಭಾಗ ಕೆಲವು ವ್ಯಕ್ತಿಗಳ ಕೈಗೆ ತಲುಪಿದ್ದರೆ, ಅದು ಕೇವಲ ಪರೀಕ್ಷಾ ವ್ಯವಸ್ಥೆಯ ಮೇಲಿನ ದಾಳಿಯಷ್ಟೇ ಅಲ್ಲ, ವರ್ಷಪೂರ್ತಿ ಪರಿಶ್ರಮಪಟ್ಟು ತಯಾರಿ ನಡೆಸುವ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲಿನ ಅನ್ಯಾಯವೂ ಆಗಿದೆ.

ಈ ಸಂಪೂರ್ಣ ಪ್ರಕರಣದ ಕುರಿತು ಕೇಂದ್ರ ಸರ್ಕಾರವು ಕೇಂದ್ರ ತನಿಖಾ ಸಂಸ್ಥೆಗಳ ಮೂಲಕ ನ್ಯಾಯಸಮ್ಮತ, ನಿಷ್ಪಕ್ಷಪಾತ ಹಾಗೂ ನಿಗದಿತ ಅವಧಿಯೊಳಗಿನ ತನಿಖೆ ನಡೆಸಬೇಕು. ಪರೀಕ್ಷಾ ಮಾಫಿಯಾ ಸೇರಿದಂತೆ ಯಾವುದೇ ಹಂತದಲ್ಲಿ ಸಹಕಾರ ನೀಡಿರುವ ಎಲ್ಲ ಆರೋಪಿಗಳ ವಿರುದ್ಧ ಅತ್ಯಂತ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಎಬಿವಿಪಿ ಆಗ್ರಹಿಸಿದೆ.

ಇದೇ ವೇಳೆ, ತನಿಖೆ ಪೂರ್ಣಗೊಳ್ಳುವವರೆಗೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಸಂಪೂರ್ಣ ಪಾರದರ್ಶಕತೆಯನ್ನು ಕಾಪಾಡಿಕೊಂಡು ವಿದ್ಯಾರ್ಥಿಗಳು ಮತ್ತು ಪೋಷಕರ ಮುಂದೆ ವಾಸ್ತವಾಂಶಗಳನ್ನು ಸ್ಪಷ್ಟವಾಗಿ ಮಂಡಿಸಬೇಕು ಎಂದು ಒತ್ತಾಯಿಸಿದೆ.

ದೇಶದ ಲಕ್ಷಾಂತರ ವಿದ್ಯಾರ್ಥಿಗಳು ನೀಟ್‌ನಂತಹ ಪರೀಕ್ಷೆಗಳಿಗೆ ಹಲವು ವರ್ಷಗಳ ಪರಿಶ್ರಮ ಮತ್ತು ಸಮರ್ಪಣೆಯೊಂದಿಗೆ ಹಾಜರಾಗುತ್ತಾರೆ. ಇಂತಹ ಸಂದರ್ಭದಲ್ಲಿ ಯಾವುದೇ ರೀತಿಯ ಅಕ್ರಮಗಳು ಅವರ ಮನೋಬಲ ಮತ್ತು ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತವೆ. ಆದ್ದರಿಂದ ಈ ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಯಬೇಕು ಹಾಗೂ ತಪ್ಪಿತಸ್ಥರನ್ನು ಯಾವುದೇ ಪರಿಸ್ಥಿತಿಯಲ್ಲಿಯೂ ಬಿಡಬಾರದು ಎಂದು ಎಬಿವಿಪಿ ತಿಳಿಸಿದೆ.

ರಾಷ್ಟ್ರೀಯ ಮಟ್ಟದ ಪರೀಕ್ಷೆಗಳಲ್ಲಿ ತಾಂತ್ರಿಕ ಭದ್ರತೆ, ಪ್ರಶ್ನೆಪತ್ರಿಕೆಯ ಗೌಪ್ಯತೆ, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಣೆ ಹಾಗೂ ಸಂಸ್ಥಾತ್ಮಕ ಹೊಣೆಗಾರಿಕೆಯನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ. ಇದರಿಂದ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ತಡೆಯಬಹುದು ಎಂದು ಅಭಿಪ್ರಾಯಪಟ್ಟಿದೆ.

ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ರಕ್ಷಿಸುವುದು ಹಾಗೂ ಪಾರದರ್ಶಕ ಮತ್ತು ನ್ಯಾಯಸಮ್ಮತ ಪರೀಕ್ಷಾ ವ್ಯವಸ್ಥೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ವಿದ್ಯಾರ್ಥಿ ಪರಿಷತ್ ತನ್ನ ಧ್ವನಿಯನ್ನು ಮುಂದುವರಿಸಿಕೊಂಡೇ ಇರುತ್ತದೆ ಎಂಬ ಭರವಸೆಯನ್ನು ಎಬಿವಿಪಿ ದೇಶದ ಎಲ್ಲಾ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ನೀಡಿದೆ.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಭಗವಂತ ಮಲ್ಲಿಕಾರ್ಜುನ, ವಿಶ್ವಾಸ್, ಪ್ರಶಾಂತ್ ನಗರ, ಸಂಘಟನಾ ಕಾರ್ಯದರ್ಶಿ ಚಂದ್ರಶೇಖರ್ ಗುಡಸಿ ಹಾಗೂ ಅನೇಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪ್ರಶ್ನೆಪತ್ರಿಕೆ ಸೋರಿಕೆ, ಶ್ರೀ ಶಿವಕುಮಾರ್ ಸ್ವಾಮೀಜಿ ಖಂಡನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಬೀದರ್ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕೇವಲ ಒಂದು ಪರೀಕ್ಷಾ ಸಂಸ್ಥೆಯ ತೀವ್ರ ವೈಫಲ್ಯ ಆಗಿರದೆ ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳ ಕನಸಿನ ಮೇಲೆ ದೌರ್ಜನ್ಯವಾಗಿದೆ ಎಸಗಿದ ಎಂದು ಬಾವಗಿ ಭದ್ರೇಶ್ವರ ಮಠದ ಶಿವಕುಮಾರ್ ಸ್ವಾಮೀಜಿ ಟೀಕಿಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಮಾಫಿಯಾದ ಕೈಗೊಂಬೆಯಂತೆ ವರ್ತಿಸುತ್ತಿರುವುದು ಇಡೀ ವ್ಯವಸ್ಥೆಯ ಹದಗೆಟ್ಟ ಸ್ಥಿತಿಯನ್ನು ತೋರಿಸುತ್ತಿದೆ.

ತೀವ್ರ ಆತಂಕ ಮತ್ತು ಹತಾಶೆಯನ್ನು ಮೂಡಿಸಿದೆ. ಕೆಲವರ ಲಾಭಕ್ಕಾಗಿ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ವ್ಯ–ವಸ್ಥಿತವಾಗಿ ನಾಶಪಡಿಸುತ್ತಿರುವುದು ಸರಿಯಲ್ಲ ಎಂದಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯವನ್ನೇ ಭ್ರಷ್ಟಾಚಾರ ಮತ್ತು ಆಡಳಿತಾತ್ಮಕ ನಿರ್ಲಕ್ಷ್ಯಕ್ಕೆ ಬಲಿ ನೀಡಲಾಗುತ್ತಿದೆ. ಶಿಕ್ಷಣ ವ್ಯ–ವಸ್ಥೆಯನ್ನು ಮಾರುಕಟ್ಟೆಯ–ನ್ನಾಗಿ ಮಾಡಿರುವುದರಿಂದ ಇಂತಹ ಸಮಸ್ಯೆಗಳು ಪದೇ ಪದೇ ಮರುಕಳಿಸುತ್ತಿವೆ ಎಂದು ಆರೋಪಿಸಿದ್ದಾರೆ. ಪದೇಪದೇ ವಿಫಲವಾಗಿ ದೇಶದ ನಂಬಿಕೆ ಕಳೆದುಕೊಂಡಿರುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಬೇಕು. ಪ್ರಶ್ನೆಪತ್ರಿಕೆ ಸೋರಿಕೆಯ ಹಿಂದೆ ಇರುವ ವ್ಯಕ್ತಿಗಳು ಮತ್ತು ಕೋಚಿಂಗ್ ಮಾಫಿಯಾವನ್ನು ಪತ್ತೆ ಮಾಡಬೇಕು. ಈ ಅನ್ಯಾಯದ ವಿರುದ್ಧ ವಿದ್ಯಾರ್ಥಿಗಳು ಸಂಘಟಿತರಾಗಿ ಹೋರಾಡಬೇಕು ಎಂದು ತಿಳಿಸಿದ್ದಾರೆ.

## ಬಾಲಕಿ ಹತ್ಯೆ ಕೇಸ್ ಎಸ್.ಐ.ಟಿ ತನಿಖೆಯಾಗಲಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಇತ್ತೀಚೆಗೆ ಔರಾದ್ ತಾಲೂಕಿನಲ್ಲಿ ಹತ್ಯೆಯಾದ ಅಪ್ರಾಪ್ತ ಬಾಲಕಿಯ ಪ್ರಕರಣವನ್ನು ಎಸ್.ಐ.ಟಿಗೆ ವಹಿಸುವಂತೆ ಜನರ ಧ್ವನಿ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರಾದ ಅಂಕುಶ ಗೋಖಲೆ ಹೇಳಿದರು.

ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಕಮಲನಗರ ತಾಲ್ಲೂಕಿನ ಬೆಳಕುಣಿ ಗ್ರಾಮದ ದಲಿತ ಸಮುದಾಯದ ಅಪ್ರಾಪ್ತೆಯ ಅತ್ಯಾಚಾರ, ಕೊಲೆ ಪ್ರಕರಣವನ್ನು ಅನ್ಯ ಜಿಲ್ಲೆಯ ದಕ್ಷ ಆಡಳಿತಗಾರರನ್ನು ತನಿಖೆಗೆ ನಿಯೋಜಿಸಬೇಕು. ತನಿಖೆ ಪೂರ್ಣಗೊಳ್ಳುವವರೆಗೆ ಎಸ್‌ಪಿ ಪ್ರದೀಪ್ ಗುಂಟಿ ಅವರನ್ನು ಜಿಲ್ಲೆಯಿಂದ ವರ್ಗಾವಣೆಗೊಳಿಸಬೇಕು. ಪುನಃ ಶವದ ಮರಣೋತ್ತರ ಪರೀಕ್ಷೆ ನಡೆಸಬೇಕು. ಎಂದು ಹೇಳಿದರು.

ಘಟನೆಯ ಬಳಿಕ ಪೊಲೀಸರು ಎಫ್‌ಐಆರ್‌ನಲ್ಲಿ ಆತ್ಮಹತ್ಯೆ ಎಂದು ಮಾಡಿದ್ದಾರೆ. ಸಂಘಟನೆಗಳು ಮನವಿ ಕೊಟ್ಟ ನಂತರ ಆತ್ಮಹತ್ಯೆಗೆ ಪ್ರಚೋದನೆ ಎಂಬುದಾಗಿ ಮಾಡಿದ್ದಾರೆ. ಸ್ವಜಾತಿಯವನು ಎಂಬ ಕಾರಣಕ್ಕಾಗಿ ಔರಾದ್ ಕ್ಷೇತ್ರದ ಶಾಸಕ ಪ್ರಭು ಚವಾಣ್ ಆರೋಪಿ ರಕ್ಷಣೆಗೆ ನಿಂತಿದ್ದಾರೆ. ಕುಸ್ತಿ ತರಬೇತಿ ಹಾಗೂ ಸಾಲ ವಸೂಲಾತಿ ಹೆಸರಿನಲ್ಲಿ ಲಖನ್ ಎಂಬಾತ ಬಾಲಕಿಯನ್ನು ಅಪಹರಿಸಿ, ಲೈಂಗಿಕ ದೌರ್ಜನ್ಯ ನಡೆಸಿ, ಕಿರುಕುಳ ಕೊಟ್ಟು ಕೊಲೆ ಮಾಡಿದ್ದಾನೆ. ಈ ಘಟನೆಯನ್ನು ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಗಂಭೀರವಾಗಿ ತೆಗೆದುಕೊಳ್ಳಬೇಕು. ಎಂದು ಒತ್ತಾಯಿಸಿದರು.

# ಪರಿಶ್ರಮದಿಂದ ಮಾತ್ರ ಯಶಸ್ಸು ಸಾಧ್ಯ: ಶಾಂತವೀರ ಶ್ರೀ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ತಾಲೂಕು ಗೋಲ್ಲಾ ಸಮಾಜದ ವತಿಯಿಂದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಖಾಸಾಮಠದ ಆವರಣದಲ್ಲಿ ಬುಧವಾರದಂದು ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮಾನಿಪ್ರ ಶಾಂತವೀರ ಗುರು ಮುರುಘರಾಜೇಂದ್ರ ಮಹಾಸ್ವಾಮಿಗಳು ವಹಿಸಿ ಮಾತನಾಡಿ, "ಯಶಸ್ಸು ಎಂಬುದು ಸಂತೆಯಲ್ಲಿ ಸಿಗುವ ವಸ್ತುವಲ್ಲ. ನಿರಂತರ ಪರಿಶ್ರಮ, ಶಿಸ್ತುನಿಂದ ಮಾತ್ರ ಸಾಧನೆ ಸಾಧ್ಯ" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

"ಪ್ರತಿಭಾವಂತ ವಿದ್ಯಾರ್ಥಿಗಳು ತಮ್ಮ ಕುಟುಂಬಕ್ಕೆ ಶಾಲೆಗೆ ಮಾತ್ರವಲ್ಲದೆ ಸಮಾಜ, ತಾಲೂಕು ಹಾಗೂ ಜಿಲ್ಲೆಯ, ಕರುನಾಡಿನ ಕೀರ್ತಿಯನ್ನು ಹೆಚ್ಚಿಸುವವರಾಗಿದ್ದಾರೆ. ಇಂತಹ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ ಮುಂದಿನ ಶಿಕ್ಷಣಕ್ಕೆ ಪ್ರೇರಣೆ ನೀಡುತ್ತವೆ" ಎಂದು ಶ್ರೀಗಳು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಯಾದವ ಸಮಾಜದ ಅಧ್ಯಕ್ಷ ಯಲ್ಲಪ್ಪ ಯಾದವ್ ವಹಿಸಿದ್ದರು. ಅತಿಥಿಗಳಾಗಿ ನರಸರೆಡ್ಡಿ, ಗಡ್ಡೆಸೂಗುರು ಪೊಲೀಸ್ ಪಾಟೀಲ್, ಮಲ್ಲಯ್ಯ ಸ್ವಾಮಿ, ಪಿ. ಶ್ರೀನಾಥ್ ರೆಡ್ಡಿ, ರಾಮಕೃಷ್ಣ ಯಾದವ್, ಚನ್ನಪ್ಪ ಯಾದವ್ ಹಾಗೂ ಶರಣ್ ರೆಡ್ಡಿ ಭಾಗವಹಿಸಿದ್ದರು.

ಈ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆಗೈದ 12 ವಿದ್ಯಾರ್ಥಿಗಳು ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ 4 ವಿದ್ಯಾರ್ಥಿಗಳನ್ನು ಪೋಷಕರ ಸಮೇತವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಆಯೋಜಕರಾದ ಯಲ್ಲಪ್ಪರವರನ್ನು ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಅವರನ್ನು ಶ್ಲಾಘನೆ ಮಾಡಿ ಖಾಸಮಠದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು, ಭಕ್ತರು, ಪೋಷಕರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಸವ ಹಿಂದು ಜಾಗೃತಿ ಧಿಕ್ಕರಿಸಲು, ಬಸವ ಜಾಗೃತಿಯಲ್ಲಿ ಪಾಲ್ಗೊಳ್ಳಿ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಈ ತಿಂಗಳ 18ರಂದು ಕನೇರಿ ಶ್ರೀ ಹಾಗೂ ಅವರ ಅನುಯಾಯಿಗಳು ಹಮ್ಮಿಕೊಂಡಿರುವ ಬಸವ ಹಿಂದು ಜಾಗೃತಿ ಸಮಾವೇಶವನ್ನು ಖಂಡಿಸಲು ಇಂದು(15/05/2026) ಶುಕ್ರವಾರ ಯಾದಗಿರಿ ಜಿಲ್ಲೆಯ ಶಹಾಪುರದಲ್ಲಿ ನಡೆಯಲಿರುವ ಬಸವ ಜಾಗೃತಿ ಸಮಾವೇಶದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಜಾಗತಿಕ ಲಿಂಗಾಯತ ಮಹಾಸಭೆಯ ರಾಷ್ಟ್ರೀಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಕರೆ ನೀಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 1871ರಲ್ಲಿಯೇ ಆಗಿನ ಬ್ರಿಟಿಷ್ ಸರ್ಕಾರ ಲಿಂಗಾಯತ ಧರ್ಮವು ಸನಾತನ ಸಂಸ್ಕೃತಿಯಿಂದ ಮುಕ್ತವಾದ ಹಾಗೂ ವರ್ಣಾಶ್ರಮ ರಹಿತ ಸ್ವತಂತ್ರ ಧರ್ಮವಾಗಿದೆ ಎಂದು ತನ್ನ ಆದೇಶದಲ್ಲಿ ಉಲ್ಲೇಖಿಸಿತ್ತು. ಆದರೆ ದುರಂತವೆಂದರೆ ದೇಶ ಸ್ವತಂತ್ರವಾದ ಬಳಿಕ ನಮ್ಮವರೆ ನಮ್ಮನ್ನು ನಿರ್ಲಕ್ಷಿಸಿ ಲಿಂಗಾಯತ ಸ್ವತಂತ್ರ ಧರ್ಮವೆಂದು ಪರಿಗಣಿಸಲು ಮೀನಾಮೇಷ ಏಣಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಲಿಂಗಾಯತ ಧರ್ಮವನ್ನು ಪ್ರತ್ಯೇಕ ಧರ್ಮವೆಂದು ಪರಿಗಣಿಸದೆ ಕೊಟ್ಯಾಂತರ ಲಿಂಗಾಯತರಿಗೆ ಅನ್ಯಾಯ ಮಾಡಲು ಹೊರಟಿದೆ. ಇತ್ತ ರಾಜ್ಯ ಸರ್ಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದರೂ ಬಸವಣ್ಣನವರನ್ನು ಹಾಗೂ ಬಸವಾದಿ ಪ್ರಮಥರ ಬಗ್ಗೆ ಟೀಕೆ ಟಿಪ್ಪಣಿ ಮಾಡುವವರನ್ನು ಸುಮ್ಮನೆ ಬಿಡುವುದು ಮಹಾಪರಾಧ. ಹಾಗಾಗಿ ಕನೇರಿ ಶ್ರೀಗಳನ್ನು ಈ ರಾಜ್ಯದೊಳಗೆ ಬಾರದಂತೆ ಅವರನ್ನು ಗಡಿಪಾರು ಮಾಡಬೇಕೆಂದು ಒತ್ತಾಯಿಸಿದರು.

ದಲಿತ ಮುಖಂಡರುಗಳಾದ ಮಾರೂತಿ ಬೌದ್ದೆ, ಅನಿಲಕುಮಾರ ಬೆಲ್ದಾರ್, ಬಾಬುರಾವ ಪಾಸ್ವಾನ್, ವಿನಯಕುಮಾರ ಮಾಳಗೆ, ಮಹೇಶ ಗೋರನಾಳಕರ್ ಮಾತನಾಡಿ, ಬುದ್ದ, ಬಸವ ಹಾಗೂ ಅಂಬೇಡ್ಕರ್ ತತ್ವವನ್ನು ಸದಾ ಅಲ್ಲಗಳೆಯುವ ಮನೋವಾದಿಗಳು, ಆರ್.ಎಸ್.ಎಸ್ ನವರು, ಕೋಮುವಾದಿ ತತ್ವವನ್ನು ಸದಾ ಮೈಗೂಡಿಸಿಕೊಂಡಿರುವ ಕನೇರಿ ಸ್ವಾಮಿಜಿಗಳು ಹಾಗೂ ಅವರ ಅನೇಕ ಹಿಂಬಾಲಕರಿಗೆ ಸುಪ್ರಿಮ್ ಕೋರ್ಟ್ ಹಾಗೂ ಹೈಕೋರ್ಟ್ ಗಳು ಛಿಮಾರಿ ಹಾಕಿದರೂ ಅವರು ಬುದ್ದಿ ಕಲಿಯದೆ ಸದಾ ಬುದ್ದ, ಬಸವ ಹಾಗೂ ಅಂಬೇಡ್ಕರ್ ಅನುಯಾಯಿಗಳನ್ನು ಅವಮಾನಿಸಲು ಹೊರಟಿದ್ದಾರೆ. ಸಂವಿಧಾನದ ಆಶೆಯಗಳಿಗೆ ವಿರೂದ್ದವಾಗಿರುವ ಇಂಥವರಿಗೆ ಬುದ್ದಿ ಕಲಿಸಲು ನಾಡಿನ ಎಲ್ಲ ದಲಿತಪರ ಸಂಘಟನೆಗಳ ಪ್ರಮುಖರು ಇಂದಿನ ಶಹಾಪುರ ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕರೆ ಕೊಟ್ಟರು.

ಲಿಂಗಾಯತ ಧರ್ಮದ ಮುಖಂಡರಾದ ಆನಂದ ದೇವಪ್ಪ, ಓಂಪ್ರಕಾಶ ರೊಟ್ಟೆ, ಕುಶಾಲರಾವ ಪಾಟೀಲ ಖಾಜಾಪುರ ಹಾಗೂ ಶಿವಶರಣಪ್ಪ ಹುಗ್ಗೆ ಪಾಟೀಲ ಮಾತನಾಡಿ, ನಮ್ಮ ಬಸವಾದಿ ತಾತ್ವಿಕ ಕಾರ್ಯಕ್ರಮದಲ್ಲೂ ಭಾಗವಹಿಸುವ ಹಾಗೂ ಕೋಮುವಾದಿ ತತ್ವಗಳಿಗೂ ಕೈಜೋಡಿಸುವ ಬಸವಪರ ಢೋಂಗಿ ಸಂಘಟನೆಗಳ ಮುಖಂಡರು, ರಾಜಕೀಯ ಮುಖಂಡರು ಹಾಗೂ ಕಾವಿಧಾರಿಗಳಿಗೂ ನಾವು ಒಂದಾಗಿ ತಕ್ಕ ಶಾಸ್ತಿ ಮಾಡಬೇಕಾಗಿದೆ. ನಮ್ಮ ಭಾವಿ ಪಿಳಿಗೆ ಬಸವ ತತ್ವಗಳನ್ನು ಅನುಸರಿಸಬೇಕಾದರೆ ನಾವಿಂದು ಜಾಗೃತರಾಗಿ ಇಂದಿನ ಶಹಾಪುರ ಕಾರ್ಯಕ್ರಮದಲ್ಲಿ ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡು ಒಕ್ಕೂಟದ ಸಂದೇಶ ರವಾನಿಸಬೇಕಾಗಿದೆ ಎಂದರು.

ಲಿಂಗಾಯತ ಸಮಾಜದ ಮುಖಂಡರುಗಳಾದ ವೀರಶೆಟ್ಟಿ ಪಾಟೀಲ, ಸಿದ್ದು ಶಟಕಾರ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿದ್ದರು.

# ವ್ಯಸನ ಮುಕ್ತ ಮತ್ತು ಕ್ಯಾನ್ಸರ್ ಅರಿವು ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಪರಮಪೂಜ್ಯ ಶ್ರೀ ಶಿವಲಿಂಗ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಮತ್ತು ಭಾರತೀಯ ಕ್ಯಾನ್ಸರ್ ಸಂಸ್ಥೆ ಕಲಬುರಗಿಯ ಶ್ರೀ ಗುರುರಾಜ್ ಕುಲಕರ್ಣಿ ಅವರ ನೇತೃತ್ವದಲ್ಲಿ ಶರಣ ನಗರ ಗ್ರಾಮದಲ್ಲಿ ವ್ಯಸನ ಮುಕ್ತ ಮತ್ತು ಕ್ಯಾನ್ಸರ್ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ವ್ಯಸನ ಮುಕ್ತ ರಾಲಿ ಹಮ್ಮಿಕೊಂಡು ಪರಮ ಪೂಜ್ಯ ಶ್ರೀ ಶಿವಲಿಂಗ ಮಹಾಸ್ವಾಮಿಗಳು ಜೋಳಿಗೆ ಹಿಡಿದು ಮನೆ ಮನೆಗೆ ತಿರುಗಿ ತಮ್ಮಲ್ಲಿರುವ ವ್ಯಸನಗಳಾದ ಗುಟಗ, ಪಾನ್ ಮಸಾಲಾ, ತಂಬಾಕು, ಬೀಡಿ, ಸಿಗರೇಟ್,ಇಸ್ಪಾಟ ಮತ್ತು ಸಾರಾಯಿ ಎಲ್ಲೋ ತಮ್ಮ ಜೋಳಿಗೆಯಲ್ಲಿ ಹಾಕಿ ಅವುಗಳ ಸೇವನೆಯನ್ನು ಸಂಪೂರ್ಣವಾಗಿ ಬಿಡಬೇಕಾಗಿ ಹೇಳಿದರು. ಅದರಂತೆ ಗ್ರಾಮದ ಸುಮಾರು 20 ಜನ ಇನ್ನೂ ಮುಂದೆ ವ್ಯಸನ ಸೇವನೆ ಮಾಡುವುದಿಲ್ಲವೆಂದು ಪ್ರಮಾಣ ಮಾಡಿ ಜೋಳಿಗೆಯಲ್ಲಿ ವ್ಯಸನಗಳನ್ನು ಹಾಕಿ ವ್ಯಸನ ಮುಕ್ತರಾದರು.

# ದೇಶ ಸುಭಿಕ್ಷೆಯಾಗಿದ್ದರೆ, ನಾವೆಲ್ಲರೂ ನಾವೆಲ್ಲರೂ ಸುರಕ್ಷಿತವಾಗಿರಲು ಸಾಧ್ಯ : ಮೀನಳ್ಳಿ ತಾಯಣ್ಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ.14: ದೇಶದ ಜನರ, ದೇಶದ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸುತ್ತಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ಚಿನ್ನ ಖರೀದಿ ಕುರಿತು ನೀಡಿದ ಹೇಳಿಕೆ ಗೆ, ಕಾಂಗ್ರೆಸ್ ನವರು ರಾಜಕೀಯ ಚಟಕ್ಕಾಗಿ ಮೋದಿ ಅವರ ಬಗ್ಗೆ ಮಾತನಾಡುತ್ತಿರುವುದು ಸರಿಯಲ್ಲ, ಮೋದಿ ಅವರು ಏನೇ ತೀರ್ಮಾನ ಕೈಗೊಂಡರೂ ಅದು ದೇಶದ ಜನರ, ಅಭಿವೃದ್ಧಿ ಪೂರಕವಾಗಿಯೇ ಇರಲಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ತಿಳಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿದ ಅವರು, ಪ್ರಧಾನ ಮಂತ್ರಿ ಮೋದಿ ಅವರು ತೆಗೆದುಕೊಂಡ ಯಾವುದೇ ನಿರ್ಧಾರ, ಅದು ದೇಶದ ಅಭಿವೃದ್ಧಿಗಾಗಿ ಇರಲಿದೆ, ದೇಶದ ಜನರ ಸುಭಿಕ್ಷೆಗಾಗಿ ಇರಲಿದೆ, ಇದರಲ್ಲಿ ಅನುಮಾನವೇ ಬೇಡ, ಮೋದಿ ಅವರು ತೆಗೆದುಕೊಂಡ ತೀರ್ಮಾನವನ್ನು ನಾವೆಲ್ಲರೂ ಸ್ವಾಗತಿಸಬೇಕು, ಗೌರವಿಸಬೇಕು. ಈ ಹಿಂದೆ ಕಳೆದ 1967ರಲ್ಲಿ ಇಂದಿರಾ ಗಾಂಧಿ ಅವರು, ಚಿನ್ನ ಖರೀದಿ ಅದಷ್ಟು ಕೈಬಿಡಿ, ರಾಷ್ಟ್ರೀಯ ಶಿಸ್ತು ಎಂದು ಹೇಳಿಕೆ ನೀಡಿ ಮನವಿ ಮಾಡಿದ್ದರು ಎಂಬುದನ್ನು ಕೈ ನಾಯಕರು ಮರೆಯಕೂಡದು. ಸಾಧ್ಯವಾದಷ್ಟು ಮನೆಯಿಂದಲೇ ಕೆಲಸ ಮಾಡಲು ಆದ್ಯತೆ ನೀಡಿ, ಒಂದು ವರ್ಷದ ವರೆಗೆ ಆದಷ್ಟು ಚಿನ್ನ, ಖರೀದಿಸುವುದನ್ನು ನಿಲ್ಲಿಸಿ, ಪೆಟ್ರೋಲ್, ಡೀಸೆಲ್, ಬಳಕೆಯನ್ನು ಕಡಿಮೆ ಮಾಡಿ, ಮೆಟ್ರೋ, ಸಾರ್ವಜನಿಕ ಸಾರಿಗೆ ಬಳಕೆ ಮಾಡಿ, ಅಡುಗೆ ಎಣ್ಣೆಯ ಬಳಕೆ ಕಡಿಮೆ ಮಾಡಿ, ರಾಸಾಯನಿಕ ರಸಗೊಬ್ಬರ ಮೇಲಿನ ಅವಲಂಬನೆ ಕಡಿಮೆ ಮಾಡಿ, ನೈಸರ್ಗಿಕ ಕೃಷಿಯತ್ತ ಮುನ್ನಡೆಯಿರಿ, ವಿದೇಶಿ ಬ್ರ್ಯಾಂಡ್ ಉತ್ಪನ್ನಗಳನ್ನು ಕಡಿಮೆ ಮಾಡಿ, ಸ್ವದೇಶಿ ವಸ್ತುಗಳನ್ನು ಹೆಚ್ಚು ಬಳಸಿ, ಕನಿಷ್ಠ 1 ವರ್ಷ ವಿದೇಶಿ ಪ್ರವಾಸವನ್ನು ತಪ್ಪಿಸಿ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮನವಿ ಮಾಡಿದ್ದಾರೆ, ಎಲ್ಲರೂ ದೇಶಕ್ಕಾಗಿ, ದೇಶದ ಜನರಿಗಾಗಿ ಪಾಲಿಸಬೇಕು, ಕಾಂಗ್ರೆಸ್ ನವರ ರಾಜಕೀಯ ಚಟದ ಹೇಳಿಕೆಗೆ ಕಿವಿಕೊಡಬಾರದು ಎಂದು ಮನವಿ ಮಾಡಿದ್ದಾರೆ.

# ಕಲ್ಯಾಣ ಕರ್ನಾಟಕದ ಸಾಂಸ್ಕೃತಿಕ ಪರಂಪರೆಗೆ ವಿಶೇಷ ಪರೀಕ್ಷೆಗಳ ಕೊಡುಗೆ: ಪ್ರೊ. ಕೆ. ರಾಮಕೃಷ್ಣಯ್ಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಲ್ಯಾಣ ಕರ್ನಾಟಕ ಭಾಗವು ಸಂಗೀತ, ನೃತ್ಯ ಮತ್ತು ನಾಟಕ ಕ್ಷೇತ್ರಗಳಿಗೆ ಅಪಾರ ಕೊಡುಗೆಯನ್ನು ನೀಡಿರುವ ನೆಲವಾಗಿದ್ದು, ಇಲ್ಲಿನ ಸಾಂಸ್ಕೃತಿಕ ಪರಂಪರೆಯನ್ನು ಗುರುಕುಲ ಪದ್ಧತಿಯ ಮೂಲಕ ಮುಂದುವರಿಸಲಾಗುತ್ತಿದೆ ಎಂದು ಮೈಸೂರಿನ ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ ಉಪಕುಲಪತಿ ಪ್ರೊ. ಕೆ. ರಾಮಕೃಷ್ಣಯ್ಯ ಅಭಿಪ್ರಾಯಪಟ್ಟರು.

ನಗರದ ಶ್ರೀ ಮೇಧಾ ಸಂಗೀತ ಮತ್ತು ಪ್ರದರ್ಶಕ ಕಲೆಗಳ ಕಾಲೇಜುನಲ್ಲಿ ವಿಶ್ವವಿದ್ಯಾಲಯದ ವತಿಯಿಂದ 2025–26ನೇ ಸಾಲಿನ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯಗಳ ಪ್ರಾಯೋಗಿಕ ಪರೀಕ್ಷೆಗಳ ಸಮಾರೋಪ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಅನೇಕ ಮಹನೀಯರು ಸಂಗೀತ ಮತ್ತು ಪ್ರದರ್ಶನ ಕಲೆಗಳ ಬೆಳವಣಿಗೆಗೆ ಶ್ರಮಿಸಿದ್ದಾರೆ. ಅವರ ಪರಂಪರೆಯೇ ಇಂದಿಗೂ ಜೀವಂತವಾಗಿದ್ದು, ವಿದ್ಯಾರ್ಥಿಗಳು ಪರಂಪರ??? ಕಲೆಯತ್ತ ಆಸಕ್ತಿ ತೋರಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಹೇಳಿದರು.

ಪರೀಕ್ಷಾ ಕೇಂದ್ರದ ಪ್ರಾಂಶುಪಾಲ ರಾಮ್ಕಿರಣ್ ಕೆ. ಮಾತನಾಡಿ, ಈ ಭಾಗದಲ್ಲಿಯೇ ಸಂಗೀತ,



ನೃತ್ಯ ಹಾಗೂ ನಾಟಕಗಳ ಪ್ರಾದೇಶಿಕ ಕಚೇರಿ ಆರಂಭಿಸಿದರೆ ಗ್ರಾಮೀಣ ಭಾಗದ ಕಲಾವಿದರಿಗೆ ಮತ್ತು ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಉಪಕುಲಪತಿಗಳ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಉಪಕುಲಪತಿಗಳಿಗೆ ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತ ನೃತ್ಯ ಶಿಕ್ಷಕ ಜಿನಾನ್ ಬಾಷಾ, ಸಂಗೀತ ಶಿಕ್ಷಕರಾದ ಮಲ್ಲಿಕಾರ್ಜುನ ತೂರ್ನೂರು, ಮಾಸ್ಟರ್ ಅಭಿಷೇಕ್, ಶ್ರೀಮತಿ ರಾಜೇಶ್ವರಿ, ರೇಣುಕಾ, ದೊಡ್ಡಯ್ಯ ಗವಾಯಿಗಳು, ನೃತ್ಯ ಶಿಕ್ಷಕರಾದ ಅಂಜಲಿ ಹಾಗೂ ಅಲ್ತಾಫ್, ವಿಶ್ವವಿದ್ಯಾಲಯ ಸಂಯೋಜಕ ಡಾ. ಅಣ್ಣಾಜಿ ಕೃಷ್ಣಾರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ವೇಳೆ ಕಾಲೇಜಿನಲ್ಲಿ ವಿಶ್ವವಿದ್ಯಾಲಯದ ವತಿಯಿಂದ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯಗಳ ಪರೀಕ್ಷೆಗಳು ಯಶಸ್ವಿಯಾಗಿ ನಡೆಯಿತು. ಮೇ 10ರಂದು ಲಿಖಿತ ಪರೀಕ್ಷೆಗಳು ಹಾಗೂ ಮೇ 12 ಮತ್ತು 13ರಂದು ಪ್ರಾಯೋಗಿಕ ಪರೀಕ್ಷೆಗಳು ನಡೆದವು. ಒಟ್ಟು 266 ಅಭ್ಯರ್ಥಿಗಳು ಭಾಗವಹಿಸಿದ್ದರು.

ಭರತನಾಟ್ಯದ ಬಣ್ಣ ಬಣ್ಣದ ಉಡುಪುಗಳಲ್ಲಿ ವಿದ್ಯಾರ್ಥಿಗಳು ಎಲ್ಲರ ಗಮನ ಸೆಳೆದರು. ಸಂಗೀತ ಗಾಯನಗಳ ಮೂಲಕ ಭಾರತೀಯ ಸಾಂಸ್ಕೃತಿಕ ಪರಂಪರೆಯ ಸೊಬಗನ್ನು ಅನಾವರಣಗೊಳಿಸಿದರು

# ಬಸವರಾಜ ಬದ್ರಗೊಂಡರಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಪಟ್ಟಣದ ಕರ್ನಾಟಕ ರಾಜ್ಯ ಅನುಮತಿಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ತಾಲೂಕಾಧ್ಯಕ್ಷ ಬಸವರಾಜ ಬದ್ರಗೊಂಡ ಅವರ ಸಾಮಾಜಿಕ ಹಾಗೂ ಕೃಷಿ ಸೇವೆ ಗುರುತಿಸಿ ತಾಲೂಕಿನ ಮನಗೂಳಿ ಹಿರೇಮಠದ ವತಿಯಿಂದ ಸಂಗನಬಸವ ಶ್ರೀ ರಾಜ್ಯ ಪ್ರಶಸ್ತಿಗೆ ಭಾಜನರಾದ ಹಿನ್ನೆಲೆಯಲ್ಲಿ ಪಟ್ಟಣದ ಅವರ ಕಚೇರಿಯಲ್ಲಿ ಗುರುವಾರಬೆಳಗ್ಗೆ ಆರೂಢ ಸೇವಾ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಗುರುರಾಜ್ ಬ.ಕನ್ನೂರ, ಅಂಬೋಜಿ ಪವಾರ,ಚನ್ನು ಭದ್ರಗೊಂಡ ಸೇರಿದಂತೆ ಅನೇಕರು ಉಪಸಿತರಿದ್ದರು.

# ಮೇ 16ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ನಗರದ ಉಪ ವಿಭಾಗ –1 ಮತ್ತು ಉಪವಿಭಾಗ–2 ರ ಗ್ರಾಹಕರ ಕುಂದು ಕೊರತೆ ಹಾಗೂ ಸಮಸ್ಯೆಗಳನ್ನು ಪರಿಹರಿಸಲು ಇದೇ ಮೇ 16 ರಂದು ಮದ್ಯಾಹ್ನ 12 ಗಂಟೆಯಿಂದ 1.30ರವರೆಗೆ ಉಪವಿಭಾಗ –1ರಲ್ಲಿ ಗ್ರಾಹಕರ ಸಂವಾದ ಸಭೆ ಏರ್ಪಡಿಸಲಾಗಿದೆ. ಸಾರ್ವಜನಿಕರು ಸಭೆಗೆ ಭಾಗವಹಿಸಿ ವಿದ್ಯುತ್ ಸಮಸ್ಯೆ ಇದ್ದಲ್ಲಿ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹರಿಸಿಕೊಳ್ಳಬಹುದು ಎಂದು ಹೊಸಪೇಟೆ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂ–ಜಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಕಡಿತದ ಪ್ರಯುಕ್ತ ನೀರು ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.14–ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಭೀಮಾ ನದಿಯ ಸರಡಗಿ, ಕೋಟನೂರ(ಡಿ) ಹಾಗೂ ಕುರಿಕೋಟಾ (ಬೆಣ್ಣೆತೋರಾ) ಪಂಪ್‌ಹೌಸ್‌ಗೆ ನಿರಂತರವಾಗಿ ದಿನನಿತ್ಯ ಮೇಲಿಂದ ಮೇಲೆ ವಿದ್ಯುತ ಕಡಿತವಾಗುತ್ತಿರುವುದರಿಂದ ಬುಧವಾರ (ದಿನಾಂಕ: 13–05–2026 ರಂದು) ಕಲಬುರಗಿ ನಗರಕ್ಕೆ ನೀರು ಸರಬರಾಜಿನ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುತ್ತದೆ ಎಂದು ಕಲಬುರಗಿ ಕುಸ್ಸೆಂಪ್–ಕೆಯುಐಡಿಎಫ್‌ಸಿ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮೇ 13 ರಂದು ಸರಡಗಿ ಪಂಪ್‌ಹೌಸ್‌ನಲ್ಲಿ ಮಧ್ಯಾಹ್ನ 12.25 ರಿಂದ ಮಧ್ಯಾಹ್ನ 1.10 ರವರೆಗೆ, ಸಂಜೆ 05.40 ರಿಂದ 06.20 ರವರೆಗೆ ಮತ್ತು ರಾತ್ರಿ09.54 ರಿಂದ ರಾತ್ರಿ 10.10 ಗಂಟೆಯವರೆಗೆ, ಕೋಟನೂರು (ಡಿ) ಪಂಪ್‌ಹೌಸ್‌ನಲ್ಲಿ ಸಂಜೆ 07.25 ರಿಂದ ರಾತ್ರಿ 09.45 ರವರೆಗೆ ಹಾಗೂ ಕುರಿಕೋಟಾ(ಬೆಣ್ಣೆತೋರಾ) ಪಂಪ್‌ಹೌಸ್‌ನಲ್ಲಿರಾತ್ರಿ 08.12 ರಿಂದ 09.12 ರವರೆಗೆ (ಹಳೇ ಜಲ ಶುದ್ಧೀಕರಣ ಕೇಂದ್ರ) ವಿದ್ಯುತ್ ಕಡಿತಗೊಂಡಿರುತ್ತದೆ. ವಿದ್ಯುತ್ ಕಡಿತ ಪ್ರಯುಕ್ತ ಕಲಬುರಗಿ ನಗರಕ್ಕೆ ನೀರು ಸರಬರಾಜಿನ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದ್ದು, ಕಲಬುರಗಿ ನಗರದ ಸಾರ್ವಜನಿಕರು ಮಹಾನಗರ ಪಾಲಿಕೆಗೆ, ಕೆಯುಡಬ್ಲ್ಯೂಎಸ್‌ಎಂಪಿಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್&ಟಿ ಲಿಮಿಟೆಡ್ ಇವರೊಂದಿಗೆ ಸಹಕರಿಸಬೇಕೆಂದು ಅವರು ತಿಳಿಸಿದ್ದಾರೆ.

# ಬ್ಯೂಟಿ ಪಾರ್ಲರ್ ಅಲ್ಪಾವಧಿ ತರಬೇತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.14–ಕಲಬುರಗಿ (ಮಹಿಳಾ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್–2026–27ನೇ ಶೈಕ್ಷಣಿಕ ಸಾಲಿನಲ್ಲಿ ಮಹಿಳಾ ಅಭ್ಯರ್ಥಿಗಳಿಗೆ ಪಿ.ಪಿ.ಪಿ. ಯೋಜನೆಯಡಿ ಬ್ಯೂಟಿ ಪಾರ್ಲರ್ (Beauty Parlour) ಅಲ್ಪಾವಧಿ ತರಬೇತಿ ನೀಡಲು ಆಸಕ್ತಿಯುಳ್ಳ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ (ಮಹಿಳಾ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಅರ್ಜಿ ಸಲ್ಲಿಸಲು ಯಾವುದೇ ವಿದ್ಯಾರ್ಹತೆ ಬೇಕಾಗಿರುವುದಿಲ್ಲ. ಆಸಕ್ತಿಯುಳ್ಳ ಅರ್ಹ ಮಹಿಳಾ ಅಭ್ಯರ್ಥಿಗಳು ಸರ್ಕಾರಿ (ಮಹಿಳಾ) ಕೈಗಾರಿಕಾ ತರಬೇತಿ ಸಂಸ್ಥೆ, ಎಂ.ಎಸ್.ಕೆ. ಮಿಲ್ ರಸ್ತೆ, ಕಾಮರೆಡ್ಡಿ ಆಸ್ಪತ್ರೆ ಎದುರುಗಡೆ ಕಲಬುರಗಿ ವಿಳಾಸಕ್ಕೆ ಖುದ್ದಾಗಿ ಬಂದು ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಿರಿಯ ತರಬೇತಿ ಅಧಿಕಾರಿ ರಾಜಶ್ರೀ ಸಿ ಭಾವಿ ಇವರ ಮೊಬೈಲ್ ಸಂಖ್ಯೆ 8710934205 ಕಚೇರಿ ಸಮಯದಲ್ಲಿ ಬೆಳಿಗ್ಗೆ 8.30 ರಿಂದ ಸಂಜೆ 5 ಗಂಟೆಯವರೆಗೆ ಸಂಪರ್ಕಿಸಲು ಕೋರಲಾಗಿದೆ.

# ಮೇ 18 ರಿಂದ 25 ರವರೆಗೆ ಎಸ್ ಎಸ್ ಎಲ್ ಸಿ ಪರೀಕ್ಷೆ-2 ಅಕ್ರಮಗಳಿಗೆ ಅವಕಾಶ ಕೊಡದೆ ಪಾರದರ್ಶಕವಾಗಿ ಪರೀಕ್ಷೆ ನಡೆಸಿ : ಅಪರ ಜಿಲ್ಲಾಧಿಕಾರಿ ಇ ಬಾಲಕೃಷ್ಣ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ದ್ವಿತೀಯ ಹಂತದ ಎಸ್ ಎಸ್ ಎಲ್ ಸಿ ಪರೀಕ್ಷೆ–2 ಯಾವುದೇ ಅಕ್ರಮಗಳಿಗೆ ಎಡೆಮಾಡಿಕೊಡದೆ ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಇ ಬಾಲಕೃಷ್ಣ ಸೂಚನೆ ನೀಡಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ದ್ವಿತೀಯ ಹಂತದ ಎಸ್ ಎಸ್ ಎಲ್ ಸಿ ಪರೀಕ್ಷೆ –2 ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ದ್ವಿತೀಯ ಹಂತದ ಪರೀಕ್ಷೆಯು ಇದೇ ಮೇ 18 ರಿಂದ 25ರ ವರೆಗೆ ಜರುಗಲಿದ್ದು, ಜಿಲ್ಲೆಯ 5 ತಾಲೂಕುಗಳಿಂದ 2,266 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ದ್ವಿತೀಯ ಹಂತದ ಪರೀಕ್ಷೆಗಾಗಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನಲ್ಲಿ 3, ಹಗರಿಬೊಮ್ಮನಹಳ್ಳಿ, ಹಡಗಲಿ, ಹರಪನಹಳ್ಳಿ ಹಾಗೂ ಕೂಡ್ಲಿಗಿ ತಾಲೂಕಿನಲ್ಲಿ ತಲಾ ಒಂದು ಪರೀಕ್ಷಾ ಕೇಂದ್ರ ಸೇರಿ ಒಟ್ಟು 7 ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿದೆ.ಪರೀಕ್ಷಾ ಕೇಂದ್ರದ ಒಳಗೆ ಮತ್ತು ಹೊರಗೆ ಸೂಕ್ತ ಭದ್ರತೆ ಕಲ್ಪಿಸಬೇಕು. ಪರೀಕ್ಷಾ ಅಕ್ರಮಗಳಿಗೆ ಆಸ್ಪದ ನೀಡದಂತೆ ಪ್ರತಿ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಬೇಕು. ಪರೀಕ್ಷೆ ನಡೆಯುವ ಸಮಯದಲ್ಲಿ ಕೇಂದ್ರದ ಸುತ್ತಮುತ್ತಲಿನ ಎಲ್ಲಾ ಜೆರಾಕ್ಸ್, ಸೈಬರ್ ಕೇಂದ್ರ ಕಡ್ಡಾಯವಾಗಿ ಮುಚ್ಚಬೇಕು. ನಿಯಮ ಮೀರುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಲಾಗಿದೆ. ಪ್ರತಿ ಪರೀಕ್ಷಾ ಕೊಠಡಿಯೂ ಸಿಸಿಟಿವಿ ಕ್ಯಾಮೆರಾಗಳ ಕಣ್ಗಾವಲಿನಲ್ಲಿ ಇರಲಿದ್ದು, ಡಿಜಿಟಲ್ ಲೋಪಗಳಿಗೆ ಅವಕಾಶವಿಲ್ಲದಂತೆ ಎಚ್ಚರವಹಿಸಬೇಕು. ಪರೀಕ್ಷೆ ಮುಗಿದ ನಂತರ ಪ್ರಶ್ನೆ ಪತ್ರಿಕೆ ಸುರಕ್ಷಿತವಾಗಿ ಸಾಗಿಸಲು 5 ಮಾರ್ಗ ವ್ಯವಸ್ಥೆ




ಮಾಡಲಾಗಿದೆ. ಅದಕ್ಕಾಗಿ ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.ಕೇವಲ ಭದ್ರತೆಯಷ್ಟೇ ಅಲ್ಲದೆ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದಲೂ ಗಾಳಿ, ಬೆಳಕು ಮತ್ತು ಶೌಚಾಲಯದಂತಹ ಸೌಲಭ್ಯಗಳಲ್ಲಿ ಯಾವುದೇ ಕೊರತೆಯಾಗದಂತೆ ಅಗತ್ಯ ಕ್ರಮವಹಿಸಬೇಕು. ಬೇಸಿಗೆಯ ಹಿನ್ನೆಲೆಯಲ್ಲಿ ಪ್ರತಿ ಕೇಂದ್ರದಲ್ಲಿ ಶುದ್ಧ ಕುಡಿಯುವ ನೀರು ಮತ್ತು ತುರ್ತು ಚಿಕಿತ್ಸೆಗಾಗಿ ಆರೋಗ್ಯ ಸಹಾಯಕಿಯರ ತಂಡ ನಿಯೋಜಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದ ಅವರು, ಒಟ್ಟಾರೆಯಾಗಿ ಈ ಬಾರಿಯ ಎಸ್ ಎಸ್ ಎಲ್ ಸಿ ಪರೀಕ್ಷೆ–2ನ್ನು ಅತ್ಯಂತ ಶಿಸ್ತುಬದ್ಧವಾಗಿ ಮತ್ತು ದೋಷಮುಕ್ತವಾಗಿ ನಡೆಸಿ ಯಶಸ್ವಿಗೊಳಿಸಿ ಎಂದರು. ಪರೀಕ್ಷೆ–1ರಲ್ಲಿ ಫಲಿತಾಂಶ ಸುಧಾರಣೆ ಬಯಸುವವರಿಗೆ ಮತ್ತು ಅನುತ್ತೀರ್ಣರಾದವರಿಗೆ ಇದು ಸುವರ್ಣಾವಕಾಶ. ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ಪರೀಕ್ಷೆ ಬರೆಯಲು ಪೂರಕ ವಾತಾವರಣ ಸಿದ್ಧಪಡಿಸಲಾಗಿದೆ ಎಂದು ಎಸ್‌ಎಸ್‌ಎಲ್‌ಸಿ ಜಿಲ್ಲಾ ನೋಡಲ್ ಅಧಿಕಾರಿ ಹೆಚ್.ಎಂ.ಹುಲಿಬಂಡಿ ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ, ಬಿಇಒ ಶೇಖರಪ್ಪ ಹೊರಪೇಟೆ, ವಿವಿಧ ತಾಲ್ಲೂಕು ಕ್ಷೇತ ಶಿಕ್ಷಣಾಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳು ಇದ್ದರು.

# ಮೇ 31ಕ್ಕೆ ಚಿಕ್ಕಬಳ್ಳಾಪುರದಲ್ಲಿ ರಾಜ್ಯ ಮಟ್ಟದ ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ: ತಗಡೂರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)ದ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದೊಂದಿಗೆ ಮೇ 31 ರಂದು ಭಾನುವಾರ ಚಿಕ್ಕಬಳ್ಳಾಪುರ ಕನ್ನಡ ಭವನದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.



ಚಿಕ್ಕಬಳ್ಳಾಪುರ ಪತ್ರಿಕಾ ಭವನದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ ಜಿಲ್ಲಾ ಸಂಘದ ಪದಾಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಈ ಬಗ್ಗೆ ನಿರ್ಣಯಿಸಲಾಗಿದೆ.

ಸಭೆಯಲ್ಲಿ ಮಾತನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಮೋಕ್ಷಗುಂಡಂ ಸರ್.ಎಂ.ವಿಶೇಶ್ವರಯ್ಯ ಜನ್ಮ ಸ್ಥಳ, ನಂದಿ ಬೆಟ್ಟದ ಸೊಬಗು, ದ್ರಾಕ್ಷಿಯ ನಾಡಿನಲ್ಲಿ ಮೊಟ್ಟ ಮೊದಲ ಬಾರಿಗೆ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಆಯೋಜಿಸುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು.

ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಪತ್ರಕರ್ತರ ಸಂಘದ ಸದಸ್ಯರ ಮಕ್ಕಳಿಗೆ ರಾಜ್ಯ ಸಂಘದಿಂದ ಪ್ರತಿಭಾ ಪುರಸ್ಕಾರ ಹಮ್ಮಿಕೊಂಡಿದ್ದು ಇದು ರಾಜ್ಯ ಮಟ್ಟದ 6ನೇ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಇದಾಗಿದೆ ಎಂದರು.

ಬೀದರ್‌ನಿಂದ ಚಾಮರಾಜಪೇಟೆಯವರೆಗೂ ಕೊಡುಗು–ಕೋಲಾರದಿಂದ ಹಿಡಿದು ರಾಜ್ಯದ 31 ಜಿಲ್ಲೆಗಳ ಪತ್ರಕರ್ತರ ಮಕ್ಕಳು ಹಾಗೂ ಪೋಷಕರು ಸೇರಿ ಸುಮಾರು 400 ರಿಂದ 500 ಕ್ಕೂ ಹೆಚ್ಚು ಮಂದಿ ಈ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಪ್ರತಿಭಾ ಪುರಸ್ಕಾರ ಸ್ವೀಕರಿಸಲು ಬರುವ ದೂರದ ಜಿಲ್ಲೆಗಳ ವಿದ್ಯಾರ್ಥಿ ಪೋಷಕರಿಗೆ ಸೂಕ್ತ ವಸತಿ, ಊಟ, ತಿಂಡಿ ಸೌಕರ್ಯ ಮಾಡಲು ಜಿಲ್ಲಾ ಸಂಘಕ್ಕೆ ಸೂಚಿಸಿದ ಅವರು, ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮಿನಿ ರಾಜ್ಯ ಪತ್ರಕರ್ತರ ಸಮ್ಮೇಳನದ ಮಾದರಿಯಲ್ಲಿ ನಡೆಯುವಂತೆ ಸಲಹೆ ನೀಡಿದರು.

ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಗೆ ಆದ್ಯತೆ ನೀಡಬೇಕು, ಜಿಲ್ಲೆಯ ಕಲೆ, ಸಂಸ್ಕೃತಿಯ ಹಿರಿಮೆಯನ್ನು ಪರಿಚಯಿಸುವ ವಸ್ತು ಪ್ರದರ್ಶನ ಆಯೋಜನೆಗೆ ಸಲಹೆ ನೀಡಿ ಒಟ್ಟಾರೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಪತ್ರಕರ್ತರ ನೆನಪಿನಲ್ಲಿ ಉಳಿಯುವ ರೀತಿಯಲ್ಲಿ ಆಯೋಜಿಸಬೇಕು ಎಂದರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ರಾಜ್ಯ ಸಂಘದಿಂದ ನಗದು, ಪ್ರಶಸ್ತಿ ಪತ್ರ ಬಹುಮಾನದ ಜೊತೆಗೆ ಸ್ಮರಣಿಕೆ ನೀಡಲಾಗುವುದೆಂದರು.ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಘದ ಜಿಲ್ಲಾಧ್ಯಕ್ಷ ವಿ.ರವಿಕುಮಾರ್ ಮಾತನಾಡಿ, ರಾಜ್ಯ ಸಂಘದ ನಿರೀ–ಕ್ಷೆಗೂ ಮೀರಿ ಜಿಲ್ಲಾ ಸಂಘವೂ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಸಂಘಟಿಸಲಿದೆ. ಕಾರ್ಯಕ್ರಮದ ಯಶಸ್ವಿಗೆ ಜಿಲ್ಲಾ ಸಂಘ ತಾಲೂಕು ಸಂಘಗಳ ಪದಾಧಿಕಾರಿಗಳನ್ನು ಕರೆದು ವಿವಿಧ ಜವಾಬ್ದಾರಿಗಳನ್ನು ನೀಡಲು ಉಪ ಸಮಿತಿಗಳನ್ನು ರಚಿಸಲಾಗುವುದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಬರುವ ವಿದ್ಯಾರ್ಥಿ ಪೋಷಕರಿಗೆ ಜಿಲ್ಲೆಯ ಪ್ರಮುಖ ಸ್ಥಳಗಳ ಭೇಟಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ರಾಜ್ಯ ಖಜಾಂಚಿ ವಾಸುದೇವಹೊಳ್ಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ರಾಜ್ಯ ಸಮಿತಿ ಸದಸ್ಯರಾದ ಎನ್.ಚಂದ್ರಶೇಖರ್ ಮತ್ತಿತರರು ವೇದಿಕೆಯಲ್ಲಿದ್ದರು.ಸಭೆಯಲ್ಲಿ ಜಿಲ್ಲಾ ಸಂಘದ ಪದಾಧಿಕಾರಿಗಳು, ಕಾರ್ಯಕಾರಣಿ ಮಂಡಳಿ ಸದಸ್ಯರು, ವಿವಿಧ ತಾಲೂಕು ಸಂಘಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ಕೇಂದ್ರದ ಹಿರಿಯ ಪತ್ರಕರ್ತರು, ನಿಕಟಪೂರ್ವ ಪದಾಧಿಕಾರಿಗಳು ಉಪಸ್ಥಿತರಿದ್ದು, ಪ್ರತಿಭಾ ಪುರಸ್ಕಾರ ಸಮಾರಂಭದ ಯಶಸ್ವಿನ ಬಗ್ಗೆ ಉಪಯುಕ್ತ ಸಲಹೆಗಳನ್ನು ನೀಡಿದರು.

# ಕೂಲಿ ಕೆಲಸಕ್ಕಾಗಿ ವಲಸೆ ಹೋಗದೆ ನರೇಗಾ ಯೋಜನೆಯ ಸದುಪಯೋಗ ಪಡೆದುಕೊಳ್ಳಿ:ಯೋಜನಾ ನಿರ್ದೇಶಕ ದೇವರಮನಿ

• ಮಲ್ಲಮ್ಮ ನುಡಿ ವಾರ್ತೆಶಹಾಪುರ

ಮೇ.14: ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿಯ ಯೋಜನೆಯಡಿ ನೋಂದಾಯಿತ ಗ್ರಾಮೀಣ ಕೂಲಿ ಕಾರ್ಮಿಕರ ಕುಟುಂಬಕ್ಕೆ ಪ್ರತಿ ವರ್ಷ ನೂರು ದಿನ ಗ್ರಾಮ ಪಂಚಾಯಿತಿಯಿಂದ ನೀಡುವ ಅಕುಶಲ ಕೂಲಿ ಕೆಲಸದ ಪಯೋಗ ಪಡೆದುಕೊಳ್ಳಿ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಶ್ರೀ ಸಿಬಿ ದೇವರಮನಿ ಅವರು ಕೂಲಿಕಾರ್ಮಿಕರಲ್ಲಿ ಮನವಿ ಮಾಡಿದರು.

ಅವರು ಮೇ.14ರಂದು ವಡಗೇರಾ ತಾಲೂಕಿನ ಗುಲಸರಮ ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಪ್ರಗತಿಯಲ್ಲಿದ್ದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿಯ ಪ್ರಗತಿ, ಗುಣಮಟ್ಟ ಹಾಗೂ ಭೌತಿಕ ಸ್ಥಿತಿ ವೀಕ್ಷಿಸಿ, ಕೂಲಿ ಕಾರ್ಮಿಕರ ಸಮಸ್ಯೆ ಆಲಿಸಿ ಮಾತನಾಡಿದರು.

ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಸಕಾಲದಲ್ಲಿ ಕೂಲಿ ಪಾವತಿಯಾಗುತ್ತಿದೆಯೇ, ಕೆಲಸದ ಸ್ಥಳದಲ್ಲಿ ಕುಡಿಯುವ ನೀರು, ನೆರಳು, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಸೇರಿದಂತೆ ಇತರೆ ಅಗತ್ಯ ಮೂಲ ಸೌಲಭ್ಯಗಳಿವೆ ಎಂದು ವಿಚಾರಿಸಿದ ಅವರು, ಕಾಮಗಾರಿಯಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕರ ಮಸ್ಟರ್ ರೂಲ್ ಹಾಗೂ ಫೋಟೋ ಆಧಾರಿತ ಹಾಜರಾತಿ ಪರಿಶೀಲಿಸಿದರು.

ನರೇಗಾ ಯೋಜನೆ ಗ್ರಾಮೀಣ ಪ್ರದೇಶದ ದುಡಿಯುವ ಕೈಗಳಿಗೆ ಆಸರೆಯಾಗಬೇಕು.



ಅನುಷ್ಠಾನ ಮಾಡುವ ಕಾಮಗಾರಿಗಳಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಿ, ನರೇಗಾ ಜಾಬ್ ಕಾರ್ಡ್ ಪಡೆದ ಪ್ರತಿ ಕುಟುಂಬಕ್ಕೂ ವರ್ಷದಲ್ಲಿ ನೂರು ದಿನಗಳ ಕೂಲಿ ಕೆಲಸ ನೀಡುವ ಖಾತ್ರಿಯಾಗಬೇಕು ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ನರೇಗಾ ಯೋಜನೆಯಡಿ ಈ ಹಿಂದಿನ ವರ್ಷದಲ್ಲಿ ಅನುಷ್ಠಾನ ಮಾಡಿ ಅಪೂರ್ಣಗೊಳಿಸಿದ ವಿವಿಧ ಅಭಿವೃದ್ಧಿ ಕಾಮಗಾರಿಗಳಲ್ಲಿ ಭಾಕಿ ಉಳಿದ ಅನುದಾನಕ್ಕೆ ಅನುಗುಣವಾಗಿ ಕೂಲಿಕಾರ್ಮಿಕರಿಗೆ ಕೆಲಸ ಕೊಡಿ, ನರೇಗಾ ಯೋಜನೆಯಡಿ ಕೆಲಸ ಇಲ್ಲ ಎಂದು ಹೇಳಬೇಡಿ, ಈಗಾಗಲೇ 2025-26ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅನುಮೊದಿಸಿದ ಸಮುದಾಯ ಕಾಮಗಾರಿಗಳು ಇದ್ದರೆ ಗ್ರಾಮ ಪಂಚಾಯಿತಿಗಳಲ್ಲಿನ ಕೂಲಿ ಬೇಡಿಕೆಗೆ ಅನುಸಾರ ಅನುಮೊದನೆ ಪಡೆದು ಕೆಲಸ ಆರಂಭಿಸಿ ಎಂದು ತಿಳಿಸಿದರು.

ಮಹಾತ್ಮಗಾಂಧಿ ನರೇಗಾ ಯೋಜನೆ ಬಂದಾಗಿದೆ ಎಂದು ಜನರಲ್ಲಿ ತಪ್ಪು ಮಾಹಿತಿ ಹೊಗುತ್ತಿದೆ. ಇದು ಸರಿಯಲ್ಲ, ಬೇಸಿಗೆ ಇರುವುದರಿಂದ ರೈತರ ಹೊಲದಲ್ಲಿ ಕೂಲಿಕಾರರಿಗೆ ಕೆಲಸ ಸಿಗುತ್ತಿಲ್ಲ, ಹೀಗಾಗಿ ಗ್ರಾಮೀಣ ಕೂಲಿಕಾರರು ಕೆಲಸಕ್ಕಾಗಿ ಗ್ರಾಮ ಪಂಚಾಯಿತಿಗೆ ಬಂದರೆ ಸರಿಯಾದ ಮಾಹಿತಿ ನೀಡಿ. ಕೂಲಿ ಕೆಲಸಕ್ಕಾಗಿ ದೂರದ ನಗರ ಪಟ್ಟಣಗಳಿಗೆ ವಲಸೆ ಹೊಗದಂತೆ ಕೆಲಸ ಕೊಡಬೇಕು ಎಂದರು

ಈ ವೇಳೆ ಯಾದಗಿರಿ ಜಿಲ್ಲಾ ಪಂಚಾಯಿತಿ ನರೇಗಾ ಯೋಜನೆಯ ಎಡಿಪಿಸಿ ಬನ್ನಪ್ಪ ಬೈಟಪುಲ್ಲಿ ಜಿಲ್ಲಾ ಐಇಸಿ ಸಂಯೋಜಕ ಪರಶುರಾಮ ಜೀನಕೇರಾ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಕಾಯಕ ಬಂದುಗಳು ಹಾಗೂ ಕೂಲಿ ಕಾರ್ಮಿಕರು ಇದ್ದರು.

# ಮಾವಿನ ಕೆರೆಗೆ ಜಿಲ್ಲಾಧಿಕಾರಿ ಎಸ್.ಪೂವಿತಾ ಭೇಟಿ: ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.14: ರಾಯಚೂರು ನಗರದ ಐತಿಹಾಸಿಕ ಮಾವಿನಕೆರೆ ಪ್ರದೇಶಕ್ಕೆ ಜಿಲ್ಲಾಧಿಕಾರಿಗಳಾದ ಎಸ್.ಪೂವಿ ಅವರು ಮೇ.13ರ ಬುಧುವಾರ ದಂದು ಭೇಟಿ ನೀಡಿ ಪರಿಶೀಲಿಸಿದರು.ಕೆರೆ ಅಭಿವೃದ್ಧಿ ಕಾಮಗಾರಿಯ ವೀಕ್ಷಣೆ ನಡೆಸಿ, ಜಿಲ್ಲಾಧಿಕಾರಿ ಎಸ್.ಪೂವಿತಾ ಅವರು ಮಾತನಾಡಿ, ಕೆರೆ ಅಭಿವೃದ್ಧಿ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ಕಾಮಗಾರಿಗೆ ಯಾವುದೇ ಅಡೆತಡೆ ಬಂದರೆ ಕೂಡಲೇ ಜಿಲ್ಲಾಡಳಿತವನ್ನು ಸಂಪರ್ಕ ಮಾಡಬೇಕು. ಹಾಗೂ ಕಾಮಗಾರಿಯನ್ನು ಗುಣಮಟ್ಟದಿಂದ ಮಾಡಬೇಕೆಂದು



ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಂತರ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಂದ ಕೆರೆಯ ವಿಸ್ತರಣೆ ಮಾಹಿತಿಯನ್ನು ಪಡೆದರು. ಮಾವಿನಕೆರೆಗೆ ಬೇರೆ ಬೇರೆ ಕಡೆಗಳಿಂದ ಗಟಾರು ನೀರು ಕೆರೆಗೆ ಹರಿದು ಬರದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರು ಕೆರೆಗೆ ಕಸ ಮತ್ತು ಪ್ಲಾಸ್ಟಿಕ್ ಎಸೆಯದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಕೆರೆ ಅಭಿವೃದ್ಧಿ ಮತ್ತು ಸಂರಕ್ಷಣಾಧಿಕಾರಿ ಆನಂದ ರೆಡ್ಡಿ, ಕೆರೆ ಇಂಜಿನಿಯರ್ ಬಸವರಾಜ ಸೇರಿದಂತೆ ಗುತ್ತೇದಾರರು, ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಮಾಸಾಶನ ಯೋಜನೆಯಡಿ : ಜೀವಿತಾವಧಿ ಪ್ರಮಾಣ ಪತ್ರವನ್ನು ಸಲ್ಲಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 14 : 2026-27ನೇ ಸಾಲಿನ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ ಯೋಜನೆಯಡಿ ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ, ಕಲಾವಿದರುಪಿಂಚಣಿ ಪಡೆಯುವ ಫಲಾನುಭವಿಗಳು ತಮ್ಮ ಜೀವಿತಾವಧಿ ಪ್ರಮಾಣ ಪತ್ರವನ್ನು ಸಲ್ಲಿಸಲು ಆಹ್ವಾನಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಮಾಸಾಶನ ಯೋಜನೆಯಡಿ ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ, ಕಲಾವಿದರು ಮತ್ತು ವಿಧವಾ ಮಾಸಾಶನವನ್ನು ಪಡೆಯುವ ಹಾಗೂ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ6 ತಿಂಗಳಿಗೊಮ್ಮೆ ಆರ್ಥಿಕ ವರ್ಷದ ಅಂದರೆ2026ರ ಮಾರ್ಚ್, ಸೆಪ್ಟೆಂಬರ್ ಮಾಹೆಯಲ್ಲಿ ಎರಡು ಬಾರಿ ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು (ಜೀವಿತಾವಧಿ ಪ್ರಮಾಣ ಪತ್ರ)ವನ್ನು ಈ ಕಛೇರಿಗೆ ಸಲ್ಲಿಸಬೇಕು. ಮಾಸಾಶನ ಯೋಜನೆಯಡಿ ಸಾಹಿತಿ, ಕಲಾವಿದರು ಮತ್ತು ವಿಧವಾ ಮಾಸಾಶನವನ್ನು ಪಡೆಯುವ ಅರ್ಹ ಫಲಾನುಭವಿಗಳು ತಮ್ಮ ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು (ಜೀವಿತಾವಧಿ ಪ್ರಮಾಣ ಪತ್ರ)ವನ್ನು 2026ರ ಮಾರ್ಚ್, ಸೆಪ್ಟೆಂಬರ್ ಮಾಹೆಯಲ್ಲಿ ಈ ಕಛೇರಿಗೆ ಕಳುಹಿಸಿಕೊಡಬೇಕು, ವಿಫಲರಾದಲ್ಲಿ ಈ ಮಾಹೆವಾರು ಪಾವತಿಸುವ ಪಿಂಚಣಿ ಮೊತ್ತವನ್ನು ತಡೆಹಿಡಿಯಲಾಗುದೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಪದಗ್ರಹಣ

• ಮಲ್ಲಮ್ಮ ನುಡಿ ವಾರ್ತೆವಿಜಯಪುರ

ಮೇ.14: ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘಟನೆಯ ರಾಜ್ಯ ಸಮಿತಿಯ ಪದಾಧಿಕಾರಿಗಳ ನೇತೃತ್ವದಲ್ಲಿ ವಿಜಯಪುರ ಜಿಲ್ಲೆಯ ಸಮಸ್ತ ತಾಲೂಕಾಗಳ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಮಾಣ ವಚನ ಸ್ವೀಕಾರ ಸಮಾರಂಭವು ಬುಧವಾರದಂದು ವಿಜಯಪುರದ ಗಗನ ಮಹಲ ಗಾರ್ಡನನಲ್ಲಿ ನೆರವೇರಿತು.

ಈ ವೇಳೆ ಸುತ್ತ -ಮುತ್ತಲಿನ ಜಿಲ್ಲೆಗಳ ಹಲವಾರು ತಾಲೂಕಿನ ಬೆಳೆ ಸಮೀಕ್ಷೆದಾರ ಸಂಘಟನೆಯ ಪದಾಧಿಕಾರಿಗಳು ಕೂಡಾ ಭಾಗವಹಿಸಿದ್ದರು. ಸರಿಸುಮಾರು 60 ಜನ ಪದಾಧಿಕಾರಿಗಳಿಗೆಲ್ಲ ರಾಜ್ಯ ಅಧ್ಯಕ್ಷರಾದ ಭೀಮಪ್ಪ ಲಕ್ಷ್ಮಣ ತಳವಾರ ಅವರು ಪ್ರಮಾಣ ವಚನ ಬೋಧನೆಯನ್ನು ಸಂಸ್ಥಾಪಕರಾದ ನರಸಪ್ಪ ಅರ್ಜುನ್ ನಾವಿ ಅವರ ಸಮ್ಮುಖದಲ್ಲಿ ನೆರವೇರಿಸಿದರು.

ತದನಂತರ ವಿಜಯಪುರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವರಾದ



ಸೋಮಶೇಖರ ನಾಯ್ಕೋಡಿ ಅವರ ನೇತೃತ್ವದಲ್ಲಿ ಎಲ್ಲಾ ತಾಲೂಕಿನ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳೊಡನೆ ಮಾನ್ಯ ಜಿಲ್ಲಾಧಿಕಾರಿಗಲಾದ ಡಾ.ಕೆ. ಆನಂದ ಅವರನ್ನು ಭೇಟಿ ನೀಡಿ ಅವರ ಮುಖಾಂತರ ಸಿದ್ಧರಾಮಯ್ಯ ಮಾನ್ಯ ಮುಖ್ಯಮಂತ್ರಿಗಳವರಿಗೆ ಮನವಿ ಸಲ್ಲಿಸಿ ಕೂಡಲೇ ನಮ್ಮ ಬೇಡಿಕೆ ಈಡೇರಿಸುವಂತೆ ಆಗ್ರಹ ಮಾಡಲಾಯಿತು.

ಇದೇವೇಳೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಅವರನ್ನು ಭೇಟಿ ಮಾಡಿ ಅವರ ಮುಖಾಂತರ ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರಿಗೂ ಮನವಿ ಸಲ್ಲಿಸುತ್ತಾ ಕರ್ನಾಟಕದ ಸಮಸ್ತ 23,720 ಜನ ಬೆಳೆ ಸಮೀಕ್ಷೆದಾರರಾದ ನಮ್ಮನ್ನೆಲ್ಲ ಕನಿಷ್ಠ ವೇತನದ ನೀತಿ ಇದರ ಅಡಿಯಲ್ಲಿ ದಿನಗೂಲಿ ಕಾರ್ಮಿಕರನ್ನಾಗಿ ನೇಮಕ ಮಾಡಿಕೊಂಡು ವರ್ಷ ಪೂರ್ತಿ ಕೆಲಸ ನೀಡಬೇಕೆಂದು ಮನವಿ ಪತ್ರವನ್ನು ಸಲ್ಲಿಸಿ ಮಾತನಾಡಿದರು .

ಈ ವೇಳೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಬೆಳೆ ಸಮೀಕ್ಷೆದಾರರು ಹಾಗೂ ಎಲ್ಲಾ ತಾಲೂಕಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯ ಉಪಲೋಕಾಯುಕ್ತ ಗೌರವಾನ್ವಿತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:14: ಕರ್ನಾಟಕ ರಾಜ್ಯದ ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಶ್ರೀ ಕೆ.ಎನ್. ಫಣೀಂದ್ರ ಅವರು ಇದೇ ಮೇ 29 ಹಾಗೂ 30 ರಂದು ಯಾದಗಿರಿ ಜಿಲ್ಲೆಗೆ ಭೇಟಿ ನೀಡಿ ಈ ಕೆಳಕಂಡ ಕಾರ್ಯಕ್ರಮ ಗಳಲ್ಲಿ ಭಾಗವಹಿಸಲಿದ್ದಾರೆ.

ಮೇ 28ರಂದು ರಾತ್ರಿ 8-15 ಗಂಟೆಗೆ ಯಶವಂತಪುರ ರೈಲ್ವೆ ನಿಲ್ದಾಣಗೆ ತೆರಳಿ, ರಾತ್ರಿ 8-30 ಗಂಟೆಗೆ ಬೆಂಗಳೂರಿನಿಂದ ರೈಲು ಮೂಲಕ ಹೊರಟು, ಮೇ 29ರಂದು ಬೆಳಿಗ್ಗೆ 4 ಗಂಟೆಗೆ ಯಾದಗಿರಿಗೆ ಆಗಮಿಸುವರು. ನಂತರ ನಗರದ ಲೋಕೋಪಯೋಗಿ ಇಲಾಖೆ ಸರ್ಕ್ಯೂಟ್ ಹೌಸ್ನಲ್ಲಿ ಸಂಕ್ಷಿಪ್ತ ವಾಸ್ತವ್ಯ ಮಾಡುವರು.

ಅಂದು ಬೆಳಿಗ್ಗೆ 9 ಗಂಟೆಗೆ ಕಾರ್ಯಕ್ರಮವೊಂದರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 10 ರಿಂದ ಮಧ್ಯಾಹ್ನ 1-30 ಗಂಟೆಯವರೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ದೂರುದಾರರು , ಪ್ರತಿವಾದಿಗಳ ಉಪಸ್ಥಿತಿಯಲ್ಲಿ ಬಾಕಿ ಇರುವ ದೂರುಗಳ ವಿಚಾರಣೆ ನಡೆಸುವರು. ನಂತರ ಪುನಃ ಮಧ್ಯಾಹ್ನ 2-30 ರಿಂದ ಸಂಜೆ 5-30 ಗಂಟೆಯವರೆಗೆ ದೂರುದಾರರ ಹಾಗೂ ಪ್ರತಿವಾದಿಗಳ ಉಪಸ್ಥಿತಿಯಲ್ಲಿ ಬಾಕಿ ಇರುವ ದೂರುಗಳ ಬಗ್ಗೆ ವಿಚಾರಣೆ ನಡೆಸುವರು. ನಂತರ ಸರ್ಕ್ಯೂಟ್ ಹೌಸ್ನಲ್ಲಿ ಸಂಕ್ಷಿಪ್ತ ವಾಸ್ತವ್ಯ ಮಾಡುವರು.

ಮೇ 30 ರಂದು ಬೆಳಿಗ್ಗೆ 8ರಿಂದ ಬೆಳಿಗ್ಗೆ 10 ಗಂಟೆಯವರೆಗೆ ಜಿಲ್ಲೆಯ ವಿವಿಧ ಸ್ಥಳಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡುವರು. ಅಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ನಗರದ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ " ಸಾರ್ವಜನಿಕ ಆಡಳಿತದಲ್ಲಿ ನ್ಯಾಯಾಂಗ ಅಧಿಕಾರಿಗಳು ಹಾಗೂ ನ್ಯಾಯವಾದಿಗಳ ಕರ್ತವ್ಯ" ವಿಷಯದ ಕುರಿತು ಸಭೆ ಹಾಗೂ ಸಮಾಲೋಚನೆ ನಡೆಸುವರು.

ಅಂದು ಸಂಜೆ 4 ಗಂಟೆಗೆ ಯಾದಗಿರಿ ಜಿಲ್ಲೆಯ ವಿವಿಧ ಸ್ಥಳಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡುವರು. ನಂತರ ಸರ್ಕ್ಯೂಟ್ ಹೌಸ್ನಲ್ಲಿ ಸಂಕ್ಷಿಪ್ತ ವಾಸ್ತವ್ಯ ನಡೆಸಿ, ರಾತ್ರಿ 10-05 ಗಂಟೆಗೆ

ರೈಲ್ವೆ ಮೂಲಕ ಯಾದಗಿರಿಯಿಂದ ಯಶವಂತ್ಪುರ್ ಗೆ ಪ್ರಯಾಣ ಬೆಳೆಸುವರು.

# ಮಹಾಶಕ್ತಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಡಾ. ಶೈಲೇಂದ್ರ ಬೆಲ್ದಾಳೆ ಅವರು ಬೀದರ ದಕ್ಷಿಣ ಕ್ಷೇತ್ರದ ಶಾಸಕರಾಗಿ 3ವರ್ಷ ಯಶಸ್ವಿಯಾಗಿ ಪೂರೈಸಿದಕ್ಕೆ ಬುಧವಾರ ನಿರ್ಣಾ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಇವರ ನೇತೃತ್ವದಲ್ಲಿ ನಿರ್ಣಾ ಗ್ರಾಮದ ಓಂ ಪರಮಧಾಮ ಆಶ್ರಮದಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಶಿಕ್ಷಕರಿಗೆ ಪೆನ್ ವಿತರಿಸಿದರು. ನಂತರ ಡಾ. ರವಿ ಸ್ವಾಮಿ ನಿರ್ಣಾ ಮಾತನಾಡಿ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಈ ಭಾಗದ ಶಾಸಕರಾಗಿ ಆಯ್ಕೆಯಾದ ನಂತರ ಅಭಿವೃದ್ಧಿಗಾಗಿ ಹಗಲಿರಳು ಶ್ರಮಿಸುತ್ತಿದ್ದಾರೆ. 100 ವರ್ಷದಲ್ಲಿ ಆಗದ ಕೆಲಸ ಕಾರ್ಯಗಳು ಕೇವಲ 3 ವರ್ಷಗಳಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳು ಮಾಡಿ ಇತಿಹಾಸ ಸೃಷ್ಟಿಸಿದ್ದಾರೆ. ಈ ಭಾಗದ ಸಮಗ್ರ ಅಭಿವೃದ್ಧಿ ಮಾಡುವುದೇ ಅವರ ಕನಸಾಗಿದೆ, ಶೀಘ್ರದಲ್ಲೇ ನನಸಾಗಲಿ ಎಂದರು. ಈ ಸಂದರ್ಭದಲ್ಲಿ ರಮೇಶ ಧೂಳ, ಹಮ್ಮಿದ ಆರ್.ಸಿ.ಸಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾರವಾರ ಸೇನಾ ಆಯ್ಕೆಯ ಪೂರ್ವ ಸಿದ್ಧತೆ, ವೃತ್ತಿ ಮಾರ್ಗದರ್ಶನ ತರಬೇತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 14 : ವೀರ ಬಹದ್ದೂರ ಹೆಂಜಾ ನಾಯ್ಕ ಸೇನಾ, ಆಯ್ಕೆ ಪೂರ್ವ ತರಬೇತಿ ಶಾಲೆ ಮಾಜಾಳಿ, ಕಾರವಾರದಲ್ಲಿ ಸೇನಾ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಭಾರತೀಯ ಸೇನೆ, ಇತರೆ ಯುನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), ಹಾಗೂ 3(ಬಿ)ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, 2026-27ನೇ ಸಾಲಿನ 1ನೇ ತಂಡದ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಈಗಾಗಲೇ ಆಹ್ವಾನಿಸಲಾಗಿದ್ದು, (ಬಾಲಕರಿಗೆ ಮಾತ್ರ) 2026ರ ಮೇ 28ರ ಒಳಗೆ ಅರ್ಜಿಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.20ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.14 : ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.20ರ ಬೆಳಿಗ್ಗೆ08 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಕಲ್ಮಲಾ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 8ರಿಂದ ಕಲ್ಮಲಾ, ಮುರಾಂಪುರ, ಸುಲ್ತಾನಪುರ, ಜಾಗೀರವೆಂಕಟಪುರ, ಮಂಚ್ಲಾಪುರ, ಜೇಗರಕಲ್, ರಘುನಾಥನಹಳ್ಳಿ, ವಿಜಯನಗರಕ್ಯಾಪ್, ಮಾರೆಮ್ಮಕ್ಯಾಪ್, ಹುಣಿಸಿಹಾಳಹುಡ, ಕಸ್ಬೆಕ್ಯಾಂಪ್, ಸೀತಾನಗರ ನಗರ ಕ್ಯಾಂಪ್, ಹೊಸ್ಪೇಟ, ಮರ್ಚೆಡ್, ಗೋನಾಳ, ಪತ್ತೇಪುರ, 7ಮೇಲ್ ಇಂಡಸ್ಟ್ರೀಯಲ್ ಏರಿಯಾ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.14: ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2026-27ನೇ ಶೈಕ್ಷಣಿಕ ಸಾಲಿಗೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ ವಿಳಾಸ: https://sw.kar.nic.in ಮೂಲಕ ಜೂನ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಶಾಲಾ ಅಥವಾ ಕಾಲೇಜಿನ ಮುಖ್ಯಸ್ಥರಿಂದ ಸಹಿ ಪಡೆದು ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ ರಾಯಚೂರು ಇವರ ಕಚೇರಿಗೆ ಕಚೇರಿಯ ಸಮಯದಲ್ಲಿ ಸಲ್ಲಿಸಬೇಕು ಎಂದು ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್-1 ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.14 : ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2026-27ನೇ ಶೈಕ್ಷಣಿಕ ಸಾಲಿಗೆ ಇಲಾಖೆ ವ್ಯಾಪ್ತಿಯಲ್ಲಿ ಬರುವ 1 ರಿಂದ 5ನೇ ತರಗತಿಗೆ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳಿಗೆ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಕಚೇ-ರಿಯ ಸಮಯದಲ್ಲಿ ಪಡೆಯಬಹುದಾಗಿದೆ. ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಭರ್ತಿ ಮಾಡಿ, ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ ರಾಯಚೂರು ಇವರ ಕಚೇರಿಗೆ ಕಚೇರಿಯ ಸಮಯದಲ್ಲಿ ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್-1 ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಷ್ಠಿತ ಶಾಲೆಗಳ ಪ್ರವೇಶ ಪರೀಕ್ಷೆ ಮೇ.24ಕ್ಕೆ ಮುಂದೂಡಿಕೆ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.14: ಸಮಾಜ ಕಲ್ಯಾಣ ಇಲಾಖೆಯಿಂದ 2026-276ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಪ್ರವೇಶಯು ಮೇ.24ಕ್ಕೆ ಮುಂದೂಡಿಕೆ ಮಾಡಲಾಗಿದೆ.

ಪ್ರತಿಷ್ಠಿತ ಶಾಲೆಯ ವಿದ್ಯಾರ್ಥಿಗಳಿಗೆ ಈ ಹಿಂದೆ ಮೇ.17ರಂದು ಪ್ರವೇಶ ಪರೀಕ್ಷೆ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಈ ಪ್ರವೇಶ ಪರೀಕ್ಷೆಯನ್ನು ಮುಂದೂಡಿ ಮೇ.24ರ ಭಾನುವಾರ ಬೆಳಿಗ್ಗೆ 9.30ಗಂಟೆಗೆ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಸ್ಟೇಷನ್ ರಸ್ತೆ, ರಾಯಚೂರುನಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ.

ಪ್ರವೇಶ ಪರೀಕ್ಷೆಯ ಪ್ರಮಾಣ ಪತ್ರವನ್ನು ಪಡೆಯಲು ಇಲಾಖಾ ವೆಬ್‌ಸೈಟ್ ವಿಳಾಸ: www.sw.kar.nic.in ನಲ್ಲಿ ಡೌನ ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 21 ರಂದು ಸರ್ಕಾರಿ ಐಟಿಐ ಕಾಲೇಜಿನಲ್ಲಿ ಕ್ಯಾಂಪಸ್ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ರೇಡಿಯೋ ಪಾರ್ಕ್ ಪ್ರದೇಶದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬೆಂಗಳೂರಿನ ಟೊಯೋಟಾ ಕಿರ್ಲೋಸ್ಕರ್ ಕಂಪನಿಯಲ್ಲಿ ಅಪ್ರೆಂಟಿಸ್ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.ಮೇ 21 ರಂದು ಬೆಳಿಗ್ಗೆ 9 ಗಂಟೆಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಕ್ಯಾಂಪಸ್ ಸಂದರ್ಶನ ನಡೆಯಲಿದೆ.*ಅರ್ಹತೆ:*ಫಿಟ್ಟರ್, ಟರ್ನರ್, ಎಲೆಕ್ಟ್ರಿಷಿಯನ್, ವೆಲ್ಡರ್, ಇ.ಎಂ., ಎಂ.ಎಂ.ವಿ., ಡೀಸೆಲ್ ಮೆಕ್ಯಾನಿಕ್, ಎಂ.ಇ.ವಿ ವೃತ್ತಿಗಳಲ್ಲಿ ಅಂತಿಮ ವರ್ಷದ ತರಬೇತಿ ಪಡೆಯುತ್ತಿರುವವರು ಅಥವಾ ಐಟಿಐ ಪೂರ್ಣಗೊಳಿಸಿದ ಆಸಕ್ತ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.*ಅಗತ್ಯವಿರುವ ದಾಖಲೆಗಳು:*

ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಐಟಿಐ ಅಂಕಪಟ್ಟಿ, ಎರಡು ಇತ್ತೀಚಿನ ಭಾವಚಿತ್ರಗಳು, ಆಧಾರ್ ಕಾರ್ಡ್ ಪ್ರತಿ, ಬಯೋಡೇಟಾ, ತಮ್ಮ ಸ್ಮಾರ್ಟ್ ಫೋನ್ ಅನ್ನು ತಪ್ಪದೇ ತರಬೇಕು.ಸೂಚನೆ: ಅಭ್ಯರ್ಥಿಗಳ ವಯಸ್ಸು 18 ವರ್ಷ ಮೇಲ್ಪಟ್ಟಿರಬೇಕು. ಆಯ್ಕೆ ಪ್ರಕ್ರಿಯೆಯು ಲಿಖಿತ ಪರೀಕ್ಷೆ, ಸಂದರ್ಶನ ಮತ್ತು ವೈದ್ಯಕೀಯ ಪರೀಕ್ಷೆಗಳನ್ನು ಒಳಗೊಂಡಿರುತ್ತದೆ.

ಅರ್ಹ ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನದಲ್ಲಿ ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಸಂಸ್ಥೆಯ ಪ್ರಾಚಾರ್ಯ ಕೆ.ಹೆಚ್.ಎಂ. ಪಂಡಿತಾರಾಧ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಿಚಿತ ವ್ಯಕ್ತಿ ಆತ್ಮಹತ್ಯೆ ವಾರಸುದಾರರ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 14:ನಗರದ ರೈಲ್ವೇ ನಿಲ್ದಾಣದ ಸಮೀಪ ರೈಲಿಗೆ ತಲೆಕೊಟ್ಟು ಅಪರಿಚಿತ ವ್ಯಕ್ತಿಯೊಬ್ಬ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಈ ಕುರಿತು ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗಾಗಿ ಸಹಕರಿಸಬೇಕು.ಮೇ 13 ರಂದು ತೋರಣಗಲ್ಲು ರೈಲ್ವೇ ನಿಲ್ದಾಣದ ಯಾರ್ಡ್ ಹತ್ತಿರದ ರೈಲ್ವೇ ಕಿ.ಮೀ ನಂ: 175/0 ಬಳಿ ಚಲಿಸುವ ರೈಲಿಗೆ ತಲೆಕೊಟ್ಟು ಸುಮಾರು 30 ವರ್ಷದ ಅಪರಿಚಿತ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಮೃತನ ಬಗ್ಗೆ ಯಾವುದೇ ಮಾಹಿತಿ ಲಭ್ಯವಿದ್ದಲ್ಲಿ ಸಾರ್ವಜನಿಕರು ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಸ್ಪರ್ಧಾತ್ಮಕ ಪರೀಕ್ಷೆಗೆ ನಿರಂತರ ಪ್ರಯತ್ನ ಅಗತ್ಯ: ಅಂಬರಾಯ ಮಡ್ಡೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೀವನದಲ್ಲಿ ಯಶಸ್ಸು ಸಾಧಿಸಲು ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವ ತಯಾರಿಗಾಗಿ ನಿರಂತರ ಪ್ರಯತ್ನ ಬಹಳ ಮುಖ್ಯ ಎಂದು ಶಿಕ್ಷಕ ಹಾಗೂ ಸಾಹಿತಿ ಅಂಬರಾಯ ಮಡ್ಡೆ ಹೇಳಿದರು.

ನಗರದ ಎಂ.ಎನ್. ದೇಸಾಯಿ ಪದವಿ ಕಾಲೇಜಿನಲ್ಲಿ ಆಯೋಜಿಸಿದ್ದ "ಸ್ಪರ್ಧಾತ್ಮಕ ಪರೀಕ್ಷೆ ಪೂರ್ವ ತಯಾರಿ" ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿಷಯ ಸಂಗ್ರಹ, ತಾಳ್ಮೆ, ಆತ್ಮವಿಶ್ವಾಸ, ನಿರಂತರ ಪರಿಶ್ರಮ ಹಾಗೂ ಧನಾತ್ಮಕ ಮನೋಭಾವ ವಿದ್ಯಾರ್ಥಿಗಳಲ್ಲಿ ರೂಢಿಯಾದಾಗ ಮಾತ್ರ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷ ಸಂದೀಪ್ ದೇಸಾಯಿ, ಕಾರ್ಯದರ್ಶಿ ಜಗನ್ನಾಥ ನಾಗೂರ ಸೇರಿದಂತೆ ಸಿಬ್ಬಂದಿ ವರ್ಗದವರಾದ ಮಂಜುನಾಥ್ ಬನ್ನೂರ್, ನಾಗರಾಜ್ ಪಟ್ಟಣಕರ, ಅಮರ್ ಹಾಗರಗಿ, ಶಿವಶರಣಪ್ಪ ಪೂಜಾರಿ, ಮುರುಗೇಶ್ ದಂಡೋತಿ, ರೇವಣಸಿದ್ದಪ್ಪ ಕುಂಬಾರ, ರಾಹುಲ್ ಕಕ್ಕೇರಿ, ಶ್ರೀದೇವಿ ಹಿರೇಮಠ, ಗುರುವಾಯಿ ವಾಡಿ, ಅಂಬಿಕಾ ಪಟ್ಟೆ, ರಾಧಿಕಾ ಗುತ್ತೇದಾರ್, ರೇಷ್ಮಾ ರಾಥೋಡ್, ಡಾ. ನಾಗಮ್ಮ ಹೊಸಮನಿ, ಚೆನ್ನಮ್ಮ ಮೇಡಂ, ಜ್ಯೋತಿ ಹಂಗರಗಿ, ಶಿಲ್ಪಾ ಚೆಟ್ಟಿ, ಗೀತಾ ಇಂಗಿನ ಹಾಗೂ ಸಂತೋಷ್ ಲಸ್ಕರ್ ಉಪಸ್ಥಿತರಿದ್ದರು.

ನೂರಾರು ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿಗಳಲ್ಲಿ ಸಾಮಾನ್ಯ ಜ್ಞಾನ, ಆತ್ಮವಿಶ್ವಾಸ ಮತ್ತು ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಅತ್ಯಂತ ಉಪಯುಕ್ತವಾಗಿವೆ ಎಂದು ಕಾಲೇಜಿನ ಆಡಳಿತ ಮಂಡಳಿ ತಿಳಿಸಿತು.

# ಸಂಬಂಧವನ್ನು ಗಟ್ಟಿಗೊಳಿಸುವ ಜಾನಪದ ಸಂಸ್ಕೃತಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಾನಪದ ಸಂಸ್ಕೃತಿಯು ಅನುಭಾವದಿಂದ ಕೂಡಿದ್ದಾಗಿದ್ದು, ಅದು ದೇಶದ ಜನರ ಜೀವನ ಪದ್ಧತಿ, ಸಂಸ್ಕಾರ, ಆಚಾರ-ವಿಚಾರ, ಬದುಕುವ ಕಲೆ, ತಾನು, ತನ್ನವರು, ಎಲ್ಲರು ಒಂದೇ ಎಂಬ ಭಾವನೆಯನ್ನು ಹೊಂದಿದೆ. ಮಗು ಜನಿಸಿದ ನಂತರ ತೊಟ್ಟಿಲು ಆಚರಣೆಯೊಂದಿಗೆ ಆರಂಭವಾಗಿ ಜೀವನದ ಅಂತ್ಯದವರೆಗೆ ಜನಪದ ಪದ್ಧತಿ ಹೊಂದಿದ್ದು, ಸಂಬಂಧಗಳನ್ನು ಗಟ್ಟಿಗೊಳಿಸುತ್ತದೆ ಎಂದು ಗುವಿವಿ ವಿಶ್ರಾಂತ ಪ್ರಾಧ್ಯಾಪಕ, ಜಾನಪದ ಸಾಹಿತಿ ಡಾ.ವಾಸುದೇವ ಸೇಡ ಎಚ್. ಅಭಿಮತಪಟ್ಟರು. ನಗರದ ಸ್ಟೇಡಿಯಂ ಬ್ಯಾಂಕ್ ಕಾಲನಿಯಲ್ಲಿ 'ಕನ್ನಡ ಜಾನಪದ ಪರಿಷತ್'ನ ಜಿಲ್ಲಾ ಘಟಕದ ವತಿಯಿಂದ ಗುರುವಾರ ಏರ್ಪಡಿಲಾಗಿದ್ದ 'ಜೋಗುಳ ಝೇಂಕಾರ ಕಾರ್ಯಕ್ರಮ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪರಿಷತ್ತಿನ ಜಿಲ್ಲಾಧ್ಯಕ್ಷ ಎಂ.ಬಿ.ನಿಂಗಪ್ಪ ಮಾತನಾಡಿ, ಜಾನಪದ ಮರೆತರೆ ಹೆತ್ತ ತಾಯಿಯನ್ನು ಮರೆತಂತೆ. ವಿದೇಶಿ ಸಂಸ್ಕೃತಿ ನಮಗೆ ಮಾರಕವಾಗಿದೆ. ಜಾನಪದ ಸಂಸ್ಕೃತಿಯಲ್ಲಿ ಒಳ್ಳೆಯ ಸಂಬಂಧ, ಗೌರವಗಳಿಗೆ ಆದ್ಯತೆ ನೀಡಲಾಗುತ್ತದೆ. ದೇಶಿಯ ಸೊಗಡನ್ನು ಬಿಂಬಿಸುವ ಹಬ್ಬಗಳು, ಆಚರಣೆಗಳು ನಿರಂತರವಾಗಿ ಜರುಗಬೇಕು. ಈ ನಿಟ್ಟಿನಲ್ಲಿ ನಮ್ಮ ಕನ್ನಡ ಜಾನಪದ ಪರಿಷತ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜಾನಪದ ಸಂಸ್ಕೃತಿಯನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಕಾರ್ಯ ಮಾಡುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಎಚ್.ಬಿ.ಪಾಟೀಲ, ಸದಸ್ಯ ಶಿವಶಂಕರ ಬಿ., ಜಾನಪದ ಕಲಾವಿದೆ ಮಹಾದೇವಿ ಎನ್. ಮುರಡಿ, ಪ್ರಮುಖರಾದ ಮಹಾಂತೇಶ ಬಿರಾದಾರ, ಮನೋಹರ ಗಾಯಕವಾಡ, ಎಂ.ಡಿ.ಬೋರೆ, ಮಲ್ಲಿಕಾರ್ಜುನ ಯಾಳವಾರ, ರವಿಚಂದ್ರ ಮಯೂರ, ಪ್ರಭುರಾಜ ಮಸ್ಕಿ, ಮಯೂರ ಯಾಳವಾರ, ಎಚ್.ಶಂಕರ, ಮರಲಿಂಗಪ್ಪ ಚಟ್ನಳ್ಳಿ, ಮಲ್ಲಿನಾಥ ಮುರಡಿ, ಜಯಶ್ರೀ, ರಮಾ ದರ್ಗಿ, ಚಂದ್ರಕಲಾ, ಭುವನೇಶ್ವರಿ, ಮಂಜುನಾಥ ಮುರಡಿ, ಸಾವಿತ್ರಿ, ಐಶ್ವರ್ಯ,ಲಕ್ಷ್ಮೀ, ಶರಣ್ ನಿರಗುಡಿ, ಶಿವಪುತ್ರಪ್ಪ ಸೇರಿದಂತೆ ಇನ್ನಿತರರಿದ್ದರು. ಹಿರಿಯ ಮಹಿಳೆಯರು ಜಾನಪದ ಗೀತೆಗಳನ್ನು ಹಾಡಿದರು. ನಂತರ ಅವರನ್ನು ಗೌರವಿಸಲಾಯಿತು.

# ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನೆ




• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮೇ.14: ಸಮೀಪದ ವ್ಯಾಕರನಾಳ ಗ್ರಾಮದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮೂರ್ತಿ ಪ್ರತಿಷ್ಠಾಪನೆ ಗುರುವಾರ ಜರುಗಿತು.

ಶ್ರೀ ನಿರುಪಾದೇಶ್ವರ ಅಂಕಲಿಮಠ ಫಕೀರೇಶ್ವರ ಸ್ವಾಮೀಜಿ ಹಾಗೂ ವ್ಯಾಕರನಾಳ ಗ್ರಾಮದ ವಿರಯಸ್ವಾಮಿ ಆಶೀರ್ವಚನ ನೀಡಿದರು. (ಪ್ರೊಫೇಸರ್ ಬಿ. ಕೃಷ್ಣಪ್ಪ ಸ್ಥಾಪಿತ) ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಡಾ!!ಬಾಬು ಜಗಜೀವನ ರಾಮ 119ನೇ ಹಾಗೂ ಡಾ!! ಬಿ ಆರ್ ಅಂಬೇಡ್ಕರ್ ಅವರ 135ನೇ ಜಯಂತೋತ್ಸವ ಹಾಗೂ ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನೆ ಉದ್ಘಾಟನೆ ಸೋಮನಗೌಡ ಪೊಲೀಸ್ ಪಾಟೀಲ್ ವ್ಯಾಕರನಾಳ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ ಎಚ್.ಬಿ ಮುರಾರಿ ಮಸ್ಕಿ ಮಾತನಾಡಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳು ಮತ್ತು ಹಾದಿ ಇಂದಿನ ಸಮಾಜಕ್ಕೆ ಅತ್ಯಗತ್ಯ. ಅವರು ಕೇವಲ ಸಂವಿಧಾನ ಶಿಲ್ಪಿಯಲ್ಲ, ಬದಲಾಗಿ ಸಾಮಾಜಿಕ ಸಮಾನತೆ ಮತ್ತು ನ್ಯಾಯದ ಸಂಕೇತವಾಗಿದ್ದಾರೆ. ಶಿಕ್ಷಣದ ಮಹತ್ವ, ಸಾಮಾಜಿಕ ಸಮಾನತೆ, ಪ್ರಜಾಪ್ರಭುತ್ವ ಮತ್ತು ಸವಿಧಾನದ ಭದ್ರತೆ, ಅನ್ಯಾಯದ ವಿರುದ್ಧ ಹೋರಾಟ, ಶಿಕ್ಷಣ ಸಂಘಟನೆ ಹೋರಾಟ, ಸತ್ಯ ಮತ್ತು ವಿವೇಚನೆ ಹಾದಿಯಲ್ಲಿ ನಡೆಯಬೇಕು, ನಿರಂತರ ಕಲಿಕೆ, ಸುಸ್ತು ಮತ್ತು ಸಮಯ ಪಾಲನೆ, ಅಸಹಾಯಕರಿಗೆ ಸಹಾಯ, ಸ್ವಾಲಂಬನೆ ಬದುಕು ರೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ತಾಲೂಕು ಸಂಚಾಲಕ ಶರಣಪ್ಪ ಕಟ್ಟಿಮನಿ ಮಾತನಾಡಿ ಸಮಾಜದಲ್ಲಿನ ಅಂಬೇಡ್ಕರ್ ಅವರು ಅಂಧಕಾರವನ್ನು ಹೋಗಲಾಡಿಸಿದರು. ಮೂಢನಂಬಿಕೆ, ಜಾತಿ ಪದ್ಧತಿ ಸೇರಿದಂತೆ ಜನರಲ್ಲಿ ಮನೆ ಮಾಡಿರುವ ಮೌಢ್ಯದ ವಿರುದ್ಧ ಹೋರಾಟ ಮಾಡಿದರು. ಜತೆಗೆ, ಸಂವಿಧಾನ ರಚನೆ ಮಾಡಿ ಪ್ರತಿಯೊಬ್ಬರಿಗೂ ಅನುಕೂಲ ಕಲ್ಪಿಸಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷರ ಭಾಷಣ ಜಿಲ್ಲಾ ಸಂಚಾಲಕ ಹನುಮಂತಪ್ಪ ವೆಂಕಟಾಪುರ ಮಾಡಿದರು. ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಸಿದ್ದರಾಮೇಶ್ವರ ಗೌಡ, ಟಿಪಿ ಶರಣಪ್ಪ ನಾಗಲಾಪುರ ಮಾತನಾಡಿದರು.

ಮಸ್ಕಿ ತಾಲೂಕು ಸಂಚಾಲಕ ಮೌನೇಶ ಸುಲ್ತಾನಪುರ, ಲಕ್ಕಪ್ಪ ನಾಗರಾಳ, ನಾಗರಾಜು ಎರಡೋಣ, ಸಂಚಾಲಕ ಬಸವರಾಜ ಬಂಕದ ಮನಿ, ಸಂಗಪ್ಪ ಹಿರೇಮನಿ, ವೀರೇಶ, ಕರಿಯಪ್ಪ, ದ್ಯಾಮಣ್ಣ, ಶಂಕ್ರಪ್ಪ ವ್ಯಾಕರನಾಳ ಗ್ರಾಮಸ್ಥರು ಸೇರಿದಂತೆ ಇತರರಿದ್ದರು.

# ಡಾ.ಫಾರುಕ್ ಮಣ್ಣೂರರ39ನೇ ಹುಟ್ಟುಹಬ್ಬ: ಸೇವಾ ಸಂಕಲ್ಪ ದಿವಸ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ







ಮಣ್ಣೂರ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಫಾರುಕ್ ಮಣ್ಣೂರಅವರು ಕಡಿಮೆ ಅವಧಿಯಲ್ಲಿ ಚಿಕಿತ್ಸೆ ಮೂಲಕ ಹಾಗೂ ಸಮಾಜ ಸೇವೆ ಮೂಲಕ ಕಡಿಮೆ ಅವಧಿಯಲ್ಲಿ ಜನರ ವಿಶ್ವಾಸ ಸಂಪಾದನೆ ಮಾಡಿದ್ದಾರೆ ಶೀಘ್ರದಲ್ಲಿಯೆ ದಿನಾಂಕ ನಿಗದಿ ಮಾಡಿ ಡಾ. ಫಾರುಕ್ ಮಣ್ಣೂರ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಪಕ್ಷದಲ್ಲಿ ಒಳ್ಳೆ ಸ್ಥಾನ ನೀಡುತ್ತೇವೆ ಎಂದು ಎಮ್.ಎಲ್.ಸಿ ಹಾಗೂ ಜಿಲ್ಲಾ ಕಾಂಗ್ರೇಸ್‌ಸಮಿತಿ ಅಧ್ಯಕ್ಷರಾದ ಜಗದೇವ ಗುತ್ತೇದಾರ ಅವರು ಹೇಳಿದ್ದರು.ಕಲಬುರಗಿ ನಗರದಲ್ಲಿ ಡಾ. ಫಾರುಕ ಮಣ್ಣೂರ ಅಭಿಮಾನಿ ಬಳಗದಿಂದ ಡಾ.ಫಾರುಕ್ ಮಣ್ಣೂರ ಅವರ 39ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಸೇವಾ ಸಂಕಲ್ಪ ದೀವಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ನಿಮ್ಮಂತವರು ಜನಪರ, ಬಡವರ ಪರ , ಹಿಂದೂಳಿದವರ ಪರ ಕಾಳಜಿವುಳ್ಳವರು ರಾಜಕೀಯಕ್ಕೆ ಬಂದರೆ ಜನರಿಗೆ ಸಾಮಜಿಕ ನ್ಯಾಯ ನೀಡಲು ಸಾಧ್ಯ, ಕಾಂಗ್ರೆಸ್ ಪಕ್ಷದ ಸಿದ್ದಾಂತ ಕೂಡ ಬಡವರ ಪರಾಗಿದ್ದು ನೀವು ಬಡವರ ಪರ ಕಾಳಜಿ ವುಳ್ಳವರಾಗಿದ್ದು ನಿಮ್ಮಂಥವರ ಅವಶ್ಯಕತೆ ಪಕ್ಷಕ್ಕೆ ಇದೆ ಎಂದರು.

ಜನ್ಮದಿನದ ಪ್ರಯುಕ್ತ ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸುತ್ತಿದ್ದಿರಿ, 2025 ನೆ ಸಾಲಿನಲ್ಲಿ ಉತ್ತಮವಾಗಿ ತೇರ್ಗಡೆಯಾದ 10 ವಿದ್ಯಾರ್ಥಿಗಳಿಗೆ ತಲಾ ರೂ.10000– ವಿದ್ಯಾರ್ಥಿವೇತನ ನೀಡುವುದು, ಖಂಖ/ಏಂಖ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ ಮಾಡಿರುವುದು, ಕಲಬುರಗಿ ಜಿಲ್ಲೆಯ 15 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಯತ್ರ ವಿತರಣೆ , ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಬಡವರ ಪರ ಕಾಳಜಿ ವುಳ್ಳಕಾರ್ಯಕ್ರಮ ಆಯೋಜನೆ ಮಾಡಿರುವುದು ಶ್ಲಾಘನೀಯ ಎಂದರು. ಮಣ್ಣೂರ ಆಸ್ಪತ್ರೆಯ ಮುಖ್ಯಸ್ಥ ಡಾ. ಫಾರುಕ್ ಮಣ್ಣೂರ ಮಾತನಾಡಿ ಇಂದು ಪ್ರತಿಯೊಬ್ಬ ಪೋಷಕರು ಹೇಣ್ಣು ಮಗುವಿಗೆ ಗುಣಮಟ್ಟದ ಶಿಕ್ಷಣ ನೀಡಿ ವಿದ್ಯಾವಂತರಾಗಿ ಮಾಡಿದಾರೆ ಆ ಹೇಣ್ಣು ಮಗು ಇಡಿ ಕುಟುಂಬಕ್ಕೆ ವಿದ್ಯಾವಂತರನ್ನಾಗಿ ಮಾಡುತ್ತದೆ , ಆದಕರಣ ಹೇಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರತಿಯೊಬ್ಬರು ಪ್ರೊಸ್ತಹಿಸಬೇಕು ಎಂದರು. ಮಣ್ಣೂರ ಆಸ್ಪತ್ರೆ ಪ್ರಾರಂಭವಾದಗಿನಿಂದ ನಾನು ಕಲಬುರಗಿ ಜಿಲ್ಲೆಯ 750 ಕ್ಷಯ ರೋಗಿಗಳಿಗೆ ದತ್ತು ಪಡೆದು ಪೌಷ್ಠಿಕ ಆಹರ ವಿತರಣೆ ಮಾಡಲಾಗುತ್ತಿದೆ, ಕಲಬುರಗಿ ಜಿಲ್ಲಾದ್ಯಂತ ಉಚಿತವಾಗಿ ಕುಡಿಯುವ ನೀರು ಪೂರೈಸಲಾಗುತ್ತಿದೆ, ಮಧುಮೇಹ ಮುಕ್ತ ಕಲಬುರಗಿ ಉದ್ದೇಶದಿಂದ ಉಚಿತವಾಗಿ ಮಧೂಮೇಹ ತಪಾಸಣೆ ಅಭೀಯಾನ ಹಮ್ಮಿಕೋಳ್ಳಲಾಗಿದೆ, ಕಲಬುರಗಿ ಜಿಲ್ಲೆಯ ಸುಮಾರು 650 ಬಡ ಹೇಣ್ಣು ಮಕ್ಕಳಿಗೆ ಸುಕನ್ಯ ಸಮೃದ್ಧಿ ಯೋಜನೆ ಅಡಿಯಲ್ಲಿ ದತ್ತು ಪಡೆದು 18 ವರ್ಷಗಳ ವರೆಗೆ ಅವರ ಹಣದ ಕಂತ್ತನ್ನು ಆಸ್ಪತ್ರೆಯಿಂದ ಪಾವತಿಸಲಾಗುತ್ತಿದೆ ಸೇರಿದಂತೆ ಅನೇಕ ಸಮಾಜಿಕ ಕಾರ್ಯ ಮಾಡಿಕೊಂಡು ಬರುತ್ತಿದ್ದೇನೆ ಎಂದು ತಿಳಿಸಿದ್ದರು.

ಈ ಸಂದರ್ಭದಲ್ಲಿ ಶ್ರೀನಿವಾಸ ಸರಡಗಿಯ ಮಹಾಲಕ್ಷ್ಮಿ ಶಕ್ತಿ ಪೀಠದ ಡಾ. ಅಪ್ಪಾರಾವ ದೇವಿ ಮುತ್ಯಾ, ಜನಾಬ ಮೌಲಾನಾ ಅಲ್ತಾಫ ಪಟೇಲ್ ಸಾಹೆಬ್ , ಶ್ರೀ ಮೌನೇಶ್ವರ ಮಠ ಗಂಜಲ ಖೇಡದ ಪೂಜ್ಯ ಶ್ರೀ ನಾಗೇಶ ಮಾಣಿಕ ಅಪ್ಪಾಜಿ, ನಿಲಕಂಠರಾವ ಮೂಲಗೆ, ಡಾ. ಎಸ್. ಬಿ.ಕಾಮರಡ್ಡಿ,ಫರಾಜುಲ್ ಇಸ್ಲಾಂ.ಮರೆಪ್ಪ ಹಳ್ಳಿ, ಡಾ.ರವಿ ಚವ್ಹಾಣ. ಶರಣಬಸಪ್ಪ ಖೇಣಿ,, ಬಾಬುಮಿಯ್ಯ ಮಣ್ಣೂರ, ಡಾ. ಮತೀನ್,ಎಮ.ಡಿ.ಇಸ್ಮಾಯಿಲ್ ,ಜಹೀರ್ ಶಹಾಬಾದ, ರಾಜೇಶ ಯಾನಾಗುಂಟಿ, ಆಮೀರ ನಿಂಬಾಳಕರ್,ಹರ್ಷಾ ಪಿಂಟು, ಹರೀಶ, ನಜೀರ್ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.ಡಾ.ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದ ವತಿಯಿಂಧ ಕಲಬುರಗಿ ನಗರದಲ್ಲಿರುವ ವೃದ್ಧಾಶ್ರಮದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ಹಾಗೂ ಸರ್ಕಾರಿ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸಲು ನಿರ್ದರಿಸಿದ್ದು ಅವರ ಖಾತೆಯ ಪಾಸ್ಬುಕ್ ವಿತರಣೆ, 2026 ನೆ ಸಾಲಿನಲ್ಲಿ ಉತ್ತಮವಾಗಿ ತೇ–ರ್ಗಡೆಯಾದ 10 ಹೆಣ್ಣು ಮಕ್ಕಳಿಗೆ ತಲಾ ರೂ.10000– ವಿದ್ಯಾರ್ಥಿವೇತನ ವಿತರಣೆ, ಖಂಖ/ಏಂಖ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ, ಕಲಬುರಗಿ ಜಿಲ್ಲೆಯ 10 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಉಪಕರಣ ವಿತರಣೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಸಮಾಜಿಕ ಕಾರ್ಯಕ್ರಮ ಆಯೋಜನೆ ಮಾಡಿದ್ದರು.

ಡಾ. ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದಿಂದ ಡಾ. ಫಾರುಕ್ ಅವರ ಬಾರಾಹಿಲ್ಸ್ ನಿವಾಸಿದಂದ ಕಾರ್ಯಕ್ರಮ ನಡೆಯುವ ತ್ರಿ ನೇಂತ್ರ ಕಲ್ಯಾಣ ಮಂಟಪದವರೆಗೆ 200 ಕ್ಕೂ ಬೈಕ ಗಳ ಮೂಲಕ ಬೃಹತ ಬೈಕ ರ್ಯಾಲಿ ಮಾಡಿದ್ದರು.

# 100 ಹಾಸಿಗೆಗಳ ಹೈಟೆಕ್ ಸಾರ್ವಜನಿಕ ಆಸ್ಪತ್ರೆ ಶೀಘ್ರ ಸಾರ್ವಜನಿಕ ಸೇವೆಗೆ :ದಿನೇಶ್ ಗುಂಡೂರಾವ್

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



100 ಹಾಸಿಗೆಗಳ ಹೈಟೆಕ್ ಸಾರ್ವಜನಿಕ ಆಸ್ಪತ್ರೆಯ ಕಾಮಗಾರಿ ಅಂತಿಮ ಹಂತ ತಲುಪಿದ್ದು, ಅತಿ ಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸಲಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಭರವಸೆ ನೀಡಿದರು.

ಗುರುವಾರ ನಗರದ ಬಿ.ಎಂ. ಬೈಪಾಸ್ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ 31.5 ಕೋಟಿ ರೂ. ವೆಚ್ಚದ ನೂತನ ಆಸ್ಪತ್ರೆಯ ಕಾಮಗಾರಿ ಪ್ರಗತಿಯನ್ನು ವೀಕ್ಷಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೊದಲ ಅವಧಿಯ ಆಡಳಿತದಲ್ಲಿ ಅಂದಿನ ಶಾಸಕ ಎಚ್.ಪಿ. ಮಂಜುನಾಥ್ ಅವರ ವಿಶೇಷ ಕಾಳಜಿಯ ಮೇರೆಗೆ ಈ

ಹೈಟೆಕ್ ಆಸ್ಪತ್ರೆಗೆ ಅನುದಾನ ನೀಡಿ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಆದರೆ, ನಂತರ ಬಂದ ಬಿಜೆಪಿ ಸರ್ಕಾರವು ಅನುದಾನ ಬಿಡುಗಡೆ ಮಾಡದೆ ಯೋಜನೆಯನ್ನು ನನೆಗುದಿಗೆ ತಳ್ಳಿತು. ಇದೀಗ ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ 9.5 ಕೋಟಿ ರೂ. ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗೆ ವೇಗ ನೀಡಿದೆ," ಎಂದು ಸಚಿವರು ವಿವರಿಸಿದರು. ಇನ್ನು 15 ದಿನಗಳಲ್ಲಿ ಕಟ್ಟಡದ ಸಂಪೂರ್ಣ ಕಾಮಗಾರಿ ಪೂರ್ಣಗೊಳ್ಳಲಿದ್ದು, ಅಗತ್ಯವಿರುವ 1.50 ಕೋಟಿ ರೂ. ಅನುದಾನವನ್ನೂ ಶೀಘ್ರದಲ್ಲೇ ಬಿಡುಗಡೆಗೊಳಿಸಲಾಗುವುದು. ಆಸ್ಪತ್ರೆಗೆ ಅಗತ್ಯವಿರುವ ಯಂತ್ರೋಪಕರಣಗಳಿಗೆ ಈಗಾಗಲೇ ಟೆಂಡರ್ ರೆಯಲಾಗಿದೆ. ಮುಂದಿನ ಎರಡು ತಿಂಗಳೊಳಗೆ ಎಲ್ಲಾ ವೈದ್ಯಕೀಯ ಉಪಕರಣಗಳನ್ನು ಅಳವಡಿಸಿ ಪ್ರಾಯೋಗಿಕ ಪರೀಕ್ಷೆ ನಡೆಸಲಾಗುವುದು. ಎಂದು ತಿಳಿಸಿದರು.

ತಜ್ಞವೈದ್ಯರ ಸಂಖ್ಯೆ ದ್ವಿಗುಣ : ಆರೋಗ್ಯ ಕ್ಷೇತ್ರದಲ್ಲಿನ ಬದಲಾವಣೆಗಳ ಕುರಿತು ಮಾಹಿತಿ ನೀಡಿದ ಸಚಿವರು, "ಹಿಂದೆ ತಾಲ್ಲೂಕು ಕೇಂದ್ರಗಳ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆಯಿತ್ತು. ನಾನು ಸಚಿವನಾದ ಮೇಲೆ ಪ್ರತಿ ತಾಲ್ಲೂಕಿನಲ್ಲೂ ತಜ್ಞವೈದ್ಯರ ಸಂಖ್ಯೆಯನ್ನು ದ್ವಿಗುಣಗೊಳಿಸುವ ಗುರಿ ಹೊಂದಿದ್ದು, ಈಗಾಗಲೇ ರಾಜ್ಯದ 141 ತಾಲ್ಲೂಕು ಆಸ್ಪತ್ರೆಗಳಲ್ಲಿ ನುರಿತ ತಜ್ಞರ ನೇಮಕಾತಿ ಪ್ರಕ್ರಿಯೆ ಯಶಸ್ವಿಯಾಗಿದೆ," ಎಂದರು. ಟೆಲಿ-ರೇಡಿಯಾಲಜಿಯ ನೂತನ ಆವಿಷ್ಕಾರ : ರಾಜ್ಯದಲ್ಲಿ ರೇಡಿಯಾಲಜಿಸ್ಟ್‌ಗಳ ಕೊರತೆ ಇರುವುದನ್ನು ಒಪ್ಪಿಕೊಂಡ ಸಚಿವರು, ಈ ಸಮಸ್ಯೆಗೆ ತಾಂತ್ರಿಕ ಪರಿಹಾರ ಕಂಡುಕೊಳ್ಳಲಾಗುತ್ತಿದೆ ಎಂದರು. "ಸಾರ್ವಜನಿಕ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ತೊಂದರೆಯಾಗದಂತೆ 'ಟೆಲಿ-ರೇಡಿಯಾಲಜಿ' ಯೋಜನೆಯನ್ನು ಜಾರಿಗೆ ತರಲು ಚಿಂತನೆ ನಡೆಸಲಾಗುತ್ತಿದೆ. ಇದರಿಂದ ತಾಲೂಕು ಆಸ್ಪತ್ರೆಗಳಲ್ಲಿ ರೇಡಿಯಾಲಾಜಿಸ್ಟ್ ಕೊರತೆಯಿಂದ ಎದುರಾಗಿರುವ ಸಮಸ್ಯೆಗಳಿಗೆ ಪರಿಹಾರ ದೊರೆಯಲಿದೆ.

ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಬೇಡಿಕೆ: ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಅವರು ಸಚಿವರಿಗೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹಳೆಯ ಸಾರ್ವಜನಿಕ ಆಸ್ಪತ್ರೆಯನ್ನು 'ತಾಯಿ ಮತ್ತು ಮಕ್ಕಳ ಆಸ್ಪತ್ರೆ'ಯನ್ನಾಗಿ ಪರಿವರ್ತಿಸಬೇಕು ಎಂದು ಕೋರಿದರು. ಈ ಮೂಲಕ ತಾಲ್ಲೂಕಿನ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಪ್ರತ್ಯೇಕ ಹಾಗೂ ಗುಣಮಟ್ಟದ ಚಿಕಿತ್ಸೆ ದೊರೆಯುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷೆ ಪುಷ್ಪಾ ಅಮರ್‌ನಾಥ್, ತಹಶೀಲ್ದಾರ್ ಮಂಜುನಾಥ್,

ನಗರಸಭಾಯುಕ್ತೆ ಮಾನಸ, ಹುಡಾ ಅಧ್ಯಕ್ಷ ಅಮರ್ ನಾಥ್, ತಾಲೂಕು ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ರಾಘು ಕಲ್ಕುಣಿಕೆ, ಅಕ್ರಮಸಕ್ರಮ ಸಮಿತಿ

ಸದಸ್ಯ ಕುಮಾರ್, ಕಾಂಗ್ರೆಸ್ ನಗರಾಧ್ಯಕ್ಷ ರವಿಪ್ರಸನ್ನ, ಬಿಳಿಕೆರೆ ಬ್ಲಾಕ್ ಅಧ್ಯಕ್ಷ ಪ್ರೇಮ್ ಕುಮಾರ್, ಕಾರ್ಯಧ್ಯಕ್ಷ ಗದ್ದಿಗೆ ದೇವರಾಜ್, ಕಾಂಗ್ರೆಸ್ ಓಬಿಸಿ ಘಟಕದ ಅಧ್ಯಕ್ಷ ವಿ. ಮಹದೇವ್, ರಕ್ಷಾ ಸಮಿತಿ

ಸದಸ್ಯರಾದ ನಿಲುವಾಗಿಲು ಪ್ರಭಾಕರ್, ನಾಗರಾಜು. ಯುವ ಕಾಂಗ್ರೆಸ್ ಅಧ್ಯಕ್ಷ ದರ್ಶನ್, ಉದ್ಯಮಿ ಟಿ.ಕೃಷ್ಣ, ಮುಂಖಡರಾದ ಜಯರಾಮ್, ಸುನೀತ ಜಯರಾಮೇಗೌಡ, ನಾಡಪ್ಪನಹಳ್ಳಿ ದೇವರಾಜ್, ಸೇರಿದಂತೆ ಅನೇಕರು ಹಾಜರಿದ್ದರು

# ಮಹಿಳಾ ಪದವಿ ಪೂರ್ವ ಕಾಲೇಜನಲ್ಲಿ ಖಾಲಿ ಇರುವ ಉಪನ್ಯಾಸಕರು ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

2025–26ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮಹಿಳಾ ಪದವಿ ಪೂರ್ವ ಕಾಲೇಜನಲ್ಲಿ ಖಾಲಿ ಇರುವ ಉಪನ್ಯಾಸಕರು ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅವರು ತಿಳಿಸಿದ್ದಾರೆ. ರಾಜ್ಯದ ಒಟ್ಟು 31 ಜಿಲ್ಲೆಗಳಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಹೊಸ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜುಗಳನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಪ್ರಾರಂಭಿಸಲು ಹಾಗೂ ನಿರ್ವಹಿಸಲು ಅನುಮೋದನೆ ನೀಡಿ ಆದೇಶಿಸಿರುತ್ತಾರೆ. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಅವರು ಯಾದಗಿರಿ ಜಿಲ್ಲೆಯಲ್ಲಿ ಖಬರಸ್ತಾನ್ ಮತ್ತು ದರ್ಗಾ ಷಾ ಜೀವನ್ ಸಾಹೇಬ್ ವಕ್ಫ್ ಸಂಸ್ಥೆಯ ಕಾಲೇಜನ್ನು ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಿದೆ. ಮಹಿಳಾ ಪದವಿ ಪೂರ್ವ ಕಾಲೇಜುನಲ್ಲಿ ಬೋಧಕ, ಬೋಧಕೇತರ ಹುದ್ದೆ ಸಂಖ್ಯೆ ಭೌತಶಾಸ್ತ್ರ ಉಪನ್ಯಾಸಕರು 1 ಹುದ್ದೆ, ಅರ್ಹತೆ ಬಿ.ಎಸ್‌ಸಿ, ಎಮ್. ಎಸ್‌ಸಿ ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ರಸಾಯನಶಾಸ್ತ್ರ ಉಪನ್ಯಾಸಕರು 1 ಹುದ್ದೆ, ಅರ್ಹತೆ ಬಿ.ಎಸ್‌ಸಿ, ಎಮ್. ಎಸ್‌ಸಿ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಗಣಿತಶಾಸ್ತ್ರ ಉಪನ್ಯಾಸಕರು 1 ಹುದ್ದೆ, ಅರ್ಹತೆ ಬಿ.ಎಸ್‌ಸಿ, ಎಮ್‌ಎಸ್‌ಸಿ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಜೀವಶಾಸ್ತ್ರ ಉಪನ್ಯಾಸಕರು 1 ಹುದ್ದೆ, ಅರ್ಹತೆ ಬಿ.ಎಸ್‌ಸಿ, ಎಮ್‌ಎಸ್‌ಸಿ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಕನ್ನಡ ಉಪನ್ಯಾಸಕರು1 ಹುದ್ದೆ, ಅರ್ಹತೆ ಬಿ.ಎ.ಎಮ್.ಎ, ಬಿ.ಎಡ್ ಹೊಂದಿರಬೇಕು. ಆಂಗ್ಲ ಉಪನ್ಯಾಸಕರು 1 ಹುದ್ದೆ, ಬಿ.ಎ ಎಮ್.ಎ, ಬಿ.ಎಡ್, ಹೊಂದಿರಬೇಕು. ಉರ್ದು ಉಪನ್ಯಾಸಕರು 1 ಹುದ್ದೆ, ಬಿ.ಎ, ಎಮ್.ಎ, ಬಿ.ಎಡ್ ಹೊಂದಿರಬೇಕು. ಮಹಿಳಾ ಪದವಿ ಪೂರ್ವ ಕಾಲೇಜನಲ್ಲಿ ಬೋಧಕ, ಬೋಧಕೇತರ ಹುದ್ದೆ ಸಂಖ್ಯೆ ಹಿಂದಿ ಉಪನ್ಯಾಸಕರು 1 ಹುದ್ದೆ, ಬಿ.ಎ, ಎಮ್.ಎ, ಬಿ.ಎಡ್ ಹೊಂದಿರಬೇಕು. ಅರ್ಥಶಾಸ್ತ್ರ ಉಪನ್ಯಾಸಕರು 1 ಹುದ್ದೆ ಬಿ.ಎ, ಎಮ್.ಎ, ಬಿ.ಎಡ್, (ಇಂಗ್ಲೀಷ್ ಮೇಜರ್) ಆಗಿರಬೇಕು. ಇತಿಹಾಸ ಉಪನ್ಯಾಸಕರು 1 ಹುದ್ದೆ ಬಿ.ಎ, ಎಮ್.ಎ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ರಾಜ್ಯಶಾಸ್ತ್ರ ಉಪನ್ಯಾಸಕರು 1 ಹುದ್ದೆ ಬಿ.ಎ, ಎಮ್‌ಎ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಸಮಾಜಶಾಸ್ತ್ರ ಉಪನ್ಯಾಸಕರು 1 ಹುದ್ದೆ ಬಿ.ಎ, ಎಮ್.ಎ, ಬಿ.ಎಡ್ ಹೊಂದಿರಬೇಕು. ವ್ಯವಹಾರ ಅಧ್ಯಯನ ಉಪನ್ಯಾಸಕರು 1 ಹುದ್ದೆ ಬಿ.ಕಾಂ,. ಎಮ್. ಕಾಂ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಲೆಕ್ಕಶಾಸ್ತ್ರ ಉಪನ್ಯಾಸಕರು 1 ಹುದ್ದೆ ಬಿ.ಕಾಂ, ಎಮ್.ಕಾಂ, ಬಿ.ಎಡ್ (ಇಂಗ್ಲೀಷ್ ಮೇಜರ್) ಆಗಿರಬೇಕು. ಯಾದಗಿರಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ ಖಾಲಿ ಇರುವ ಉಪನ್ಯಾಸಕರು ಹುದ್ದೆಗಳಿಗೆ ತಾತ್ಕಾಲಿಕವಾಗಿ ಈ ಅತಿಥಿ ಉಪನ್ಯಾಸಕರು ಹುದ್ದೆಗಳಿಗೆ 2026ರ ಮೇ 22ರ ಒಳಗೆ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಎಸ್. ಎಸ್.ಎಲ್.ಸಿ ಪದವಿ, ಸ್ನಾತಕೋತ್ತರ ಪದವಿ, ಬಿ.ಎಡ್, ಅಂಕಪಟ್ಟಿ ಹಾಗೂ ಆಧಾರ್ ಕಾರ್ಡ್ ಝೆರಾಕ್ಸ್ ಪ್ರತಿಯೊಂದಿಗೆ ಇತ್ತೀಚಿನ ಪಾಸ್ ಪೋರ್ಟ್ ಸೈಜ್‌ನ ಭಾವಚಿತ್ರ ಲಗತ್ತಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ ಸಿ–7, ಮೊದಲನೇ ಮಹಡಿ, ಜಿಲ್ಲಾ ಕಛೇರಿಗಳ ಸಂಕೀರ್ಣ, (ಮಿನಿ ವಿಧಾನ ಸೌಧ) ಚಿತ್ತಾಪೂರ ರಸ್ತೆ, ಯಾದಗಿರಿ ದೂ.ಸಂ. 08473 253235, ಶಹಾಪೂರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.8095971486, ಸುರಪುರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.7795592068, ಯಾದಗಿರಿ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.9731090143ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಲ್ಮೆಟ್ ಜಾಗೃತಿಗಾಗಿ ಬೈಕ್ ಸವಾರಿ ಮಾಡಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಹೆಲ್ಮೆಟ್ ಧರಿಸುವುದು ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ 14: ಜಿಲ್ಲೆಯಲ್ಲಿ ರಸ್ತೆ ಸುರಕ್ಷತೆ ಮತ್ತು ಸಾರ್ವಜನಿಕರ ಜೀವ ರಕ್ಷಣೆಗಾಗಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ನಾಗರಿಕರ ಪ್ರಾಣ ರಕ್ಷಣೆಯು ಕಾನೂನಿನ ಮುಖ್ಯ ಉದ್ದೇಶವಾಗಿದ್ದು, ಸಾರ್ವಜನಿಕರು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆ, ಸಂಚಾರಿ ಪೊಲೀಸ್ ಠಾಣೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಹೆಲ್ಮೆಟ್ ಜಾಗೃತಿ, ಹೆಲ್ಮೆಟ್ ವಿತರಣೆ ಹಾಗೂ ಬೈಕ್ ರ‍್ಯಾಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾನೂನು ಎಂಬುದು ಸಾರ್ವಜನಿಕರ ಹಿತರಕ್ಷಣೆಗಾಗಿ ನಾವೇ ಮಾಡಿಕೊಂಡಿರುವುದು ಎಂಬ ಅರಿವು ಎಲ್ಲರಲ್ಲಿ ಇರಬೇಕು. ಹೆಲ್ಮೆಟ್ ಕಡ್ಡಾಯದಿಂದ ವಿನಾಯಿತಿ ನೀಡುವಂತೆ ಯಾರೂ ಮನವಿ ಮಾಡಬಾರದು. ವಿನಾಯಿತಿ ಕೇಳುವುದು ಎಂದರೆ 'ಜನರ ಪ್ರಾಣ ರಕ್ಷಣೆ ಮಾಡಬೇಡಿ' ಮತ್ತು 'ಕುಟುಂಬದ ಬಗ್ಗೆ ಕಾಳಜಿ ಇಲ್ಲ' ಎಂದು ಹೇಳಿದಂತೆ ಎಂದು ಅವರು ತಿಳಿಸಿದರು.

ಬಳ್ಳಾರಿಯ ಜನರು ಈಗಾಗಲೇ ಸಕಾಲ ಸೇವೆ ಮತ್ತು ಜನಗಣತಿ ಕಾರ್ಯಗಳಲ್ಲಿ ರಾಜ್ಯದಲ್ಲೇ ನಂಬರ್ ಒನ್ ಸ್ಥಾನ ಪಡೆದು ತಮ್ಮ ಇಚ್ಛಾಶಕ್ತಿಯನ್ನು ಸಾಬೀತುಪಡಿಸಿದ್ದಾರೆ. ಅದೇ ರೀತಿ ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸುವ ಮೂಲಕ ಜಿಲ್ಲೆಯ ಹೆಸರನ್ನು ಎತ್ತಿಹಿಡಿಯಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿದ ಬೈಕ್ ಅಪಘಾತಗಳ ಅಂಕಿಅಂಶಗಳು ಆತಂಕಕಾ-ರಿಯಾಗಿದ್ದು, ಪ್ರತಿಯೊಬ್ಬ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮೂಲಕ ತಮ್ಮ ಜೀವ ರಕ್ಷಿಸಿಕೊಳ್ಳಬೇಕು ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯೊಂದರಲ್ಲೇ ಕಳೆದ ಮೂರು ವರ್ಷಗಳಲ್ಲಿ (2023 ರಿಂದ 2026ರ ಏಪ್ರಿಲ್ ವರೆಗೆ) ಬೈಕ್ ಅಪಘಾತಗಳಿಂದಾಗಿ ಒಟ್ಟು 462 ಜನರು ಸಾವನ್ನಪ್ಪಿದ್ದಾರೆ. ಜಿಲ್ಲೆಯಲ್ಲಿ ಸರಾಸರಿ ಪ್ರತಿ ಎರಡು ದಿನಕ್ಕೆ ಒಂದು ಸಾವು ಬೈಕ್ ಅಪಘಾತದಿಂದ ಸಂಭವಿಸುತ್ತಿದೆ. ಅಂದರೆ ವರ್ಷಕ್ಕೆ ಸುಮಾರು 150ಕ್ಕೂ ಹೆಚ್ಚು ಮಂದಿ ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದು ಅಂಕಿ-ಅಂಶ ವಿವರಿಸಿದರು.

ಸಂಚಾರ ನಿಯಮಗಳನ್ನು ಕೇವಲ ದಂಡ ಅಥವಾ ಪೊಲೀಸರ ಭಯಕ್ಕಾಗಿ ಪಾಲಿಸಬಾರದು. ನಮ್ಮ ಶಿರ (ತಲೆ) ಸುರಕ್ಷಿತವಾಗಿದ್ದರೆ ಮಾತ್ರ ದೇಹಕ್ಕೆ ಚೈತನ್ಯವಿರುತ್ತದೆ ಎಂಬುದು ಪ್ರತಿಯೊಬ್ಬರ ಮನವರಿಕೆಯಾಗಬೇಕು. ಹೆಲ್ಮೆಟ್ ಧರಿಸುವುದರಿಂದ ವಿನಾಯಿತಿ ನೀಡಲು ಯಾವುದೇ ಜಿಲ್ಲೆಗಳಿಗೂ ಅವಕಾಶವಿಲ್ಲ. ಉರಿಬಿಸಿಲು ಅಥವಾ ಇತರ ಕಾರಣಗಳನ್ನು ನೀಡುವುದು ಸರಿಯಲ್ಲ, ಇದು ನಮ್ಮ ಮತ್ತು ನಮ್ಮ ಕುಟುಂಬದ ಸುರಕ್ಷತೆಗಾಗಿ ಮಾಡುವ ಸಣ್ಣ ಹೂಡಿಕೆಯಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ಇಂದಿನ ಕಾಲದಲ್ಲಿ ಜನರು ತಾವು ಬಳಸುವ ಬೆಲೆಬಾಳುವ ಮೊಬೈಲ್ ಫೋನ್‌ಗಳಿಗೆ ನೀಡುವಷ್ಟೂ ಸುರಕ್ಷತೆಯನ್ನು ತಮ್ಮ ಜೀವಕ್ಕೆ ನೀಡುತ್ತಿಲ್ಲ ಎಂಬುದು ವಿಷಾದನೀಯ ಸಂಗತಿಯಾಗಿದೆ ಎಂದು ಹೇಳಿದರು.

ಮೊಬೈಲ್ ಕೆಳಗೆ ಬಿದ್ದರೆ ಸ್ಕ್ರೀನ್ ಒಡೆಯಬಾರದು ಎಂದು ಸ್ಕ್ರೀನ್ ಗಾರ್ಡ್ ಹಾಕಿಸುವ ನಾವು, ಅದಕ್ಕಿಂತಲೂ ಅಮೂಲ್ಯವಾದ ನಮ್ಮ ಮೆದುಳು ಮತ್ತು ಜೀವದ ರಕ್ಷಣೆಗೆ ಹೆಲ್ಮೆಟ್ ಧರಿಸಲು ನಿರ್ಲಕ್ಷ ?? ಮಾಡುತ್ತಿದ್ದೇವೆ. ನಾವು ಜೀವಂತವಾಗಿದ್ದರೆ ಮಾತ್ರ ಈ ಜಗತ್ತು ನಮಗೆ ಅಸ್ತಿತ್ವದಲ್ಲಿರುತ್ತದೆ. ರಸ್ತೆ ಅಪಘಾತಗಳಲ್ಲಿ ಪ್ರಾಣ ಕಳೆದುಕೊಂಡರೆ ಅಥವಾ ಗಂಭೀರ ಗಾಯಗಳಾದರೆ ಆ ಕುಟುಂಬ ಅನುಭವಿಸುವ ನೋವು ಮತ್ತು ಸಂಕಷ್ಟಗಳು ಅಪಾರವಾಗಿದೆ ಎಂದರು.

ಬರುವ ಜೂನ್ 1 ರಿಂದ ಜಿಲ್ಲಾದ್ಯಂತ ಹೆಲ್ಮೆಟ್ ಧರಿಸುವುದನ್ನು ಕಡ್ಡಾಯಗೊಳಿಸಲಾಗುವುದು. ನಮ್ಮ ಕುಟುಂಬದವರ, ಸ್ನೇಹಿತರ ಮತ್ತು ನಮ್ಮವರ ಹಿತದೃಷ್ಟಿಯಿಂದ ಪ್ರತಿಯೊಬ್ಬರೂ ಈ ನಿಯಮವನ್ನು ಪಾಲಿಸಿ, ಹೆಲ್ಮೆಟ್ ಧರಿಸುವ ಮೂಲಕ ಅಮೂಲ್ಯವಾದ ಜೀವಗಳನ್ನು ಉಳಿಸೋಣ ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸೆಖೆ ಅಥವಾ ಅಸ್ವಸ್ಥತೆಯ ಕಾರಣ ನೀಡಿ ಹೆಲ್ಮೆಟ್ ಧರಿಸುವುದನ್ನು ಕಡೆಗಣಿಸಬಾರದು. ಸ್ವಲ್ಪ ಸಮಯದ ಅನಾನುಕೂಲಕ್ಕಿಂತ ಪ್ರಾಣ ರಕ್ಷಣೆ ಮುಖ್ಯ. ನಿಮ್ಮ ಮತ್ತು ನಿಮ್ಮ ಕುಟುಂಬದ ಹಿತದೃಷ್ಟಿಯಿಂದ ಹೆಲ್ಮೆಟ್ ಧರಿಸಿ, ಸಂಚಾರಿ ನಿಯಮಗಳನ್ನು ಪಾಲಿಸಿ ಎಂದು ಹೇಳಿದರು.

ಇದಕ್ಕೂ ಮುನ್ನ ಗಣ್ಯರು 'ಹೆಲ್ಮೆಟ್ ಧರಿಸಿ- ಜೀವ ಉಳಿಸಿ' ಎನ್ನುವ ಭಿತ್ತಿಪತ್ರಗಳನ್ನು ಅನಾವರಣಗೊಳಿಸಿದರು. ಬಳಿಕ ಪೌರಕಾರ್ಮಿಕರಿಗೆ, ಸಾರ್ವಜನಿಕರು ಒಳಗೊಂಡಂತೆ 100 ಹೆಲ್ಮೆಟ್‌ಗಳನ್ನು ವಿತರಿಸಲಾಯಿತು.

ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಕುಮಾರ್, ಡಿಎಆರ್ ಡಿಎಸ್ಪಿ ತಿಪ್ಪೇಸ್ವಾಮಿ, ಬಳ್ಳಾರಿ ನಗರ ಡಿಎಸ್ಪಿ ಗೋವಿಂದರಾಜು, ಸಂಚಾರಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ರುದ್ರಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ ಸೇರಿದಂತೆ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

*ಆಕರ್ಷಕ ಬೈಕ್ ರ‍್ಯಾಲಿ:*

ಹೆಲ್ಮೆಟ್ ಜಾಗೃತಿ ಅಂಗವಾಗಿ ನಗರದಲ್ಲಿ ಆಕರ್ಷಕ ಬೈಕ್ ರ‍್ಯಾಲಿ ನಡೆಯಿತು. ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಜಾಗೃತಿ ಅಂಗವಾಗಿ ಸ್ವತಃ ತಾವೇ ಬೈಕ್ ಸವಾರಿ ಮಾಡುವ ಮೂಲಕ ಚಾಲನೆ ನೀಡಿದರು.

ರ‍್ಯಾಲಿಯು ಜಿಲ್ಲಾ ಪೊಲೀಸ್ ಕಚೇರಿಯಿಂದ ಪ್ರಾರಂಭಗೊಂಡು – ದುರ್ಗಮ್ಮ ದೇವಸ್ಥಾನ ರೈಲ್ವೆ ಸೇತುವೆ ಕೆಳ ರಸ್ತೆ–ಯುಬಿ ಸರ್ಕಲ್–ಗಡಿಗಿ ಚೆನ್ನಪ್ಪ ವೃತ್ತ – ಬೆಂಗಳೂರು ರಸ್ತೆ– ತೇರುಬೀದಿ–ಹೆಚ್.ಆರ್. ಗವಿಯಪ್ಪ ವೃತ್ತ–ಅಂಬೇಡ್ಕರ್ ವೃತ್ತ–ಸುಧಾ ಕ್ರಾಸ್– ಇನ್‌ಫೆಂಟ್ರಿ ರಸ್ತೆ–ಎಸ್.ಪಿ ಸರ್ಕಲ್–ದುರ್ಗಮ್ಮ ದೇವಸ್ಥಾನ–ಕೆಇಬಿ ಸರ್ಕಲ್–ಬಸವೇಶ್ವರ ನಗರ–ಎಸ್.ಎನ್ ಪೇಟೆ ಮೇಲು ಸೇತುವೆ–ಕೂಲ್ ಕಾರ್ನರ್–ಡಿಎಆರ್ ಮೈದಾನಕ್ಕೆ ತಲುಪಿ ಮುಕ್ತಾಯಗೊಂಡಿತು.

## ಸಂಭಾಜಿ ಮಹಾರಾಜರು ಧರ್ಮ ರಕ್ಷಕರು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಹಿಂದವಿ ಸಾಮ್ರಾಜ್ಯದ ಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಜೇಷ್ಠ ಸುಪುತ್ರರಾದ ಸಂಭಾಜಿ ಮಹಾರಾಜರು ಧರ್ಮ ರಕ್ಷಕರಾಗಿದ್ದರು ಎಂದು ಪ್ರೌಢಶಾಲಾ ಸಹಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತಾತ್ರಿ ಕಾಟಕರ್ ಹೇಳಿದರು.

ನಗರದ ಶಿವಾಜಿ ವೃತ್ತದಲ್ಲಿ ಆಚರಿಸಿದ ಛತ್ರಪತಿ ಸಂಭಾಜಿ ಮಹಾರಾಜರ ಜಯಂತ್ಯುತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸಂಭಾಜಿ ಮಹಾರಾಜರು ಮರಾಠಾ ಸಾಮ್ರಾಜ್ಯದ ದ್ವಿತೀಯ ಛತ್ರಪತಿಯಾಗಿ ತಮ್ಮ ಆಡಳಿತಾವಧಿಯಲ್ಲಿ ಪ್ರಜೆಗಳ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದರು.ವಿಶೇಷವಾಗಿ ಹಿಂದೂ ಧರ್ಮ ಪರಿಪಾಲನೆ ಮಾಡಿರುವುದರಿಂದ ಅವರನ್ನು 'ಧರ್ಮವೀರ ಚಕ್ರ'ಎಂದು ಕರೆಯಲಾಗುತ್ತದೆ. ಮೋಘಲರ ವಿರುದ್ಧ ಹೋರಾಡಿ ಮೋಘಲ ಸಾಮ್ರಜ್ಯ ಕೊನೆಗಾಣಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿ, ಪ್ರಸ್ತುತವಾಗಿ ನಡೆಯುವ ಜನಗಣತಿಯಲ್ಲಿ ಮರಾಠಾ ಸಮುದಾಯದವರು ನಿಖರವಾದ ಮಾಹಿತಿ ಸಲ್ಲಿಸಿ ಒಗ್ಗಟ್ಟಿನ ಪ್ರದರ್ಶನ ಮಾಡುವುದು ಅಗತ್ಯ ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಜಂಟಿ ನಿರ್ದೇಶಕ ಡಿ.ಜಿ.ಜಗತಾಪ,ರೋಟರಿ ಅಧ್ಯಕ್ಷ ಅಶ್ವಿನ ಭೋಸ್ಲೆ ಪ್ರಮುಖರಾದ ಡಾ.ಗುಂಡೇರಾವ ಶೆಡೋಳೆ,ಗೋಂವಿಂದರಾವ ಬಿರಾದಾರ,ದತ್ತುಕುಮಾರ ಮೇಹಕ್ರೆ,ಡಾ.ವಿಲಾಸ ಕನಸೆ,ಡಾ.ಉದ್ಧವ ಕನಸೆ,ಡಾ.ಶರತ ತುಕದೆ,ಡಾ.ಅನೀಲ ಹಣಪಟ್ಟೆ,ಮನೋಹರ ಬಿರಾದಾರ,ವಿಜಯಕುಮಾರ ಜಗತಾಪ,ಅಮರದೀಪ ಮೊರೆ,ರಾಹುಲ ಸೂರ್ಯವಂಶಿ,ರವಿಕುಮಾರ ಪವಾರ,ಮನೋಜ ಜಾಧವ,ನಿರಂಜಪ್ಪಾ ಪಾತ್ರೆ,ಸತ್ಯವಾನ ಕಾಂಬಳೆ,ವೆಂಕಟ ಬಿರಾದಾರ,ಚಂದ್ರಕಾಂತ ತಳವಾಡೆ,ಜ್ಞಾನೇಶ್ವರ ಬಿರಾದಾರ,ದಯಾನಂದ ಪವಾರ,ದೇವಿದಾಸ ಹಣಪಟ್ಟೆ,ಪ್ರಶಾಂತ ಪವಾರ,ಅಮರ ಬಿರಾದಾರ,ಸಂತೋಷ ಪಾಟೀಲ್,ದೀಪಕ ವಾಡೆಕರ್,ವಿಜಯ ಭೋಸ್ಲೆ,ಡಿಗಂಬರ ಮಾನಕರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿಶ್ವಗುರು ಬಸವಣ್ಣ ಜಯಂತಿ ಅಂಗವಾಗಿ ಮೇ 17ರಂದು ಶರಣರ ಮಹಾಸಂಗಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮೇ.14:ವಿಶ್ವಗುರು, ಸಾಂಸ್ಕೃತಿಕ ನಾಯಕ ಬಸವಣ್ಣನವರ 893ನೇ ಜಯಂತ್ಯೋತ್ಸವ ಅಂಗವಾಗಿ ಪರಿವರ್ತನಾ ಪ್ರತಿಷ್ಠಾನ ಹಾಗೂ ವಿಶ್ವ ಸಾಮರಸ್ಯ ವೇದಿಕೆ ಇವರ ಸಂಯುಕ್ತಾಶ್ರಯದಲ್ಲಿಸೌಹಾರ್ದಯುತ ಮತ್ತು ಸಮಸಮಾಜ ನಿರ್ಮಿಸುವ ಉದ್ದೇಶದಿಂದ "ಶರಣರ ಮಹಾಸಂಗಮ" ಕಾರ್ಯಕ್ರಮವನ್ನು ಮೇ 17, 2026ರಂದು ಬೆಳಿಗ್ಗೆ 10 ಗಂಟೆಗೆ ನಗರದ ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮಹಾಮನೆ ಟ್ರಸ್ಟ್ ಬಸವಕಲ್ಯಾಣದ ಅಧ್ಯಕ್ಷರು ಹಾಗೂ ರಾಷ್ಟ್ರೀಯ ಬಸವ ಪ್ರಶಸ್ತಿ ಪುರಸ್ಕೃತರಾದ ಪೂಜ್ಯ ಡಾ. ಸಿದ್ಧರಾಮ ಬೆಲ್ದಾಳ ಶರಣರು ವಹಿಸಲಿದ್ದಾರೆ. ಸಾನಿಧ್ಯವನ್ನು ಅಲ್ಲಮ ಪ್ರಭು ಸಂಸ್ಥಾನಮಠದ ಪೂಜ್ಯ ಶ್ರೀ ಮಲ್ಲಣ್ಣಪ್ಪ ಮಹಾಸ್ವಾಮಿಗಳುತೋನಸ್ಸನಳ್ಳಿ , ಗುರುಮಾತಾ ನಂದಾತಾಯಿ , ಶ್ರೀ ಗುರದೇವ ತಪೋವನ ಬಿರುವಳ್ಳಿ, ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ ಹರಳಯ್ಯನವರ ಗವಿ ಬಸವಕಲ್ಯಾಣ, ಜ್ಞಾನ ದಾಸೋಹಿ ಜ್ಞಾನೇಶ್ವರ ಮಹಾಸ್ವಾಮಿಗಳು ನಾಗರಾಳ, ಪರಮ ಪೂಜ್ಯ ಶ್ರೀ ಬಳಿರಾಮ ಮಹಾರಾಜರು, ಪರಮ ಪೂಜ್ಯ ಶ್ರೀ ಗುರುರಾಜೇಂದ್ರ ಶಿವಯೋಗಿಗಳು, ಶ್ರೀ ಬಸವ ಮಾಚಿದೇವ, ಶ್ರೀ ಹಜರತ್ ಸೈಯದ ಶಾಹಾ ಮುಸ್ತಾಫ್ ಖಾದ್ರಿ, ಶ್ರೀ ಮೊಹ್ಮದ ಮೌಲಾಲಿ ಮುತ್ತಾ ಹಾಗೂ ಪರಮ ಪೂಜ್ಯ ಶ್ರೀ ಈಶ್ವರಾನಂದ ಪುರಿ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಪರಮ ಪೂಜ್ಯ ಈಶ್ವರಾನಂದ ಪುರಿ ಮಹಾಸ್ವಾಮಿಗಳು ಕಾಗಿನೆಲೆ ಕನಕಗುರುಪೀಠ ಹೊಸದುರ್ಗ ಬೆಂಗಳೂರು ವಿಭಾಗ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಶ್ರೀ ಅರ್ಜುನ ಹತ್ತಿ ಅಧ್ಯಕ್ಷರು ಪರಿವರ್ತನಾ ಪ್ರತಿಷ್ಠಾನ ಇವರು ವಹಿಸುವರು.

ಮುಖ್ಯ ಅತಿಥಿಗಳಾಗಿ ಡಾ. ಫಾರೂಖ ಮಣೂರ, ಪ್ರೋ. ಇಂದಿರಾ ಚಕ್ರಸಾಲಿ, ಜಿ.ಬಿ. ಉಮೇಶ ಸಿ.ಪಿ.ಐ., ಜಗದೇವಪ್ಪ ಪಾಳಾ, ಹಣಮಂತ ಯಳಸಂಗಿ, ಬಾಲಾಜಿ ಘೋಡಕೆ, ಸೂರ್ಯಕಾಂತ ನಿಂಬಾಳಕರ, ಕುಮಾರಿ ಯಶೋಧ ಕಟಕೆ ಪಿ.ಎಸ್.ಐ., ಸುಭಾಶ ಲೋಕನಾಯಕ, ದೇವಯ್ಯ ಗುತ್ತೇದಾರ, ಡಾ. ಎಂ.ಟಿ. ಕಟ್ಟಿಮನಿ, ಮಲ್ಲಿಕಾರ್ಜುನ ಡಿ. ಭಜಂತ್ರಿ, ಮಲ್ಲಿಕಾರ್ಜುನ ಮಡಿವಾಳ, ದೇವಿದಾಸ ಹಾಗೂ ಗೋಪಾಲ ಎಂ.ಪಿ. ಭಾಗವಹಿಸಲಿದ್ದಾರೆ.ವಿಶೇಷ ಉಪನ್ಯಾಸವನ್ನು ದಾವಣಗೆರೆಯ ಸಹಾಯಕ ಪ್ರಾಧ್ಯಾಪಕರಾದ ಡಾ. ವಿಶ್ವನಾಥ ಪಿ. ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಡಾ.ಅಮರಪ್ಪ ಜಂಪಾ, ಯಲಗೊಂಡ ಹಿರೇ ಕುರಬರ್, ಸುಭಾಷ ಎಲ್. ಶಿಕ್ಷಣಕರ್, ಡಾ.ಅಂಬಾದಾಸ ಕಾಂಬಳೆ ಕೆ.ಎ.ಎಸ್., ಸುಖಾನಂದ ಸಿಂಗೆ, ಡಾ. ವೈ.ಎಸ್. ಇಂಗಳೆ, ಪ್ರೋ. ಚಂದ್ರಕಾಂತ ಜಮಾದಾರ, ರವಿಕುಮಾರ ನೀಲೂರೆ ಹಾಗೂ ಅಮರೇಶ ಬಿಲ್ಲವ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರನ್ನು ವಿಶೇಷವಾಗಿ ಸನ್ಮಾನಿಸಲಾಗುವುದು.

ಇದಲ್ಲದೆ ಡಾ. ರವಿ ಕಾಂತಿ ಖ್ಯಾತನಾಳ, ಪ್ರೋ. ಪ್ರಹ್ಲಾದ ಚೆಂಗಟ, ಡಾ. ಸರದಾರ ರಾಯಪ್ಪ, ಡಾ. ಭಗವಂತಪ್ಪ ಬುಳ್ಳಾ, ಡಾ. ವಸಂತ ನಾಶಿ, ಮಹೇಶ ಹೂಗಾರ, ಶಿವಶರಣಪ್ಪ ಮುಳೆಗಾಂವ, ಡಿ.ಬಿ.ಪಾಟೀಲ್, ರಾಜೇಶ ನೀಲಳ್ಳಿ, ಡಾ. ಅಶೋಕ ದೊಡ್ಡಮನಿ, ಡಾ. ಸೈಯ್ಯದ ಇಕ್ಬಾಲ್, ಪ್ರೋ. ಈಶ್ವರ ತಳವಾರ, ರಾಮಚಂದ್ರ ಘೋಡಕೆ, ಡಾ.ಮಲ್ಲಿಕಾರ್ಜುನ ಮುಕ್ಕಾ, ಮಲ್ಲಣ್ಣ ಮಡಿವಾಳ, ವಿಜಯಕುಮಾರ ಕಾಂಬಳೆ, ಬಾಬುರಾವ ಜಮಾದಾರ, ನಿಲಕಂಠ ಜಮಾದಾರ, ಬಸವರಾಜ ಸಪ್ಪನಗೋಳ, ಧರ್ಮರಾಜ ಜವಳಿ, ಪ್ರಭಾಕರ ಸಲಗರೆ, ವಿಜಯಕುಮಾರ ಗುತೆ-ೇದಾರ, ಡಾ. ಭೀಮರಾವ ಅರಕೇರಿ ಸೇರಿದಂತೆ ಅನೇಕ ಗಣ್ಯರು ವಿಶೇಷ ಅಹ್ವಾನಿತರಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸ್ವಾಗತವನ್ನು ಚಂದ್ರಕಾಂತ ತಳವಾರ, ಪ್ರಾಸ್ತಾವಿಕವನ್ನು ಅರ್ಜುನ ಹತ್ತಿ, ನಿರೂಪಣೆಯನ್ನು ಡಾ. ವಾಯ್.ಎಸ್. ವಗ್ಗಿ ಹಾಗೂ ಸಂತೋಷಕುಮಾರ ಆರ್.ಕಟಕೆ ನಡೆಸಲಿದ್ದಾರೆ. ಪ್ರಶಸ್ತಿ ವಿತರಣೆಯನ್ನು ರಾಜೇಂದ್ರ ಕೋರಬ ನೆರವೇರಿಸಲಿದ್ದು, ವಂದನಾರ್ಪಣೆಯನ್ನು ಡಾ. ವಾಯ್.ಎಸ್. ಇಂಗಳೆ ಸಲ್ಲಿಸಲಿದ್ದಾರೆ. ಪರಿವರ್ತನಾ ಕಲಾ ತಂಡದಿಂದ ಪರಿವರ್ತನಾ ಗೀತೆ ಹಾಗೂ ರಾಜಶೇಖರ ಕಡಗನ್ ಅವರಿಂದ ವಚನಗಾಯನ ನಡೆಯಲಿದೆ.

"ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯಾ" ಎಂಬ ಸಂದೇಶದೊಂದಿಗೆ ನಡೆಯಲಿರುವ ಈ ಮಹಾಸಂಗಮಕ್ಕೆ ಸರ್ವರಿಗೂ ಆದರದ ಸ್ವಾಗತ ಕೋರಲಾಗಿದೆ. ಎಂದು ಪರಿವರ್ತನಾ ಪ್ರತಿಷ್ಠಾನ ಹಾಗೂ ವಿಶ್ವ ಸಾಮರಸ್ಯ ವೇದಿಕೆ ಜಂಟಿಯಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 19 ರಂದು ನೇರ ಸಂದರ್ಶನಕ್ಕೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 14 : ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿದಿಂದ 2026ರ ಮೇ 19 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

ಲಾಹೋಟಿ ಮೋರ್ಸ್ ಅ) ಟ್ರೂ ??ವಾಲ್ಯು ಇವಾಲ್ಯುವೇಟರ್ 4 ಹುದ್ದೆಗಳು ಖಾಲಿ ಇದ್ದು, ಹುದ್ದೆಗೆ ಅರ್ಹತೆ ಐಟಿಐ, ಡಿಪ್ಲೋಮ, ಬಿ.ಇ., 20 ರಿಂದ 40 ವರ್ಷ ಪುರುಷ ಅಭ್ಯರ್ಥಿಗಳು ಭಾಗವಹಿಸಬೇಕು. ಕಮರ್ಶಿಯಲ್ ಎಕ್ಸಿಕ್ಯೂಟಿವ್ 2 ಹುದ್ದೆ ಇದ್ದು, ರಿಸೆಪ್ಸನಿಟ್, ಶೊ-ರೂಮ್ ಹೊಸ್ಟ್ 2 ಹುದ್ದೆ ಇದ್ದು, ಬ್ಯಾಕ್ ಎಂಡ್ ಟೆಲಿಕಾಲರ್ 4 ಹುದ್ದೆ ಇದ್ದು, ರಿಲೇಶನಶೀಪ್ ಮ್ಯಾನೇಜರ್ 8 ಹುದ್ದೆ ಇದ್ದು, ಇನ್ಸುರೆನ್ಸ್ ಇಕ್ಸಿಕ್ಯೂಟಿವ್ 1 ಹುದ್ದೆ ಇದ್ದು, ಈ ಹುದ್ದೆಗಳಿಗೆ ಯಾವುದೇ ಪದವಿ ಪಾಸ್ ಆಗಿರಬೇಕು. 20 ರಿಂದ 40 ವರ್ಷ ಪುರುಷ,ಮಹಿಳೆ ಅಭ್ಯರ್ಥಿಗಳು ಭಾಗವಹಿಸಬೇಕು, ಯಾದಗಿರಿ, ಶಹಾಪೂರ, ಕಲಬುರಗಿ, ಜೇವರ್ಗಿ, ಉದ್ಯೋಗ ಸ್ಥಳವಾಗಿದೆ.

ಬಿ.ಎಸ್.ಎಸ್ ಸೊನಾಟಾ ಮೈಕ್ರೋ ಕ್ರೆ. ಲಿ. ನಲ್ಲಿ ಟ್ರೇನಿಂಗ್ ರಿಲೇಶನ್‌ಶಿಪ್ ಆಫೀಸರ್ 30 ಹುದ್ದೆ ಇದ್ದು, ಖಾಲಿ ಇದ್ದು, ಎಸ್.ಎಸ್.ಎಲ್.ಸಿ ಅಥವಾ ಮೇಲ್ಪಟ್ಟು, ಯಾದಗಿರಿ, ಶಹಾಪೂರು, ಸುರಪುರ, ಸೇಡಂ. ಚಿತ್ತಾಪೂರು, ಕಲಬುಗರಿ, ರಾಯಚೂರು, ಉದ್ಯೋಗ ಸ್ಥಳವಾಗಿದೆ. 18 ರಿಂದ 32 ವರ್ಷ ಪುರುಷ,ಮಹಿಳೆ ಆಭ್ಯರ್ಥಿಗಳು ಭಾಗವಹಿಸಬೇಕು, (ಬೈಕ್ ಮತು ಡಿ.ಎಲ್.ಕಡ್ಡಾಯ).

ಕೆ.ಎಮ್.ಎಮ್.ಪಿ.ಯು.ಕಾಲೇಜು ಯಾದಗಿರಿಯಲ್ಲಿ ಉಪನ್ಯಾಸಕರು ಕನ್ನಡ 1 ಉಪನ್ಯಾಸಕರು ಇತಿಹಾಸ 1 ಹುದ್ದೆಗಳಿಗೆ ಅರ್ಹತೆ ಎಂ.ಎ.ಬಿ.ಎಡ್.ಪದವಿಯನ್ನು ಹೊಂದಿರಬೇಕು. ಉಪನ್ಯಾಸಕರು ವ್ಯವಹಾರ ಅಧ್ಯಯನ 1 ಹುದ್ದೆ ಇದ್ದು, ಉಪನ್ಯಾಸಕರು ಲೆಕ್ಕ ಶಾಸ್ತ್ರ 1 ಹುದ್ದೆ ಇದ್ದು, ಎಂ.ಕಾಂ., ಬಿ.ಎಡ್, ಹೊಂದಿರಬೇಕು. ಯಾದಗಿರಿ ಉದ್ಯೋಗ ಸ್ಥಳವಾಗಿದೆ. 21 ರಿಂದ 45 ವರ್ಷ ಒಳಗಿರಬೇಕು,. ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬೇಕು. ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗುವಂತೆ ಈ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ನೇರ ಸಂದರ್ಶನ ನಡೆಯುವ ಹಾಗೂ ಸ್ಥಳ ಹೆಚ್ಚಿನ ಮಾಹಿತಿಗಾಗಿ ಚಿತ್ತಾಪೂರು ರಸ್ತೆ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ-ಬ್ಲಾಕ್ ರೂ.ನಂ.ಬಿ1, ಬಿ2, 2ನೇ ಮಹಡಿ ಯಾದಗಿರಿ ದೂ.ಸಂ.08473253718,ಮೊ.ನಂ.9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನುಮ್ ಅವರಿಗೆ ಭಾವಚಿತ್ರ ನೀಡಿ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ


ನಗರದ ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನುಮ್ ಅವರು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಾಗಿ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಕಚೇರಿ ಸಿಬ್ಬಂದಿಗಳ ವತಿಯಿಂದ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಯಿತು.

ಸಮಾರಂಭದಲ್ಲಿ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಕಾರ್ಯನಿರ್ವಾಹಕ ಎಂಜಿನಿಯರ್ ಎಂ.ಎ. ಖಯೂಮ್, ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಶ್ರೀಧರ್ ಹಾಗೂ ಸಹಾಯಕ ಎಂಜಿನಿಯರ್‌ಗಳಾದ ಶಶಿಕಾಂತ್ ಮತ್ತು ಅನಿಲ್ ಅವರು ಬಿ. ಫೌಝಿಯಾ ತರನ್ನುಮ್ ಅವರಿಗೆ ಭಾವಚಿತ್ರ ನೀಡಿ ಸನ್ಮಾನಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದು, ಫೌಝಿಯಾ ತರನ್ನುಮ್ ಅವರ ಸೇವೆಯನ್ನು ಸ್ಮರಿಸಿ ಅಭಿನಂದಿಸಿದರು.

## ಅಪ್ರಾಪ್ತ ಬಾಲಕಿಯ ಸಾವಿನ ಪ್ರಕರಣ: ಆರೋಪಿ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಔರಾದ(ಬಿ)



ಮೇ 14: ಔರಾದ(ಬಿ) ಪಟ್ಟಣದಲ್ಲಿ ಅಪ್ರಾಪ್ತ ಬಾಲಕಿಯ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದಡಿ ಒಬ್ಬ ಆರೋಪಿತನನ್ನುಬಂಧಿಸಲಾಗಿದೆ ಎಂದು ಬೀದರ ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ದಿನಾಂಕ 08 ಮೇ 2026ರಂದು ಬಾಲಕಿಯ ತಾಯಿ ನೀಡಿದ ದೂರಿನ ಆಧಾರದಲ್ಲಿ ಪ್ರಕರಣದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿತ್ತು. ತನಿಖೆಯ ವೇಳೆ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪಿತನನ್ನು ಪೊಲೀಸರು ದಸ್ತಗಿರಿ ಮಾಡಿದ್ದಾರೆ.ಪ್ರಕರಣದ ಕುರಿತು ಪೋಷಕರಿಂದ ಹೆಚ್ಚಿನ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಅಗತ್ಯವಿರುವ ಎಲ್ಲಾ ಪುರಾವೆಗಳನ್ನು ಕಲೆಹಾಕುವ ಕಾರ್ಯ ಮುಂದುವರಿದಿದೆ. ಇಲಾಖೆಯ ಹಿರಿಯ ಅಧಿಕಾರಿಗಳ ಪರೀವೀಕ್ಷಣೆಯಲ್ಲಿ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಯುತ್ತಿದ್ದು, ನಿಷ್ಪಕ್ಷಪಾತ ಹಾಗೂ ಸಮಗ್ರ ತನಿಖೆ ನಡೆಸಲಾಗುವುದು ಎಂದು ಪೊಲೀಸ್ ಇಲಾಖೆ ಭರವಸೆ ನೀಡಿದೆ.ಅಪ್ರಾಪ್ತ ಬಾಲಕಿಯ ಪ್ರಕರಣವಾಗಿರುವುದರಿಂದ ಯಾವುದೇ ರೀತಿಯ ಊಹಾಪೋಹ, ವದಂತಿ ಅಥವಾ ಅಸತ್ಯ ಮಾಹಿತಿಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಡಬಾರದು ಎಂದು ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ತನಿಖೆಗೆ ಸಹಕಾರಿಯಾಗುವ ಯಾವುದೇ ಸಾಕ್ಷ್ಯಾಧಾರಗಳು ಇದ್ದಲ್ಲಿ ನೇರವಾಗಿ ಪೊಲೀಸ್ ಇಲಾಖೆಯ ಗಮನಕ್ಕೆ ತರಬಹುದು ಎಂದು ತಿಳಿಸಿದ್ದಾರೆ.ಸಾಮಾಜಿಕ ಜಾಲತಾಣಗಳು ಅಥವಾ ಸಾರ್ವಜನಿಕ ವೇದಿಕೆಗಳಲ್ಲಿ ವದಂತಿ ಹರಡಿ ತನಿಖೆಯ ದಿಕ್ಕು ತಪ್ಪಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಎಚ್ಚರಿಕೆ ನೀಡಿದ್ದಾರೆ.

# ಅಕ್ರಮ ಪಡಿತರ ಅಕ್ಕಿ ವಶ



**ಬಳ್ಳಾರಿ:** ತಾಲೂಕಿನ ಮೋಕಾ ಪೊಲೀಸ್ ಠಾಣಾ ವ್ಯಾಪ್ತಿಯ ಕೊರ್ಲಗುಂದಿ ಗ್ರಾಮದಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಸಾರ್ವಜನಿಕ ವಿತರಣೆ ವ್ಯವಸ್ಥೆ (ಪಡಿತರ) ಅಕ್ಕಿಯನ್ನು ಪೊಲೀಸರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ವಶಪಡಿಸಿಕೊಂಡಿದ್ದಾರೆ.

ಗ್ರಾಮದ ಹಾಲು ಬಸವೇಶ್ವರ ದೇವಸ್ಥಾನದ ಸಮೀಪದ ಖಾಲಿ ಜಾಗದಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಅಧಿಕಾರಿಗಳು ದಾಳಿ ನಡೆಸಿದರು. ಈ ವೇಳೆ ಸ್ಥಳದಲ್ಲಿ ವಿವಿಧ ಚೀಲಗಳಲ್ಲಿ ಸಂಗ್ರಹಿಸಿಟ್ಟಿದ್ದ ಸುಮಾರು 27.40 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ಪತ್ತೆ ಹಚ್ಚಿ ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ಅಕ್ಕಿಯ ಅಂದಾಜು ಮೌಲ್ಯ ₹63,480 ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸರ್ಕಾರದ ಬಡಜನರಿಗೆ ವಿತರಿಸಬೇಕಾದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿ ಬೇರೆಡೆ ಸಾಗಣೆ ಮಾಡಲು ಯತ್ನಿಸಲಾಗುತ್ತಿತ್ತು ಎಂಬ ಅನುಮಾನ ವ್ಯಕ್ತವಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ. ಅಕ್ಕಿ ಎಲ್ಲಿಂದ ತರಲಾಗಿತ್ತು, ಇದರಲ್ಲಿ ಯಾರ್ಯಾರು ಭಾಗಿಯಾಗಿದ್ದಾರೆ ಹಾಗೂ ಇದನ್ನು ಯಾವ ಉದ್ದೇಶಕ್ಕಾಗಿ ಸಂಗ್ರಹಿಸಲಾಗಿತ್ತು ಎಂಬ ಕುರಿತು ಮಾಹಿತಿ ಕಲೆಹಾಕಲಾಗುತ್ತಿದೆ. ಕಾರ್ಯಾಚರಣೆಯಲ್ಲಿ ಮೋಕಾ ಪೊಲೀಸ್ ಠಾಣೆಯ ಸಿಬ್ಬಂದಿ ಹಾಗೂ ಆಹಾರ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು. ಪ್ರಕರಣ ಸಂಬಂಧ ಕಾನೂನು ಕ್ರಮ ಜರುಗಿಸಲಾಗುತ್ತಿದ್ದು, ಸರ್ಕಾರದ ಪಡಿತರ ಧಾನ್ಯಗಳನ್ನು ಅಕ್ರಮವಾಗಿ ಸಂಗ್ರಹಿಸುವುದು ಹಾಗೂ ಮಾರಾಟ ಮಾಡುವುದು ಕಾನೂನುಬಾಹಿರ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

## ದಾಂಡೇಲಿ ಸಾರಿಗೆ ಕಾರ್ಯಾಚರಣೆ

**ಕಲಬುರಗಿ:** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ-1ರ ಕಲಬುರಗಿ ಘಟಕ-1 ರಿಂದ ಪ್ರೇಕ್ಷಣೆಯ ಸ್ಥಳಗಳ ವೀಕ್ಷಣೆಗಾಗಿ ಸಾರ್ವಜನಿಕ ಪ್ರಯಾಣಿಕರ ಬೇಡಿಕೆ ಮೇರೆಗೆ ಪ್ರಯಾಣಿಕರ ಅನುಕೂಲಕ್ಕಾಗಿ ಕಲಬುರಗಿಯಿಂದ ದಾಂಡೇಲಿಗೆ 2026ರ ಮೇ 1 ರಿಂದ ನಾನ್ ಎ/ಸಿ ಸ್ಲೀಪರ್ ಸಾರಿಗೆಯನ್ನು ಪ್ರಾರಂಭಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ-ದಾಂಡೇಲಿ-ಕಲಬುರಗಿ (ನಾನ್ ಎ/ಸಿ ಸ್ಲೀಪರ್) ಬಸ್ ಕಲಬುರಗಿ ಬಸ್ ನಿಲ್ದಾಣದಿಂದ ರಾತ್ರಿ 10 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 8.30 ಗಂಟೆಗೆ ದಾಂಡೇಲಿಗೆ ತಲುಪಲಿದೆ. ಅದೇ ರೀತಿ ಈ ಬಸ್ಸು ದಾಂಡೇಲಿ ಬಸ್ ನಿಲ್ದಾಣದಿಂದ ಸಂಜೆ 6.30 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 5 ಗಂಟೆಗೆ ಕಲಬುರಗಿಗೆ ಆಗಮಿಸಲಿದೆ. ಅದೇ ಬಸ್ಸು ವ್ಹಾಯಾ ಜೇವರ್ಗಿ, ಶಹಾಪುರ, ಲಿಂಗಸೂಗುರು, ಕುಷ್ಟಗಿ, ಗದಗ, ಹುಬ್ಬಳ್ಳಿ, ಧಾರವಾಡ ಮಾರ್ಗವಾಗಿ ಸಂಚರಿಸಲಿದೆ.

ಪ್ರಯಾಣಿಕರು ಮುಂಗಡ ಟಿಕೇಟ್‌ಗಳ ಕಾಯ್ದಿರಿಸುವಿಕೆಗಾಗಿ ksrtc.karnataka.gov.in ವೆಬ್‌ಸೈಟ್‌ನ್ನು ಸಂಪರ್ಕಿಸಬೇಕು. ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಪಿಂಚಣಿ ಹಾಗೂ ಜಿ.ಪಿ.ಎಫ್. ಅದಾಲತ್

**ಕಲಬುರಗಿ:** ಖಜಾನೆ ಇಲಾಖೆ, ಮಹಾಲೇಖಪಾಲರ ಕಚೇರಿ ಹಾಗೂ ರಾಜ್ಯ ಸಿವಿಲ್ ಪಿಂಚಣಿ ಪಾವತಿ ಬ್ಯಾಂಕ್‌ಗಳ ಇವುಗಳ ಸಹಯೋಗದೊಂದಿಗೆ ಇದೇ ಮೇ 15 ರಂದು ಬೆಳಿಗ್ಗೆ 11 ಗಂಟೆಗೆ "ಪಿಂಚಣಿ ಅದಾಲತ್" ಕಾರ್ಯಕ್ರಮ ಹಾಗೂ ಅಂದು ಮಧ್ಯಾಹ್ನ 2.30 ಗಂಟೆಗೆ ಜಿ.ಪಿ.ಎಫ್. ಅದಾಲತ್‌ನ್ನು ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯ ವಿ.ಸಿ. ಕೊಠಡಿಯಲ್ಲಿ ವೀಡಿಯೊ ಕಾನ್ಫರೆನ್ಸ್ ಮೂಲಕ ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಖಜಾನೆ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಗೆ ಸಂಬಂಧಿಸಿದ ನಿವೃತ್ತ/ಕುಟುಂಬ ಪಿಂಚಣಿದಾರರು ಮೇಲ್ಕಂಡ ದಿನದಂದು ನಡೆಯುವ ಈ ಅದಾಲತ್ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಕುಂದುಕೊರತೆ ಹಾಗೂ ಅಹವಾಲುಗಳನ್ನು ಚರ್ಚಿಸಿ, ಪರಿಹಾರ ಕಂಡುಕೊಳ್ಳಬಹುದಾಗಿದೆ. ನಿವೃತ್ತ/ಕುಟುಂಬ ಪಿಂಚಣಿದಾರರು ತಮ್ಮ ಅಹವಾಲುಗಳನ್ನು ಒಂದು ದಿನ ಮುಂಚಿತವಾಗಿ ಕಲಬುರಗಿ ಜಿಲ್ಲಾ ಖಜಾನೆ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

## ವಾರಸುದಾರರ ಪತ್ತೆಗೆ ಮನವಿ

**ಕಲಬುರಗಿ:** ಮಾದನಹಿಪ್ಪರಗಾ ಪೊಲೀಸ್ ಠಾಣಾ ವ್ಯಾಪ್ತಿಯ ಮೋಘಾ (ಕೆ) ಗ್ರಾಮದ ಸೀಮಾಂತರ ಆಳಂದ ರಸ್ತೆಯ ಬದಿಯಲ್ಲಿ ದಿನಾಂಕ: 06-05-2026 ರಂದು ಸಂಜೆ ಸಮಯದಲ್ಲಿ ಅಸ್ವಸ್ಥ ಸ್ಥಿತಿಯಲ್ಲಿ ಅಂದಾಜು 35 ರಿಂದ 40 ವರ್ಷದ ವ್ಯಕ್ತಿಯು ಪತ್ತೆಯಾಗಿದ್ದು, ಇವರಿಗೆ ಚಿಕಿತ್ಸೆ ಕೊಡಿಸಲು ಮೋಘಾ (ಬಿ) ಗ್ರಾಮದ ಮಹೇಶ ತಂದೆ ಮಲ್ಲಿಕಾರ್ಜುನ ಪೋಟೆ ಎಂಬುವವರು 108 ಅಂಬ್ಯೂಲೆನ್ಸ್ ಕರೆಯಿಸಿ ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ಸ್ವಲ್ಪ ಮುಂದೆ ಹೋಗುವಷ್ಟರಲ್ಲಿಯೇ ಅವರು ಮೃತಪಟ್ಟಿದ್ದಾರೆ ಎಂದು ಮಾದನಹಿಪ್ಪರಗಾ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕರು ತಿಳಿಸಿದ್ದಾರೆ.

ಮೃತಪಟ್ಟ ವ್ಯಕ್ತಿಯ ಹೆಸರು ಮತ್ತು ವಿಳಾಸ ಮಾಹಿತಿಯು ಲಭ್ಯವಾಗಿಲ್ಲ. ಈ ವ್ಯಕ್ತಿಯು 5.4 ಅಡಿ ಎತ್ತರ, ಗೋಧಿ ಮೈಬಣ್ಣ, ದುಂಡು ಮುಖ ಹೊಂದಿದ್ದು, ತಲೆಯಲ್ಲಿ ಕಪ್ಪು-ಬಿಳಿ ಮಿಶ್ರಿತ ಕೂದಲು ಹಾಗೂ ಬಿಳಿ-ಕಪ್ಪು ಹರಕಲು ಗಡ್ಡ ಇರುತ್ತದೆ. ಕೊರಳಲ್ಲಿ ಕಪ್ಪು ಕಾಶಿದಾರವಿದೆ. ಸದ್ಯ ಶವವನ್ನು ಕಲಬುರಗಿ ಜಿಲ್ಲಾ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ.

ಈ ಮೃತ ವ್ಯಕ್ತಿಯ ಸಂಬಂಧಿಕರು/ವಾರಸುದಾರರು ಯಾರಾದರೂ ಇದ್ದಲ್ಲಿ ಮಾದನಹಿಪ್ಪರಗಾ ಪೊಲೀಸ್ ಠಾಣೆ ಮೊಬೈಲ ಸಂಖ್ಯೆ-9480803566 ಅಥವಾ ಕಲಬುರಗಿ ಜಿಲ್ಲಾ ಕಂಟ್ರೋಲ್ ರೂಮ್ ನಂಬರ್-9480803500 ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಕಡಿಮೆ ವೆಚ್ಚದಲ್ಲಿ ಥಲ್ ಸ್ಸೆಮಿಯಾಗೆ ಚಿಕಿತ್ಸೆ: ಡಾ.ಭುವನೇಶ್ವರಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಕುಮಾರೇಶ್ವರ ಆಸ್ಪತ್ರೆಯಲ್ಲಿ ಥಲಸ್ಸೆಮಿಯಾಗೆ ಕಡಿಮೆ ವೆಚ್ಚದಲ್ಲಿ ಶಸ್ತ್ರ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಡಾ.ಭುವನೇಶ್ವರಿ ಯಳಮಲಿ ಹೇಳಿದರು.

ನಗರದ ಬಿ.ವಿ.ವಿ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದಲ್ಲಿ ನಡೆದ ವಿಶ್ವ ಥಲ್ ಸ್ಸೆ ಮಿಯಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕುಮಾರೇಶ್ವರ ಆಸ್ಪತ್ರೆಯಲ್ಲಿ 100 ಹಾಸಿಗೆಗಳ ಥಲಸ್ಸೆಮಿಯಾ ಘಟಕ ಹೊಂದಿದ್ದು ಕಡಿಮೆ ವೆಚ್ಚದಲ್ಲಿ ಶಸ್ತ್ರ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದರು.

ಭಾರತದಲ್ಲಿ ಅಂದಾಜು ಸರಾಸರಿ 3-4 ಪ್ರತಿಶತ ಬಿ. ಥಲಸ್ಸೆಮಿಯಾ ವಾಹಕಗಳ ಹರಡುವಿಕೆ ಇದೆ. ಹಾನಗಲ್ ಕುಮಾರೇಶ್ವರ ಆಸ್ಪತ್ರೆಯ ಥಲಸ್ಸೆಮಿಯಾ ವಿಭಾಗಕ್ಕೆ ಚಿಕಿತ್ಸೆಗೆ ಎಲ್ಲ ಮಕ್ಕಳಿಗೆ ಗುಣಮಟ್ಟದ ಹಾಗೂ ಕಡಿಮೆ ವೆಚ್ಚದಲ್ಲಿ ಶಸ್ತ್ರ ಚಿಕಿತ್ಸೆಯನ್ನು ನೀಡಲಾಗುತ್ತದೆ. ಈ ವಿಭಾಗದ ಸೇವೆಗಾಗಿ 2022 ರಲ್ಲಿ ಆಸ್ಪತೆಗೆ ಹಾಗೂ ವಿಭಾಗದ ಮುಖ್ಯಸ್ಥರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಬಂದಿದ್ದು ಶ್ಲಾಘನೀಯವಾಗಿದೆ ಎಂದರು.

ಅನುವಂಶಿಕತೆಯಿಂದ ಬರುವ ರಕ್ತದ ಅಸ್ವಸ್ಥತೆಯ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಥಲಸ್ಸೆಮಿಯಾ ದಿನವನ್ನು ಪ್ರತಿ ವರ್ಷ ಆಚರಣೆ ಮಾಡಲಾಗುತ್ತಿದೆ ಜಗತ್ತಿನಾದ್ಯಂತ ಕೋಟ್ಯಾಂತರ ಜನರು ಈ ಖಾಯಿಲೆಯಿಂದ ಬಳಲುತ್ತಿದ್ದು, ಅವರ ಬದುಕಿಗೆ ಬೆಂಬಲವಾಗಿ ನಿಂತು, ನೈತಿಕ ಸ್ಥೈರ್ಯ ತುಂಬುವ ಕೆಲಸದ ಜೊತೆಗೆ ಸೂಕ್ತ ಚಿಕಿತ್ಸೆ ಮತ್ತು ಉತ್ತಮ ಗುಣಮಟ್ಟದ ಆರೋಗ್ಯ ಸೇವೆಗಳ ಲಭ್ಯತೆಯ ಬಗ್ಗೆ ಅರಿವು ಮೂಡಿಸಬೇಕಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬ.ವಿ.ವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯ ಪ್ರಾಚಾರ್ಯ ಡಾ.ದೀಲಿಪ್ ಎಸ್. ನಾಟೇಕಾರ ಮಾತನಾಡಿ, ಆರೋಗ್ಯ ಶುಶ್ರೂಷಕರು ಹಾಗೂ ಆರೋಗ್ಯ ಶುಶ್ರೂಷಾ ಬೋಧಕ ಸಿಬ್ಬಂದಿಗಳು ಸಮುದಾಯಕ್ಕೆ ಭೇಟಿ ನೀಡಿ, ಥಲಸ್ಸೆಮಿಯಾ ರೋಗವನ್ನು ತಡೆಗಟ್ಟುವಿಕೆ, ಗುಣಪಡಿಸುವ ವಿಧಾನಗಳು ಮತ್ತು ಥಲಸ್ಸೆಮಿಯಾ ರೋಗಿಗಳ ಆರೈಕೆಯ ಬಗ್ಗೆ ಹಾಗೂ ಥಲಸ್ಸೆಮಿಯಾ ಬಾಧಿತ ಮಕ್ಕಳಿಗೆ ಸಾಧ್ಯವಾದಷ್ಟು ಉತ್ತಮವಾದ ಆರೈಕೆ ಮತ್ತು ಚಿಕಿತ್ಸೆ ನೀಡುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಉಪಸ್ಥಿತರಿದ್ದ ಎಲ್ಲ ಶುಶ್ರೂಷಾ ಬೋಧಕ ಸಿಬ್ಬಂದಿಗಳು ಹಾಗೂ ನರ್ಸಿಂಗ್ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು.

ಥಲಸ್ಸೆಮಿಯಾ ದಿನದ ಶಿರ್ಷಿಕೆಯ ಕುರಿತು ಎಚ್. ಎಸ್.ಕೆ ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ ಮಾತನಾಡಿ, ಥಲಸ್ಸೇಮಿಯಾ ರೋಗದ ಹೊಸ ಚಿಕಿತ್ಸಾ ವಿಧಾನಗಳು ಮತ್ತು ರೋಗ ನಿಯಂತ್ರಿಸುವ ಕುರಿತು ಅನೇಕ ಸಂಶೋಧನೆಗಳನ್ನು ನಡೆಸುವುದು ಅತ್ಯವಶ್ಯಕವಾಗಿದೆ ಎಂದು ವಿವರಿಸಿದರು.

ಮಹಾವಿದ್ಯಾಲಯದ ಚಿಕ್ಕಮಕ್ಕಳ ಶುಶ್ರೂಷಾ ವಿಭಾಗದ ಮುಖ್ಯಸ್ಥರಾದ ಡಾ. ದಾನೇಶ್ವರಿ ಹಿರೇಮಠ, ಚಿಕ್ಕಮಕ್ಕಳ ಶುಶ್ರೂಷಾ ವಿಭಾಗದ ಪ್ರಾಧ್ಯಾಪಕ ಡಾ.ನಿಂಗನಗೌಡ ಜಿ. ಪಾಟೀಲ, ಡಾ.ಪ್ರಶಾಂತ ಕುಲಕರ್ಣಿ, ಸಂತೋಷ ಸಜ್ಜನ, ಸಹಪ್ರಾಧ್ಯಾಪಕರು, ಚಂದ್ರಾ ಜತ್, ರೇಣುಕಾ ಜಾಲಿಹಾಳ, ರಾಜಶೇಖರ ಕಾಬನೂರ, ಶಿವಾನಂದ ಡಿ. ಮಹಾಂತೇಶಗೌಡ ಹಾಗೂ ಪುಷ್ಪಾ ಉಪಸ್ಥಿತರಿದ್ದರು.

## ಶಾಸನ ಪತ್ತೆ: ಪುರಾತತ್ವ ಅಧಿಕಾರಿಗಳ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ತಾಲೂಕಿನ ನಿಟ್ಟೂರು ಹಾಗೂ ತೆಕ್ಕಲಕೋಟೆ ಪಟ್ಟಣದ 'ಗೌಡ್ರ ಮೂಲೆ' ಪ್ರದೇಶಗಳಲ್ಲಿ ದೊರೆತ ಬಂಡೆಗಲ್ಲು ಶಾಸನ ಸ್ಥಳಕ್ಕೆ ಪುರಾತತ್ಯ ಇಲಾಖೆ ಅಧಿಕಾರಿಗಳ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹಂಪಿ, ಕಮಲಾಪುರದ ರಾಜ್ಯ ಪುರಾತತ್ವ ಇಲಾಖೆಯ ಜಿಲ್ಲಾ ಪುರಾತತ್ವ ಸರ್ವೇಕ್ಷಣಾಧಿಕಾರಿ ಶೇಜೇಶ್ವರ ಆರ್ ನಾಯಕ ಈ ಸಂದರ್ಭದಲ್ಲಿ ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಬಂಡೆಗಲ್ಲು ಶಾಸನದ ವರದಿ ಬಂದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಲಾಗಿದೆ' ಎಂದರು.

ನಿಟ್ಟೂರಿನ ಅಶೋಕನ ಶಿಲಾಶಾಸನದ ಸುಕ್ರದಪ್ಪನ ಬೆಟ್ಟ ಬಳಿಯೇ ರಾಷ್ಟ್ರಕೂಟರ ಒಂದನೇ ಕೃಷ್ಣನ ಕಾಲದ ಈ ಮಹತ್ವದ ದಾಖಲೆ ದೊರೆತಿದೆ. ಅಲ್ಲದೆ ತೆಕ್ಕಲಕೋಟೆಯಲ್ಲಿ ಈಚೆಗೆ ನಡೆದ ಉತ್ಖನನ ಸ್ಥಳದ ಬಳಿಯ ಗೌಡ್ರ ಮೂಲೆಯಲ್ಲಿ ಮತ್ತೊಂದು ಬಂಡೆಗಲ್ಲು ಶಾಸನ ದೊರೆತಿರುವುದು. ಇದು ವಿಜಯನಗರ ಅಥವಾ ಪೂರ್ವದ ವಿಜಯನಗರ ಕಾಲದ ಕೆರೆ ನಿರ್ಮಾಣದ ಶಾಸನ ಎಂದು ತಿಳಿದು ಬಂದಿದೆ ಎಂದು ಸ್ಪಷ್ಟಪಡಿಸಿದರು.

ಬಂಡೆಗಲ್ಲು ಶಾಸನಗಳ ನೆರಳಿಗೆ ಚಾವಣಿ, ನಾಮಫಲಕ, ಸಂರಕ್ಷಣಾ ಕಟ್ಟೆ ಹಾಗೂ ಮಾಹಿತಿ ಫಲಕಗಳನ್ನು ಹಾಕಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

ಈ ಸಂದರ್ಭದಲ್ಲಿ ಪುರಾತತ್ತ ಸಂರಕ್ಷಣೆ ಇಂಜನಿಯರ್ ಜೆ ಸತೀಶ್, ಸಿಬ್ಬಂದಿ ಹಾಗೂ ಇತಿಹಾಸ ಸಂಶೋಧನಾರ್ಥಿ ಮನೋಹರ ಸಿ.ಎಂ ಇದ್ದರು.

## ಮೂಲಸೌಕರ್ಯ ಸಮಸ್ಯೆಗೆ ಪರಿಹಾರ ಶೀಘ್ರ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರ ಶಾಸಕ ನಾರಾ ಭರತ್ ರೆಡ್ಡಿಯವರು ಅವರು ನಗರದ 21ನೇ ವಾರ್ಡ್ ವ್ಯಾಪ್ತಿಯ ಸಿದ್ಧಾರ್ಥ ನಗರ ಜನವಸತಿ ಪ್ರದೇಶಕ್ಕೆ ಗುರುವಾರ ಭೇಟಿ ನೀಡಿ ಸ್ಥಳೀಯರ ಸಮಸ್ಯೆಗಳನ್ನು ಆಲಿಸಿದರು. ರಸ್ತೆ, ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಬೀದಿ ದೀಪ ಹಾಗೂ ನೈರ್ಮಲ್ಯಕ್ಕೆ ಸಂಬಂಧಿಸಿದ ಹಲವು ಸಮಸ್ಯೆಗಳನ್ನು ಪರಿಶೀಲಿಸಿದ ಅವರು, ಸಂಬಂಧಿಸಿದ ಅಧಿಕಾರಿಗಳಿಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಬಹುಕಾಲದಿಂದ ಮೂಲಭೂತ ಸೌಕರ್ಯಗಳ ಕೊರತೆಯಿಂದ ಜನರು ಸಂಕಷ್ಟ ಅನುಭವಿಸುತ್ತಿರುವ ಬಗ್ಗೆ ಸ್ಥಳೀಯರು ಶಾಸಕರ ಗಮನಕ್ಕೆ ತಂದರು. ಕೆಲವು ಬೀದಿಗಳಲ್ಲಿ ರಸ್ತೆ ಹದಗೆಟ್ಟಿದ್ದು, ಮಳೆಯ ಸಮಯದಲ್ಲಿ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಹಲವೆಡೆ ಕುಡಿಯುವ ನೀರಿನ ಸರಬರಾಜು ಸಮರ್ಪಕವಾಗಿಲ್ಲದೆ ನಿವಾಸಿಗಳು ಪರದಾಡುತ್ತಿದ್ದಾರೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಭರತ್ ರೆಡ್ಡಿ, ಜನವಸತಿ ಪ್ರದೇಶಗಳಲ್ಲಿ ಮೂಲಸೌಕರ್ಯ ಒದಗಿಸುವುದು ಆಡಳಿತದ ಆದ್ಯತೆಯಾಗಿದೆ. ರಸ್ತೆ ದುರಸ್ತಿ, ಕುಡಿಯುವ ನೀರಿನ ವ್ಯವಸ್ಥೆ ಸುಧಾರಣೆ, ವಿದ್ಯುತ್ ಕಂಬಗಳಿಗೆ ಸಂಪರ್ಕ ಕಲ್ಪಿಸುವುದು ಹಾಗೂ ಬೀದಿ ದೀಪಗಳ ಅಳವಡಿಕೆ ಸೇರಿದಂತೆ ಅಗತ್ಯ ಕಾಮಗಾರಿಗಳನ್ನು ಶೀಘ್ರ ಆರಂಭಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೈರ್ಮಲ್ಯ ಸಮಸ್ಯೆಗಳ ಕುರಿತು ವಿಶೇಷ ಗಮನ ಹರಿಸುವಂತೆ ಸೂಚಿಸಿದ ಅವರು, ಒಳಚರಂಡಿ ಹಾಗೂ ಕಸದ ವಿಲೇವಾರಿ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಹಂತ ಹಂತವಾಗಿ ಎಲ್ಲಾ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ಶಾರದಾಂಬೆ ಕಾಲೇಜಿನಲ್ಲಿ ವಿಶ್ವ ಶುಶ್ರೂಷಕರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಶಾರದಾಂಬೆ ನರ್ಸಿಂಗ್ ಕಾಲೇಜಿನಲ್ಲಿ ವಿಶ್ವ ಶುಶ್ರುಕರ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಪ್ರವೀಣ್ ಎಸ್. ಪಾಟೀಲ ಮಾತನಾಡಿ, ಶುಶ್ರೂಷಕರು ಭಾರತದ ಆರೋಗ್ಯ ವಿಭಾಗದ ಬೆನ್ನೆಲುಬು, ಸಂಪೂರ್ಣ ಆರೋಗ್ಯ ವ್ಯವಸ್ಥೆಯ ಸಮತೋಲನವನ್ನು ಕಾಪಾಡಿಕೊಳ್ಳುವಲ್ಲಿ ಶುಶ್ರೂಷಕರು ಪ್ರಬಲರಾಗಿದ್ದಾರೆ ಹಾಗೂ ರೋಗಿಗಳ ಸಂಪೂರ್ಣ ಗುಣಮುಖತೆಯಲ್ಲಿ ಶುಶ್ರೂಷಕರು ಪ್ರಮುಖ ಪಾತ್ರವನ್ನು ವಹಿಸುತ್ತಾರೆ ಎಂದು ಹೇಳಿದರು.

ಬೆಳೆಯುತ್ತಿರುವ ಏಐ ಯುಗದಲ್ಲಿ ಲಕ್ಷಾಂತರ ಮಂದಿ ನಿರುದ್ಯೋಗಿಗಳಾಗುತ್ತಿದ್ದಾರೆ ಆದರೆ ನರ್ಸಿಂಗ್ ಉದ್ಯೋಗಕ್ಕೆ ನಮ್ಮ ದೇಶದಲ್ಲಿ ಇನ್ನೂ ಬೇಡಿಕೆ ಹೆಚ್ಚುತ್ತಲೇ ಇದೆ, ಅದಕ್ಕಾಗಿ ನರ್ಸಿಂಗ್ ವಿದ್ಯಾರ್ಥಿಗಳು ಪಣತೊಟ್ಟು ಚೆನ್ನಾಗಿ ಓದಿ ದೇಶ ಸೇವೆ ಕೈಗೊಳ್ಳಬೇಕೆಂದು ಕರೆ ನೀಡಿದರು.

ಮಹಾವಿದ್ಯಾಲಯದ ಅಧ್ಯಾಪಕರಾದ ಸವಿತಾ ಅಂಗಡಿ ಮಾತನಾಡಿ, ನರ್ಸಿಂಗ್ ಎಂಬುದು ಬರಿ ಒಂದು ಉದ್ಯೋಗವಲ್ಲ ಅದು ಕಲಾತ್ಮಕವಾದ ವಿಜ್ಞಾನ ಎಂದು ಬಣ್ಣಿಸಿದರು. ಅದರ ಜೊತೆಗೆ ನರ್ಸಿಂಗ್ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ತುಂಬಿ ತಮ್ಮ ಇಡೀ ಜೀವನವನ್ನು ರೋಗಿಗಳ ಸೇವೆಗೆ ಮುಡಿಪಿಡಲು ಕರೆ ನೀಡಿದರು.

ಅಧ್ಯಾಪಕ ಗುರು ಹಿರೇಮಠ ಮಾತನಾಡಿ, ಬೆಳೆಯುತ್ತಿರುವ ತಂತ್ರಜ್ಞಾನದ ಯುಗದಲ್ಲಿ ಕೂಡ ನರ್ಸಿಂಗ್ ಎಂಬುದು ಭಾವನಾತ್ಮಕವಾದ ಬೆಸುಗೆಯನ್ನು ಬೆಳೆಸುವ ಆರೋಗ್ಯ ವ್ಯವಸ್ಥೆಯ ಕೊಂಡಿಯಾಗಿದ್ದು ರೋಗಿಗಳ ಮತ್ತು ವೈದ್ಯರ ನಡುವೆ ಸೇತುವೆಯಾಗಿದೆ. ನರ್ಸಿಂಗ್ ವಿದ್ಯಾರ್ಥಿಗಳು ತಮ್ಮ ಕಲಿಕಾ ವ್ಯವಸ್ಥೆಯಲ್ಲಿ ಜ್ಞಾನದ ಜೊತೆಗೆ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಶಿಕ್ಷಕ ಶಿಕ್ಷಕೇತರ ಸಿಬ್ಬಂದಿ ಹಾಗೂ ಎರಡು ನೂರಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಸುಪ್ರಿಯಾ ನಿರೂಪಿಸಿದರು. ಜೋಹರಿಯಾ ಸ್ವಾಗತಿಸಿದರು. ಭೂಮಿಕಾ ವಂದಿಸಿದರು.

# ಸಾರ್ವಜನಿಕರ ಜೀವಕ್ಕೆ ಸಂಚಕಾರ ತಂದ ಅಪಾಯಕಾರಿ ತಿರುವು

## ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಜನರ ಆಕ್ರೋಶ





• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ರಾಷ್ಟ್ರೀಯ ಹೆದ್ದಾರಿ 50ರ ದಾದಾರ ಮೇಲಿನಿಂದ ಬೀದರ್ ಕಡೆಗೆ ಹೋಗುವ ರಸ್ತೆ ಮತ್ತು ಔರಾದ್-ಮದನೂರ್ ಕಡೆಗೆ ಸಾಗುವ ರಸ್ತೆಗಳು ಸಂಧಿಸುವ ಸ್ಥಳವು ಈಗ ಅಪಘಾತಗಳ ತಾಣವಾಗಿ ಮಾರ್ಪಟ್ಟಿದೆ. ಎತ್ತರದ ಪ್ರದೇಶದಿಂದ ಕೆಳಭಾಗದ ತಿರುವಿಗೆ ಬರುವ ರಸ್ತೆಯ ಮಧ್ಯೆ ಬೆಳೆದಿರುವ ದಟ್ಟವಾದ ಗಿಡಗಂಟಿಗಳು ಸವಾರರ ಪಾಲಿಗೆ ಕಂಟಕವಾಗಿ ಪರಿಣಮಿಸಿವೆ.

ಈ ತಿರುವಿನ ಕೆಳಭಾಗದಲ್ಲಿ ರಸ್ತೆಯ ಪಕ್ಕದಲ್ಲಿ ಮುಳ್ಳಿನ ಕಂಟಿಗಳು ಅತಿಯಾಗಿ ಬೆಳೆದಿರುವುದರಿಂದ ಆಚೆ ಬದಿಯಿಂದ ಬರುವ ವಾಹನಗಳು ಚಾಲಕರಿಗೆ ಕಿಂಚಿತ್ತೂ ಕಾಣಿಸುತ್ತಿಲ್ಲ. ಎತ್ತರದಿಂದ ಇಳಿಜಾರಿಗೆ ಬರುವ ವಾಹನಗಳು ಮತ್ತು ಕೆಳಗಿನಿಂದ ಮೇಲೆ ಹೋಗುವ ವಾಹನಗಳ ವೇಗ ಸಾಮಾನ್ಯವಾಗಿ ಹೆಚ್ಚಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಎದುರು ಬದಿರು ವಾಹನಗಳು ಹಠಾತ್ತನೆ ಪ್ರತ್ಯಕ್ಷವಾಗುತ್ತಿರುವುದರಿಂದ ಚಾಲಕರು ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಗುವ ಅನೇಕ ಸನ್ನಿವೇಶಗಳು ನಿರಂತರವಾಗಿ ಜರುಗುತ್ತಿವೆ.

**ನಿಯಮ ಬಾಹಿರ ಫಲಕಗಳು ಮತ್ತು ಅಂಗಡಿಗಳ ಹಾವಳಿ:** ರಸ್ತೆಯ ತಿರುವಿನಲ್ಲಿ ಕೇವಲ ಗಿಡಗಂಟಿಗಳು ಮಾತ್ರವಲ್ಲದೆ, ನಿಯಮಗಳನ್ನು ಗಾಳಿಗೆ ತೂರಿ ಅಳವಡಿಸಲಾಗಿರುವ ಬೃಹತ್ ಜಾಹಿರಾತು ಫಲಕಗಳು ಮತ್ತು ಅನಧಿಕೃತ ಅಂಗಡಿಗಳು ಸಂಚಾರ-ಕ್ಕೆ ಮತ್ತಷ್ಟು ಅಡ್ಡಿಪಡಿಸುತ್ತಿವೆ. ಈ ಫಲಕಗಳು ಸವಾರರ ಗಮನವನ್ನು ಬೇರೆಡೆಗೆ ಸೆಳೆಯುವುದಲ್ಲದೆ, ದೃಷ್ಟಿ ಪಥವನ್ನು ಮರೆಮಾಚುತ್ತಿವೆ. ಇದರಿಂದಾಗಿ ಪಾದಚಾರಿಗಳು ಮತ್ತು ದ್ವಿಚಕ್ರ ವಾಹನ ಸವಾರರು ರಸ್ತೆ ದಾಟಲು ಹರಸಾಹಸ ಪಡುವಂತಾಗಿದೆ.

**ಸಾರ್ವಜನಿಕರ ಒತ್ತಾಯ:** "ಈ ತಿರುವಿನಲ್ಲಿ ಜೀವ ಕೈಯಲ್ಲಿ ಹಿಡಿದು ಸಂಚರಿಸಬೇಕಾದ ಸ್ಥಿತಿ ಇದೆ. ಅಧಿಕಾರಿಗಳು ಯಾವುದಾದರೂ ದೊಡ್ಡ ಅನಾಹುತ ಸಂಭವಿಸುವವರೆಗೆ ಕಾಯುತ್ತಿದ್ದಾರೆಯೇ?" ಎಂದು ಸ್ಥಳೀಯ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಸಂಬಂಧಪಟ್ಟ ಅಧಿಕಾರಿಗಳು ಈ ಕೂಡಲೇ ಈ ಕೆಳಗಿನ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ

- ತಿರುವಿನಲ್ಲಿ ಅಡ್ಡಿಯಾಗಿರುವ ಗಿಡಗಂಟಿ ಮತ್ತು ಮುಳ್ಳಿನ ಕಂಟಿಗಳನ್ನು ತಕ್ಷಣ ತೆರವುಗೊಳಿಸಬೇಕು.
- ರಸ್ತೆ ನಿಯಮ ಮೀರಿ ಹಚ್ಚಲಾದ ಜಾಹಿರಾತು ಫಲಕಗಳನ್ನು ಮತ್ತು ಒತ್ತುವರಿ ಅಂಗಡಿಗಳನ್ನು ತೆಗೆದುಹಾಕಬೇಕು.
- ವಾಹನಗಳ ವೇಗ ನಿಯಂತ್ರಣಕ್ಕೆ ವೈಜ್ಞಾನಿಕವಾಗಿ ರಸ್ತೆ ಉಬ್ಬುಗಳನ್ನು ನಿರ್ಮಿಸಬೇಕು.
- ಅಪಘಾತಗಳನ್ನು ತಡೆಗಟ್ಟಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಈ ಕೂಡಲೇ ಎಚ್ಚೆತ್ತುಕೊಂಡು ಕ್ರಮ ಕೈಗೊಳ್ಳಬೇಕಿದೆ.

# ನಿರ್ಗಮಿತ ಜಿಲ್ಲಾಧಿಕಾರಿಗಳಿಗೆ ಆತ್ಮೀಯ ಬೀಳ್ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಳೆದ ಮೂರು ವರ್ಷಗಳ ಕಾಲ ಕಲಬುರಗಿಯಲ್ಲಿ ಸಲ್ಲಿಸಿದ ಸೇವೆ ತಮಗೆ ತೃಪ್ತಿ ನೀಡಿದೆ. ನನ್ನನ್ನು ಉತ್ತಮ ಅಧಿಕಾರಿಯನ್ನಾಗಿ ರೂಪಿಸಿದ ಕಲಬುರಗಿ ಜಿಲ್ಲೆಗೆ ಚಿರಋಣಿಯಾಗಿದ್ದೇನೆ ಎಂದು ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಭಿಪ್ರಾಯಪಟ್ಟರು.

ಬುಧವಾರ ನಗರದ ಡಾ.ಎಸ್.ಎಂ.ಪಂಡಿತ್ ರಂಗಮಂದಿರದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಾಗಿ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಕಚೇರಿ ಸಿಬ್ಬಂದಿಗಳಿಂದ ಆಯೋಜಿಸಿದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಬಸವಣ್ಣನವರ ಕಾಯಕ ತತ್ವವನ್ನು ಅಕ್ಷರಸ ಪಾಲಿಸಿಕೊಂಡು ಜಿಲ್ಲೆಯ ಅಭಿವೃದ್ಧಿಗೆ ಪ್ರಮಾಣಿಕ ಪ್ರಯತ್ನ ಮಾಡಿದ್ದೇನೆ. ಇದಕ್ಕಾಗಿ ಸಹಕಾರ ನೀಡಿದ ಜಿಲ್ಲೆಯ ಜನಪ್ರತಿನಿಧಿಗಳು, ಆಡಳಿತ ವರ್ಗ, ಕಚೇರಿ ಸಿಬ್ಬಂದಿ, ಸಂಘ,-ಸಂಸ್ಥೆಗಳು, ಮಾಧ್ಯಮದವರು, ಸಾರ್ವಜನಿಕರಿಗೆ ಧನ್ಯವಾದ ತಿಳಿಸಲು ಇಚ್ಛೆಪಡುತ್ತೇನೆ ಎಂದರು.

ಜಿಲ್ಲಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದಾಗ ವಿವಿಧ ಇಲಾಖೆ ಯೋಜನೆಗಳ ಪ್ರಗತಿ ಪರಿಶೀಲನೆ ಸಂದರ್ಭದಲ್ಲಿ ಕಲಬುರಗಿ ಜಿಲ್ಲೆ ಕೆಳಗಿನಿಂದ ನೋಡಲಾಗುತ್ತಿತ್ತು. ಜಿಲ್ಲೆಯ ಅಧಿಕಾರಿ ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆ-ಗೆದುಕೊಂಡ ಕೆಲಸ ನಿರ್ವಹಿಸಿದ ಪರಿಣಾಮ ಇಂದು



ಸಕಾಲ್, ನಾಡ ಕಚೇರಿ ಅರ್ಜಿ ವಿಲೇವಾರಿಯಲ್ಲಿ ಟಾಪ್ -5 ರಲ್ಲಿ ಕಲಬುರಗಿ ಜಿಲ್ಲೆ ಕಾಣಬಹುದಾಗಿದೆ. ಪ್ರತಿಯೊಂದು ಇಲಾಖೆಯಲ್ಲಿ ಕೈಲಾದಷ್ಟು ಕೆಲಸ ಮಾಡಿದ ಆತ್ಮ ತೃಪ್ತಿ ಇದೆ. ಉತ್ತಮ ಕಾರ್ಯನಿರ್ವಹಣೆಗೆ ನೀತಿ ಆಯೋಗ ಮೆಚ್ಚುಗೆ ವ್ಯಕ್ತಪಡಿಸಿದೆ. ದಾಖಲೆ ಪ್ರಮಾಣದಲ್ಲಿ ಜಿಲ್ಲೆಯ ಅನ್ನದಾತ ರೈತರಿಗೆ 2,591 ಕೋಟಿ ರೂ. ಬೆಳೆ ವಿಮೆ, ಬರ ಪರಿಹಾರ ಬಿಡುಗಡೆ ಮಾಡಿದ್ದು ಮರೆಯಲಾಗದುಬ ಎಂದರು.

ಜಿಲ್ಲೆಯ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ ಅಡ್ಡೂರು ಶ್ರೀನಿವಾಸುಲು ಅವರ ತುಂಬಾ ಸಹಕಾರ ನೀಡಿದ್ದಾರೆ. ಇದರಿಂದ ಅನೇಕ ಸವಾಲನ್ನು ನಾವು ಸಮರ್ಥವಾಗಿ ಎದುರಿಸಲು ಸಾಧ್ಯವಾಯಿತು.

ಸಿ.ಇ.ಓ ಭಂವರ್ ಸಿಂಗ್ ಮೀನಾ, ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಎಫ್ ಸುಮಿತ್ ಪಾಟೀಲ ಅದಿಯಾಗಿ ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ತಮ್ಮ ಕಚೇರಿಯ ಸಿಬ್ಬಂದಿಗಳು ದೈನಂದಿನ ಆಡಳಿತದಲ್ಲಿ ಮತ್ತು ಜಿಲ್ಲೆಯ ಪ್ರಗತಿಗೆ ಸಹಕಾರ ಸರ್ವರನ್ನು ನೆನೆದ ಬಿ. ಫೌಜಿಯಾ ತರನ್ನುಮ್ ಅವರು, ಇದೇ ರೀತಿಯ ಸಹಕಾರ ನೂತನ ಜಿಲ್ಲಾಧಿಕಾರಿಗಳಿಗೂ ನೀಡಬೇಕೆಂದು ಮನವಿ ಮಾಡಿಕೊಂಡರು.

ಕಲಬುರಗಿ ರೊಟ್ಟಿಗೆ ಬ್ರ್ಯಾಂಡ್ ನೀಡಿದ ಪರಿಣಾಮ ರೊಟ್ಟಿ ವಿದೇಶ ಮಾರಾಟಕ್ಕೆ ಲಗ್ಗೆ ಇಟ್ಟಿದ್ದು, ಇಲ್ಲಿನ ಅನೇಕ ಬಡ ಮಹಿಳೆಯರು ಸ್ವಯಂ ಉದ್ಯೋಗಕ್ಕೆ ಅವರ ಸಬಲೀಕರಣಕ್ಕೆ ಕಾರಣವಾಗಿದೆ. ಕೆಸರಟಗಿಯಲ್ಲಿ ಸುಮಾರು 320 ಬಡವರಿಗೆ ಮನೆ ಹಂಚಿಕೆ ಮಾಡಿದ್ದೇವೆ. ಡಬರಾಬಾದನಲ್ಲಿಯೂ ಮನೆ ಹಂಚಿಕೆಗೆ ಸಿದ್ಧವಾಗಿವೆ. ಕಲಬುರಗಿ ಮೃಗಾಲಯ ಉದ್ಘಾನಟೆಗೆ ಸಿದ್ಧಗೊಂಡಿದೆ ಎಂದು ತಮ್ಮ ಅವಧಿಯಲ್ಲಿ ಕೆಲಸಕಾರ್ಯಗಳನ್ನು ನೆನೆಸಿಕೊಂಡ ಅವರು, ಒಟ್ಟಿನಲ್ಲಿ ಕಲಬುರಗಿಯಲ್ಲಿ ಕೆಲಸ ನಿರ್ವಹಿಸಲು ಅವಕಾದ ಸಿಕ್ಕಿದಕ್ಕೆ ನಾನೇ ಲಕ್ಕಿ ಎಂದರು.

**ಜನಸ್ನೇಹಿ ಆಡಳಿತಕ್ಕೆ ಸಹಕರಿಸಿ:** ನೂತನ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ, ಜಿಲ್ಲಾಡಳಿತ ಮತ್ತು ಸರ್ಕಾರದ ಮೇಲೆ ಜನರ ಅಶೋತ್ತರಗಳು ಬೆಟ್ಟದಷ್ಟಿವೆ. ಅವುಗಳನ್ನು ಪ್ರಮಾಣಿಕವಾಗಿ ಈಡೇರಿಸಬೇಕಾದ ಜವಾಬ್ದಾರಿ ನಮ್ಮ ಮೇಲಿದೆ. ಕಳೆದ 3 ವರ್ಷ ಕಾಲ ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲಾಧಿಕಾರಿಯಾಗಿ ಜಿಲ್ಲೆಯಲ್ಲಿ ಅನೇಕ ಜನಪರ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. ಅಭಿವೃದ್ಧಿಶೀಲ ಜಿಲ್ಲೆಯನ್ನಾಗಿಸಲು ಬಹಳಷ್ಟು ಪ್ರಯತ್ನಗಳಾಗಿವೆ. ಈ ಅಭಿವೃದ್ಧಿಯ ರಥವನ್ನು ಹೀಗೆ ಮುಂದುವರೆಸಲು ನಿಮ್ಮೆಲ್ಲರ ಸಹಕಾರ ಅಗತ್ಯವಿದೆ ಎಂದು ಅಧಿಕಾರಿ ವರ್ಗದಲ್ಲಿ ಮನವಿ ಮಾಡಿಕೊಂಡ ಅವರು, ನಾವೆಲ್ಲರು ಸೇರಿ ಜಿಲ್ಲೆಯ ಜನತೆಗೆ ಜನಸ್ನೇಹಿ ಮತ್ತು ಮಾದರಿ ಆಡಳಿತ ನೀಡೋಣ ಎಂದು ಕರೆ ನೀಡಿದರು.

ನಂತರ ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮತ್ತು ಅವರೊಂದಿಗೆ ಆಗಮಿಸಿ ಅವರ ತಂದೆ-ತಾಯಿಯವರಿಗೆ ಕಚೇರಿ ಸಿಬ್ಬಂದಿಗಳಿಂದ ಫಲ ತಾಂಬೂಲ ಮತ್ತು ಸ್ಮರಣಿಕೆ ನೀಡಿ ಅತ್ಮೀಯವಾಗಿ ಬೀಳ್ಕೊಡಲಾಯಿತು. ಇದೇ ಸಂದರ್ಭದಲ್ಲಿ ನೂತನ ಜಿಲ್ಲಾಧಿಕಾರಿ ಇಕ್ರಮ ಶರೀಫ್ ಅವರಿಗೆ ಹೂಗುಚ್ಛ ನೀಡಿ ಶಾಲು ಹೊದಿಸಿ ಆತ್ಮೀಯವಾಗಿ ಸ್ವಾಗತ ಕೋರಲಾಯಿತು. ಇದಾದ ಬಳಿಕ ವಿವಿಧ ಇಲಾಖೆಯ ಅಧಿಕಾರಿ-ಸಿಬ್ಬಂದಿಗಳು, ಸಂಘ-ಸಂಸ್ಥೆಗಳು, ಸಾರ್ವಜನಿಕರು ನಿರ್ಗಮಿತ ಮತ್ತು ನೂತನ ಡಿ.ಸಿ.ಗಳಿಗೆ ಸನ್ಮಾನಿಸಿ ಶುಭ ಕೋರಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ವರ್ಷಾ ರಾಜೀವ ಜಾನೆ, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಅಯುಕ್ತ ಅವಿನಾಶ ಶಿಂಧೆ, ಡಿ.ಸಿ.ಎಫ್. ಸುಮಿತ್ ಪಾಟೀಲ, ಸಹಾಯಕ ಆಯುಕ್ತರಾದ ಸಾಹಿತ್ಯ ಆಲದಕಟ್ಟಿ, ಪ್ರಭುರೆಡ್ಡಿ, ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತೆ ಪ್ರಮೀಳಾ ಎಂ.ಕೆ., ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಸೇರಿದಂತೆ ಜಿಲ್ಲೆಯ ತಹಶೀಲ್ದಾರರು, ಅನೇಕ ಜಿಲ್ಲಾ ಮಟ್ಟದ ಅಧಿಕಾರಿಗಳು, ಡಿ.ಸಿ ಕಚೇರಿ ಮತ್ತು ಆಪ್ತ ಶಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸ್ವಾಗತಿಸಿದರು. ವಾಣಿ ನಿರೂಪಿಸಿದರು. ತದನಂತರ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರನ್ನು ತೆರೆದ ಕಾರಿನಲ್ಲಿ ಕಾ ಮೆರವಣಿಗೆ ಮೂಲಕ ರಂಗಂದಿರದಿಂದ ಮನೆಯವರಿಗೆ ಬೀಳ್ಕೊಡಲಾಯಿತು.

## ವಿಧಾನ ಸಭಾ ಸದಸ್ಯರಿಂದ ಪ್ರಮಾಣ ವಚನ ಸ್ವೀಕಾರ



**ಬೆಂಗಳೂರು:** ಇತ್ತೀಚೆಗೆ ನಡೆದ ಬಾಗಲಕೋಟೆ ವಿಧಾನ ಸಭಾ ಕ್ಷೇತ್ರ ಹಾಗೂ ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದಿಂದ ಉಪ ಚುನಾವಣೆಯಲ್ಲಿ ವಿಜೇತರಾದ ಉಮೇಶ ಹಲ್ಲಪ್ಪ ಮೇಟಿ ಹಾಗೂ ಸಮರ್ಥ್ ಶಾಮನೂರು ಮಲ್ಲಿಕಾರ್ಜುನ್ ರವರುಗಳು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ವಿಧಾನಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದರು. ಈ ಸಂದರ್ಭದಲ್ಲಿ, ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್, ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ, ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ, ಸಂಸದರಾದ ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

## ಪಿ.ಐ ಪ್ರಕಾಶ್. ಆರ್. ಯಾತನೂರ ಆಗಮನ, ಪ್ರಕಾಶ್ ಮಾಳಿಗೆ ಬೀಳ್ಕೊಡುಗೆ



**ಗಂಗಾವತಿ:** ನಗರ ಪೊಲೀಸ್ ಠಾಣೆಗೆ ನೂತನವಾಗಿ ಆಗಮಿಸಿರುವ ಪಿ.ಐ ಪ್ರಕಾಶ್. ಆರ್.ಯಾತನೂರ ಅವರನ್ನು ತಾಲೂಕಿನ ಗುಜರಿ ಸಂಘದ ತಾಲೂಕು ಅಧ್ಯಕ್ಷ ರಫೀಕ್, ಮಕ್ಬುಲ್ ಹಾಗೂ ಸಂಘದ ಪದಾಧಿಕಾರಿಗಳು ಸನ್ಮಾನಿಸಿ ಆತ್ಮೀಯವಾಗಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು, ಗಂಗಾವತಿ ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ನೂತನ ಪಿಐ ಉತ್ತಮ ಸೇವೆ ಸಲ್ಲಿಸಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ಗಾಂಧಿನಗರ ನಿವಾಸಿ ಹಾಗೂ ದಲಿತ ಸಮಾಜದ ಮುಖಂಡ ಹುಸೇನಪ್ಪ ಪೂಜಾರಿ ಅವರು ಗಂಗಾವತಿ ನಗರ ಠಾಣೆಯಿಂದ ವರ್ಗಾವಣೆಯಾದ ಪಿ.ಐ ಪ್ರಕಾಶ್ ಮಾಳಿ ಅವರನ್ನು ಭೇಟಿಯಾಗಿ ಬೀಳ್ಕೊಟ್ಟರು. ನಗರ ಠಾಣೆಯ ಸಿಬ್ಬಂದಿಗಳು ಕೂಡ ಪ್ರಕಾಶ್ ಮಾಳಿ ಅವರಿಗೆ ಕೈ ಜೋಡಿಸಿ ಶುಭ ಕೋರಿದರು.

ಹಾಗೂ ನೂತನವಾಗಿ ಅಧಿಕಾರ ಸ್ವೀಕರಿಸಿರುವ ಪಿ.ಐ ಪ್ರಕಾಶ್. ಆರ್.ಯಾತನೂರ ಅವರನ್ನು ನಗರ ಠಾಣೆಯ ಸಿಬ್ಬಂದಿ ವರ್ಗ ಆತ್ಮೀಯವಾಗಿ ಬರಮಾಡಿಕೊಂಡರು.

ಇನ್ನೊಂದೆಡೆ, ಗಂಗಾವತಿ ನಗರ ಠಾಣೆಯ ಪಿ.ಐ ಆಗಿದ್ದ ಪ್ರಕಾಶ್ ಮಾಳಿ ಅವರ ವಿಜಯನಗರ ಜಿಲ್ಲೆಗೆ ಆದ ವರ್ಗಾವಣೆಯನ್ನು ರದ್ದುಪಡಿಸಲಾಗಿದ್ದು, ಅವರನ್ನು ಕರ್ನಾಟಕ ಲೋಕಾಯುಕ್ತಕ್ಕೆ ವರ್ಗಾಯಿಸಲಾಗಿದೆ ಎಂದು ತಿಳಿದುಬಂದಿದೆ.

## ಗುಣಮಟ್ಟವಲ್ಲದ ಔಷಧಿಗಳ ನಿಯಂತ್ರಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗುಣಮಟ್ಟವಲ್ಲದ ಔಷಧಿಗಳನ್ನು ಪತ್ತೆಹಚ್ಚಲು ಮತ್ತು ನಿಯಂತ್ರಿಸಲು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆವತಿಯಿಂದ ವಿಶೇಷ ಪೋರ್ಟಲ್ ಅನ್ನು ಅಭಿವೃದ್ಧಿ ಪಡಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ಆರೋಗ್ಯ ಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಗುಣಮಟ್ಟದ ಮಾನದಂಡವನ್ನು ಪೂರೈಸದ (ಎನ್ ಏಸ್ ಕ್ಯೂ) ಔಷಧಗಳನ್ನು ಮಾರುಕಟ್ಟೆಯಲ್ಲಿ ನಿಖರವಾಗಿ ಪತ್ತೆಹಚ್ಚಲು ಮತ್ತು ಎನ್ ಡಿ ಪಿ ಎಸ್ ಔಷಧಗಳ ದುರುಪಯೋಗ ತಡೆಯಲು ಅಭಿವೃದ್ಧಿ ಪಡಿಸಿರುವ ಪೋರ್ಟಲ್ ಗೆ ಚಾಲನೆ ನೀಡಿದ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಈ ಪೋರ್ಟಲ್ ಮೂಲಕ ಸಗಟು ಮತ್ತು ಚಿಲ್ಲರೆ ಔಷಧಿ ಮಳಿಗೆಗಳಲ್ಲಿ ಲಭ್ಯವಿರುವ ಗುಣಮಟ್ಟದ ಮಾನದಂಡವನ್ನು ಪೂರೈಸದ



ಔಷಧಿಗಳ ಬ್ಯಾಚ್ ಗಳನ್ನು ಪತ್ತೆ ಹಚ್ಚಲಾಗುತ್ತದೆ. ಹೀಗೆ ಗುರುತಿಸಲಾದ ಔಷಧಿಗಳ ಮಾರಾಟವನ್ನು ತಕ್ಷಣವೇ ಸ್ಥಗಿತಗೊಳಿಸಲಾಗುವುದು ಎಂದರು.

ವಾರ್ಷಿಕವಾಗಿ 450 ಔಷಧಗಳು ಸರಾಸರಿ ಪ್ರಮಾಣಿತ ಗುಣಮಟ್ಟವನ್ನು ಹೊಂದಿರುವುದಿಲ್ಲ. 2025-26ನೇ ಸಾಲಿನಲ್ಲಿ ರೂ.1.85 ಕೋಟಿ ಔಷಧಿಗಳನ್ನು ಹಿಂಪಡೆಯಲಾಗಿದೆ. ಗುಣಮಟ್ಟವಲ್ಲದ ಔಷಧಿಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡುವಂತಿಲ್ಲ. ತಯಾರಕರು ಮತ್ತು ಸಗಟು ವ್ಯಾಪಾರಿಗಳಿಂದ ಇಂತಹ ಔಷಧಿಗಳು ಪತ್ತೆಯಾದರೆ ಆ ಔಷಧಿಗಳನ್ನು ಹಿಂಪಡೆಯಲಾಗುವುದು ಎಂದರು.

## ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣೆ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರಸಭೆ ಕಾರ್ಯಾಲಯದಲ್ಲಿ ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಆರೋಗ್ಯ ವಿಮೆ ಕಾರ್ಡ್ ವಿತರಣೆ ದಿನಾಂಕ 14-05-2026 ಗುರುವಾರ ರಂದು ನಡೆಸಲಾಯಿತು.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಮತ್ತು ನಗರಸಭೆ ಕಾರ್ಯಾಲಯ, ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಹಾಗೂ ನಿಗಮದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಮುರಳಿ ಅಶೋಕ ಸಾಲಪ್ಪ ರವರ ಅಧ್ಯಕ್ಷತೆಯಲ್ಲಿ ಜರುಗಿತು ನೇರ ಪಾವತಿ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಆರೋಗ್ಯ ವಿಮೆ ಕಾರ್ಡ ವಿತರಣೆ ಯನ್ನು ಮುರಳಿ ಅಶೋಕ ಸಾಲಪ್ಪ ಅವರು ಹಾಗೂ ನಗರಸಭೆ ಆಯುಕ್ತರು ಅಧಿಕಾರಿಗಳು ಸೇರಿದಂತೆ ಪೌರಕಾರ್ಮಿಕರಿಗೆ ವಿಮೇಕಾರ್ಡ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಗರಸಭೆ ಸಿಬ್ಬಂದಿಗಳು ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಪಟ್ಟಣದ ಸ್ಪಂದನಾ ಶಾಲೆಯ ಆವರಣದಲ್ಲಿ ಸ್ಪಂದನಾ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ವತಿಯಿಂದ ದಿ. ಬಸವಂತ್ರಾಯ ಪಾಟೀಲರ ಸ್ಮರಣಾರ್ಥ ಎಸ್ಎಸ್ಎಲ್ಸಿಯಲ್ಲಿ ಸಾಧನೆ ಮಾಡಿದ ನಾಲ್ವರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಹಿರೇಮಠದ ಚನ್ನಬಸವ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ನಡೆದ ಈ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ವಾಮನರಾವ ದೇಶಪಾಂಡೆ, ಇಂದಿನ ಸಮಾಜದಲ್ಲಿ ಬುದ್ಧಿವಂತರಿಗಿಂತ ಒಳ್ಳೆಯ ಗುಣವುಳ್ಳ ಮಕ್ಕಳ ಅವಶ್ಯಕತೆ ಇದೆ. ಮಕ್ಕಳಿಗೆ ಶಿಕ್ಷಣದ ಜೊತೆಗೆ



ಸಂಸ್ಕಾರ ಅತಿ ಮುಖ್ಯ, ಈ ನಿಟ್ಟಿನಲ್ಲಿ ಪಾಲಕರ ಜವಬ್ದಾರಿ ಹಿರಿದಾದ್ದು ಎಂದು ತಿಳಿಸಿದರು.

ದಸರಾ ಉತ್ಸವ ಸಮಿತಿ ಅಧ್ಯಕ್ಷ ಮಹಿಪಾಲರೆಡ್ಡಿ ಡಿಗ್ಗಾವಿ ಮಾತನಾಡಿ, ಮಕ್ಕಳಲ್ಲಿನ ಸುಪ್ತ ಪ್ರತಿಭೆಯನ್ನು ಮೊದಲು ಮನೆಯವರು ಹಾಗೂ ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕು. ಉತ್ತಮ ಪರಿಸರ ಸಿಕ್ಕರೆ ಪ್ರತಿಯೊಬ್ಬ ಮಗುವೂ ಶ್ರೇಷ್ಠ ಸಾಧನೆ ಮಾಡಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ಸಾಧಕ ವಿದ್ಯಾರ್ಥಿಗಳಾದ ಶ್ವೇತಾ ಹಾಲಗಡ್ಲಿ, ಬದಿಹಾ ಅಫಾಫ್ ವಡಕೇರಿ, ನಿಶಾದ್ ವಡಕೇರಿ ಹಾಗೂ ಮಹದ್ ಏಜಾಜ್ ಅವರಿಗೆ ತಲಾ 5 ಸಾವಿರ ರೂ. ನಗದು ಹಾಗೂ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಡಿ. ಸಿ. ಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಮುದಿಗೌಡ ಮಾಲಿಪಾಟೀಲ, ಮಡಿವಾಳಪ್ಪಗೌಡ ಪೊಲೀಸ ಪಾಟೀಲ, ಗುಂಡುಗೌಡ ಯಾಳಗಿ, ಸಂಗಣ್ಣ ತುಂಬಗಿ, ಸಾಹೇಬಲಾಲ ಅಂದೇಲಿ, ವಿಕಾಸ ಸೊನ್ನದ, ಸಂಗಣ್ಣ ಎಮ್ ತುಂಬಗಿ ಹಾಗೂ ಮಧು ಬಂದೆ ಉಪಸ್ಥಿತರಿದ್ದರು. ಬಂದೇನವಾಜ ನಾಲತ್ವಾಡ ಕಾರ್ಯಕ್ರಮ ನಡೆಸಿಕೊಟ್ಟರು. ಸುಗೂರಯ್ಯ ಇಂಡಿ ಸ್ವಾಗತಿಸಿದರು ಮತ್ತು ರೇವಣಸಿದ್ದಯ್ಯ ಮಠ ವಂದಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಪಾಲಕರು ಸೇರಿದಂತೆ ದಸರಾ ಉತ್ಸವ ಸಮಿತಿ ಗೆಳೆಯರ ಬಳಗ ಇತರರು ಭಾಗವಹಿಸಿದ್ದರು.

## ಶಿವಶರಣರ ಕಾಯಕ ತತ್ತ್ವ, ಸೂಫಿಗಳ ಹಲಾಲ್‌ನ ಮಹತ್ವ



ಧರ್ಮ-ಮರ್ಮ

● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ಇಸ್ಲಾಂಧರ್ಮದ ಖ್ಯಾತ ಸಂಶೋಧಕ ಅಜೀಜ್ ಅಹ್ಮದನು ಈ ಕುರಿತು ಪ್ರತಿಕ್ರಿಯಿಸಿ, 'ಹಿಂದೂ ಮುಸಲ್ಮಾನರ ಐಕ್ಯತೆಗಾಗಿ ಶ್ರಮಿಸುವ ಕಲೆ ಎಂದರೆ ಕೇವಲ ಸಂಗೀತ ಒಂದೇಯಾಗಿದೆ. ಸಂಗೀತ ಸಭೆಗಳಲ್ಲಿ ಹಿಂದುಗಳ ಪ್ರಭಾವವು ಸೂಫಿಗಳ ಮೇಲೆ ಉಂಟಾಗಿರಲು ಸಾಧ್ಯವಿದೆ,' ಎಂದಿದ್ದಾನೆ. ಹಲವರ ಸಾಹಿತ್ಯ ರಚನೆಯಲ್ಲಿ ವಾಸನೆ, ಮೃಡ, ಚರಣ, ಭೋಗವಿಲಾಸ ದಂಥ ಪದಗಳ ಬಳಕೆಯನ್ನು ಕಾಣಬಹುದು. ಕಾಕತೀಯ ಅರಸಿ ರುದ್ರಮ್ಮನ ಆಡಳಿತಾವಧಿಯಲ್ಲಿ ಸಂತ ಜ್ಞಾನೇಶ್ವರರ, ತಂಗಿಮುಕ್ತಾ ಮತ್ತು ನಾಮದೇವ ಮುಂತಾದವರು ಮರಾಠಿಯಲ್ಲಿ ಭಕ್ತಿಸಾಹಿತ್ಯವನ್ನೂ ನಿರ್ಮಿಸಿದ್ದಾರೆ. ಭಾರತದ ಪ್ರಖ್ಯಾತ ಸೂಫಿ ಸಂತ ಕವಿ ಅಮೀರ್ ಖುಸ್ರೋ ಈ ಮರಾಠಿ ಸಂತರ ಸಂಪರ್ಕದಲ್ಲಿ ಒಂದೆರಡು ವರ್ಷಗಳ ಕಾಲ ಇದ್ದುದಾಗಿ ತಿಳಿದು ಬರುತ್ತದೆ. ಕಾಕತೀಯರಲ್ಲೂ ವೀರಶೈವರಿದ್ದುದರಿಂದ ಬಸವಾದಿ ಶರಣರ ಭಕ್ತಿಯ ಪರಿಮಳ ಅಲ್ಲೆಲ್ಲಾ ಹರಡಿರಲಿಕ್ಕೂ ಸಾಕು. ಈ ಕಾರಣಕ್ಕೆ ಮರಾಠಿ ಸಂತರು, 'ಕಾನಡೀಚ-ಬಸವಂತ' ಎಂದು ಬಸವಣ್ಣನವರ ಭಕ್ತಿಯನ್ನು ಕೊಂಡಾಡಿದ್ದಾರೆ. ಸಂತಜ್ಞಾನೇಶ್ವರನ ಅಭಂಗಗಳಲ್ಲೂ ಕನ್ನಡ ಪದಗಳ ಬಳಕೆಯಾಗಿರುವುದು ವಿಶೇಷ. ಶಿಶುನಾಳ ಶರೀಫ, ಚೆನ್ನೂರುಜಲಾಲ ಸಾಹೇಬರಂತಹ ತತ್ವಪದಕಾರರ ಸಂಖ್ಯೆ ಕರ್ನಾಟಕದಲ್ಲಿ ಬಹಳಷ್ಟಿದೆ. ಹಿಂದೂಗಳ ಗುಡಿಗುಂಡಾರಗಳಲ್ಲಿ ಭಜನೆಗಳಲ್ಲಿ ಇವರ ಅನುಭಾವ ಪದಗಳನ್ನೂ ಈಗಲೂ ಹಾಡುತ್ತಾರೆ. ಭಕ್ತಿ ಸಂಗೀತಕ್ಕೆ ಕುಲವೆಂಬುದೇ ಇಲ್ಲ. ಚಿಶ್ತಿ ಪರಂಪರೆಯ ಗುಲಬರ್ಗಾದ ಕ್ವಾಜಾಬಂದೇನವಾಜರ ಉರುಸ್(ಜಾತ್ರೆ) ಅಥವಾ ಇತರ ಪವಿತ್ರ ದಿನಗಳಲ್ಲಿ ಭಕ್ತಿಸಂಗೀತ ಸಭೆ(ಸಮಾ-ಖವ್ವಾಲಿ) ನಡೆಯುವುದು ಇಂದಿಗೂ ಇದೆ. ಲಯ, ಆಧ್ಯಾತ್ಮದ ನೆಲೆ, ಭಕ್ತಿಯ ಪರವಶತೆಯಿಂದಾಗಿ ಸಮಾ-ಕವ್ವಾಲಿಯು ಭಜನೆಯನ್ನು ಹೋಲುತ್ತವೆ. ಮಾತ್ರವಲ್ಲ, ಸರ್ವಧರ್ಮ ಸಮನ್ವಯತೆ ದೃಷ್ಟಿಯಿಂದ ಶಿವಶರಣರ ವಚನಗೋಷ್ಠಿಗಳು, ಭಜನೆ, ಸೂಫಿಸಂತರ ಸಮಾ-ಖವ್ವಾಲಿಗಳು ರಾಷ್ಟ್ರೀಯ ಭಾವೈಕ್ಯತೆಯ ಕೇಂದ್ರಗಳಾಗಿದ್ದು ಪರಸ್ಪರ ಭಾವ ಸಾಮೀಪ್ಯದಿಂದ ಕೂಡಿವೆ. ಸೋಫಿಷಾಹ್ ಅಬ್ದುಲ್‌ಲತೀಫ್ ಅವರ ಅನುಭಾವ ಸಾರುವ ಪದ್ಯವನ್ನು ಒಂದು ಉದಾಹರಣೆಯಾಗಿ ಗಮನಿಸಬಹುದು;

'ಚಟ್ಟಾನೋಂಸೆಮತ್ ಟಕ್ರಾವೋ, ಒಹ್ ತುಮ್ಹಾರೆ ಬಾತಿನ್ ಮೇಹೀ ಪೋಷಿದಾಹೈ ಗೈರಸೆನಜಾತ್ ಹಾಸಿಲ್ ಕರಕೆ ಮೆಹೆಬೂಬ್‌ಕೊ ಅಪ್ನೆ ಬಾತಿನ್ ಮೇಹಿ ತಲಾಷ್‌ಕರೊ..!'1 ಅಂದರೆ; 'ಶಿಲೆಗಳಿಗೆ ಶಿರವ ಹಾಯದಿರು, ಅವನು ನಿನ್ನೊಳಗಿಹನು. ಪರ-ರಿಂದ ಮುಕ್ತನಾಗು, ನಿನ್ನ ಇನಿಯನನ್ನು ನಿನ್ನೊಳಗೇ ಹುಡುಕು' ಎನ್ನುವಂಥ ಮಾತುಗಳು ಶರಣರ ತತ್ವಗಳಿಗೆ ತೀರಹತ್ತಿರವಾಗಿದೆ. ದೇಹ, ಮನಸಿನ ಕ್ರಿಯೆ, ದೈವ ಸೃಷ್ಟಿಯ ಅರಿವಿಗೆ ಹತ್ತಿರವಾಗುವಂತಹ ಹಿಂದೂ ಅನುಭಾವದ ತತ್ತ್ವ ಇದರಲ್ಲಿ ಅಡಗಿದೆ.

**ಶಿವಶರಣರ ಕಾಯಕ ತತ್ತ್ವ ಹಾಗೂ ಸೂಫಿಗಳ ಹಲಾಲ್‌ನ ಮಹತ್ವ:** ಈ ಎರಡೂ ಒಂದೇ ಅರ್ಥವನ್ನು



ಕೊಡುತ್ತವೆ. ಇವೆರಡರ ಕ್ರಿಯೆ, ಕಲ್ಪನೆ ಒಂದೇಯಾಗಿದೆ. ಆದರೂ ಕಾಯಕತತ್ತ್ವವೂ ಗಾಂಭೀರ್ಯದೆಡೆಗೆ ನಮ್ಮನ್ನು ನಡೆಸಿಕೊಂಡು ಸಾಗಲು ಸಹಕಾರಿ. ಕಾಯಕದಲ್ಲಿಯೇ ಶರಣರು ಕೈಲಾಸವನ್ನು ಕಂಡಿದ್ದು, ಬಸವಣ್ಣನವರು ಕೂಡ ಕಾಯಕವೇ ಕೈಲಾಸ ಎಂದಿದ್ದನ್ನು ಇಲ್ಲಿ ಸ್ಮರಿಸಬಹುದು. ಸೂಫಿಗಳು ಕಟ್ಟುನಿಟ್ಟಿನಿಂದ ಪಾಲಿಸುವ ಹಲಾಲ್ ತತ್ತ್ವವು ಪವಿತ್ರ ಖುರಾನ್ ಆಧಾರಿತ. ಕುರಾನಿನ ಎರಡನೇ ಅಧ್ಯಾಯದ 168ನೇ ವಚನ ಶುದ್ಧ ವಸ್ತುಗಳನ್ನು ತಿನ್ನುವ ಆಜ್ಞೆಯನ್ನು ತಿಳಿಸುತ್ತದೆ. ಎರಡನೇ ಅಧ್ಯಾಯದ 172ನೇ ವಚನವು 'ಓ ಸತ್ಯ ವಿಶ್ವಾಸಿಗಳೇ, ನೀವು ನಿಜವಾಗಿಯಾ ಅಲ್ಲಾಹ್‌ನ ದಾಸ್ಯ ಆರಾಧನೆಯನ್ನೇ ಮಾಡುವವರಾದರೆ, ನಾವು ನಿಮಗೆ ಒದಗಿಸಿರುವ ಶುದ್ಧವಸ್ತುಗಳನ್ನು ನಿರಾತಂಕವಾಗಿ ಸೇವಿಸಿ. ಅಲ್ಲಾಹ್‌ನಿಗೆ ಕೃತಜ್ಞತೆ ಸಲ್ಲಿಸಿರಿ,' ಎಂದು ವಿವರಿಸುತ್ತದೆ. ಇನ್ನೊಂದು ಅಧ್ಯಾಯದಲ್ಲಿ, 'ನೀವು ನಿಮ್ಮ ಸಂಪತ್ತನ್ನು ಪರಸ್ಪರ ಅನುಚಿತ ರೀತಿಯಿಂದ ಕಬಳಿಸಬಾರದು. ನಿಮಗೆ ಇತರರ ಸಂಪತ್ತಿನ ಒಂದಂಶವನ್ನು ಉದ್ದೇಶ ಪೂರ್ವಕವಾಗಿ ಆಕ್ರಮರೂಪದಿಂದ ಕಬಳಿಸುವ ಸಂದರ್ಭ ಸಿಗುವಂತೆ ಅವುಗಳನ್ನು ಅಧಿಕಾರಿಗಳ ಮುಂದೆ ಸಮರ್ಪಿಸಬಾರದು,' ಎನ್ನುತ್ತದೆ. ದುಡಿಯದೆ ಸಿಗುವ ಸಂಪತ್ತು ಅನ್ಯರಿಗೆ ಸೇರಿದ್ದು ಎಂದು ನಿಮಗೆ ಚೆನ್ನಾಗಿ ತಿಳಿದಿರುವಾಗ ಅವನ ಬಳಿ ತನ್ನ ಸೊತ್ತಿನ ಬಗ್ಗೆ ಯಾವುದೇ ಅಧಿಕಾರವಿಲ್ಲ. ಹೇಗಾದರೂ ಮಾಡಿ ಅದನ್ನು ಕಬಳಿಸಲು ನಿಮಗೆ ಸಾಧ್ಯವಿದೆ ಎಂಬ ಕಾರಣಕ್ಕಾಗಿ ಅದರ ಮೊಕದ್ದಮೆಯನ್ನು ನ್ಯಾಯಾಲಯಕ್ಕೆ ಕೊಂಡೊಯ್ಯದಿರಿ. ನ್ಯಾಯಾಧೀಶರು ಮೊಕದ್ದಮೆಯ ವಿವರಗಳನ್ನು ನೋಡಿ ಸಂಪತ್ತನ್ನು ನಿಮಗೆ ಒದಗಿಸಲೂಬಹುದು. ಆದರೆ ಅದೆಂದೂ ನಿಮ್ಮ ನ್ಯಾಯ ಸಮ್ಮತ ಸೊತ್ತಾಗದು. ಸ್ವತಃ ದುಡಿಯದೆ ಪರರ ದುಡುಮೆಯಿಂದ ಬಂದುದನ್ನು ಉಣ್ಣುವುದು ಹರಾಮ್ ಎನ್ನುತ್ತದೆ ಕುರಾನ್. ಹರಾಮ್ ಎಂದರೆ ನಿಷೇಧಿತ ಗಳಿಕೆ, ನಿಷೇಧಿತ ಆಹಾರ. ಒಟ್ಟಾರೆಯ ತಾತ್ಪರ್ಯ; ಶರಣರ ಪ್ರಕಾರ, ಕಾಯಕ ಮಾಡಿ ಉಣ್ಣಬೇಕು. ಶ್ರಮದಿಂದಲೇ ಶ್ರೇಷ್ಠ ಜೀವನ ಸಾಧ್ಯ. ಅನ್ಯರ ಸಂಪತ್ತು ನ್ಯಾಯೋಚಿತವಲ್ಲ. ಸೂಫಿಗಳ ಹಾಲಾಲ್ ತತ್ತ್ವವೂ ಇದಕ್ಕೆ ಪೂರಕ.

ಸೂಫಿಗಳು ಸತ್ಯ, ಪ್ರಾಮಾಣಿಕ ದುಡುಮೆಗೆ ಒತ್ತು ನೀಡುತ್ತಾರೆ. ಪರಿಶುದ್ಧ ಆಹಾರವನ್ನೇ ಸೇವಿಸುತ್ತಾರೆ. ದೇವಮಾರ್ಗದಲ್ಲಿ ಖರ್ಚು ಮಾಡುವುದನ್ನು ಇನ್‌ಫಾಕ್ ಎಂದು ಕರೆಯುತ್ತಾರೆ. ಧಾರ್ಮಿಕ ವ್ಯವಸ್ಥೆಯಲ್ಲಿ ದಾನಕ್ಕೆ ಮಹತ್ವ ಇದೆ. ಹಲಾಲ್, ಝಕಾತ್ ಮತ್ತು ಇನ್‌ಫಾಕಗಳು ಕಾಯಕ, ದಾಸೋಹದ ಕಲ್ಪನೆಗೆ ಇಂಬುನೀಡುತ್ತವೆ. ದುಡಿಯದೇ ಬಂದ ಸಂಪಾದನೆ ಶಿವಶರಣರ ದೃಷ್ಟಿಯಲ್ಲೂ ಪರಮ ಅಪರಾಧ. ಶಿವಶರಣರ ಕಲ್ಪನೆಯ ಶ್ರೇಷ್ಠ ಕಾಯಕದ ಧ್ವನಿ ಸೃಷ್ಟಿ ಇರುವವರೆಗೂ ಸಾಕ್ಷಿಯಾಗಿ ನಿಲ್ಲುತ್ತದೆ. ಕಾಯಕದ ಗಾಂಭೀರ್ಯವನ್ನು ಶಿವಶರಣರ ವಚನಗಳಿಂದಲೇ ಅರಿಯಬೇಕು.

**ಮುಂದುವರೆಯುವುದು...**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)